23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 318 | ನವದೆಹಲಿ | ಬೆಲೆ ₹10 | ಮೇ 24 2026, ಭಾನುವಾರ

## ಒಳಪುಟಗಳಲ್ಲಿ



ಮೊದಲ ಬಾರಿಗೆ ರಾಜ್ಯಕ್ಕೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಭೇಟಿ- ಪಕ್ಷ ಸಂಘಟನೆ, ಪ್ರಸ್ತುತ ರಾಜಕೀಯ ಸ್ಥಿತಿ, ಜಿಬಿಎ ಚುನಾವಣೆ ಸೇರಿ ಹಲವು ವಿಷಯಗಳ ಕುರಿತು ಪಕ್ಷದ ನಾಯಕರೊಂದಿಗೆ ಚರ್ಚೆ ಸಾಧ್ಯತೆ - ಪು.5

ಕೆಪಿಎಸ್ ಶಿಕ್ಷಣದ ಕುರಿತು ಸಾಹಿತಿ ದೇವನೂರು ಮಹದೇವ ಸಲಹೆ ಪಡೆದ ಸಚಿವ ಮಧು ಬಂಗಾರಪ್ಪ - ಪು.6

# ಜಾಗತಿಕ ವಿಷಯಗಳಲ್ಲಿ ಅಮೆರಿಕ ಜತೆ ನಿಕಟ ಸಮನ್ವಯಕ್ಕೆ ಭಾರತ ಬದ್ಧ

### ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಜತೆ ಪ್ರಧಾನಿ ನರೇಂದ್ರ ಮೋದಿ ಸಭೆ

**ನವದೆಹಲಿ, ಮೇ 23: ಪಶ್ಚಿಮ ಏಷ್ಯಾ ಹಾಗೂ ಇಂಡೋ–ಪೆಸಿಫಿಕ್ ಪ್ರಾಂತ್ಯದ ಬೆಳವಣಿಗೆ ಸೇರಿ ಪ್ರಮುಖ ಪ್ರಾದೇಶಿಕ ಮತ್ತು ಜಾಗತಿಕ ಸವಾಲುಗಳ ಮೇಲಿನ ಸಹಕಾರ ಹೆಚ್ಚಿಸುವ ನಿಟ್ಟಿನಲ್ಲಿ ಭಾರತ – ಅಮೆರಿಕ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ.**

ಭಾರತಕ್ಕೆ ಭೇಟಿ ನೀಡಿರುವ ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ಸುದೀರ್ಘ ಮಾತುಕತೆ ನಡೆಸಿದರು. ಉಭಯ ದೇಶಗಳ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯಲ್ಲಿನ ನಿರಂತರ ಪ್ರಗತಿ ಮತ್ತು ಪ್ರಾದೇಶಿಕ ಹಾಗೂ ಜಾಗತಿಕ ಶಾಂತಿ ಮತ್ತು ಭದ್ರತೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಿದ್ದಾಗಿ ಮೋದಿ ತಿಳಿಸಿದರು.

ಮಾರ್ಕೊ ರೂಬಿಯೋ ಜತೆಗಿನ ಮಾತುಕತೆಗಳು ಫಲಕಾರಿಯಾಗಿದೆ ಎಂದಿರುವ ಮೋದಿ, ಪ್ರಮುಖ ಅಂತರರಾಷ್ಟ್ರೀಯ ವಿಷಯಗಳಲ್ಲಿ ಅಮೆರಿಕದೊಂದಿಗೆ ನಿಕಟ ಸಮನ್ವಯಕ್ಕೆ ಭಾರತದ ಬದ್ಧವಾಗಿದೆ. ಕಳೆದ ದಶಕದಲ್ಲಿ ಕಾರ್ಯತಂತ್ರ, ಆರ್ಥಿಕ ಮತ್ತು ತಾಂತ್ರಿಕ ಕ್ಷೇತ್ರಗಳಲ್ಲಿ ವಿಸ್ತರಿಸಿರುವ ಉಭಯ ರಾಷ್ಟ್ರಗಳ ನಡುವಿನ ಸಂಬಂಧದಲ್ಲಿನ ವೇಗವನ್ನು ಸಭೆ ಎತ್ತಿಹಿಡಿದಿದೆ ಎಂದರು.

ಉಭಯ ದೇಶಗಳು ಪರಸ್ಪರ ಹಿತಾಸಕ್ತಿಯ ಅಂತರರಾಷ್ಟ್ರೀಯ ವಿಷಯಗಳ ಕುರಿತು ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸಲಿವೆ. ಜಾಗತಿಕ ಒಳಿತಿಗಾಗಿ ಭಾರತ ಮತ್ತು ಅಮೆರಿಕ ನಿಕಟವಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸಲಿವೆ ಎಂದು ಹೇಳಿದರು.

ಪ್ರಾದೇಶಿಕ ಸ್ಥಿರತೆಯನ್ನು ಕಾಪಾಡುವಲ್ಲಿ ಮತ್ತು ನಿಯಮ ಆಧಾರಿತ ಅಂತರರಾಷ್ಟ್ರೀಯ ಕ್ರಮವನ್ನು ಉತ್ತೇಜಿಸುವಲ್ಲಿ ಎರಡೂ ರಾಷ್ಟ್ರಗಳು ಪರಸ್ಪರ ಪ್ರಮುಖ ಪಾಲುದಾರರಾಗಿ ನೋಡುತ್ತವೆ. ಪ್ರಧಾನ ಮಂತ್ರಿ ಕಚೇರಿ ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, ರಕ್ಷಣೆ, ಕಾರ್ಯತಂತ್ರದ ತಂತ್ರಜ್ಞಾನಗಳು, ವ್ಯಾಪಾರ ಮತ್ತು ಹೂಡಿಕೆ, ಸಂಪರ್ಕ, ಶಿಕ್ಷಣ, ಇಂಧನ ಭದ್ರತೆ ಮತ್ತು ಜನರಿಂದ ಜನರಿಗೆ ವಿನಿಮಯದಂತಹ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರದಲ್ಲಿ ಸಾಧಿಸಿದ ಪ್ರಗತಿಯ ಬಗ್ಗೆ ರೂಬಿಯೊ ಮೋದಿ ಅವರಿಗೆ ವಿವರಿಸಿದರು.



ಚರ್ಚೆಯ ಸಮಯದಲ್ಲಿ, ಅಂತರರಾಷ್ಟ್ರೀಯ ಸಂಘರ್ಷಗಳನ್ನು ಪರಿಹರಿಸಲು ಸಂವಾದ ಮತ್ತು ರಾಜತಾಂತ್ರಿಕತೆಯನ್ನು ಬೆಂಬಲಿಸುವ ಭಾರತದ ದೀರ್ಘಕಾಲದ ನಿಲುವನ್ನು ಪ್ರಧಾನಿ ಮೋದಿ ಪುನರುಚ್ಚರಿಸಿದರು. ಜಾಗತಿಕ ವಿವಾದಗಳನ್ನು ಪರಿಹರಿಸುವಲ್ಲಿ ಶಾಂತಿಯುತ ತೊಡಗಿಸಿಕೊಳ್ಳುವಿಕೆ ಮತ್ತು ಮಾತುಕತೆಗಳ ಮಹತ್ವವನ್ನು ಅವರು ಒತ್ತಿ ಹೇಳಿದರು ಮತ್ತು ಶಾಂತಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಉಪಕ್ರಮಗಳಿಗೆ ಭಾರತದ ಬೆಂಬಲವನ್ನು ಪುನರುಚ್ಚರಿಸಿದರು.

ಮೇ 26ರಂದು ನವದೆಹಲಿಯಲ್ಲಿ ನಡೆಯಲಿರುವ ಕ್ವಾಡ್ ವಿದೇಶಾಂಗ ಮಂತ್ರಿಗಳ ಸಭೆಗೆ ಮುಂಚಿತವಾಗಿ ಈ ಭೇಟಿ ನಡೆಯಲಿದ್ದು, ಅಲ್ಲಿ ಭಾರತ, ಅಮೆರಿಕ, ಜಪಾನ್ ಮತ್ತು ಆಸ್ಟ್ರೇಲಿಯಾ ಇಂಡೋ–ಪೆಸಿಫಿಕ್ ಭದ್ರತೆ ಮತ್ತು ಪಶ್ಚಿಮ ಏಷ್ಯಾದಲ್ಲಿನ ಪ್ರಾದೇಶಿಕ ಬೆಳವಣಿಗೆಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ರಾಷ್ಟ್ರ ರಾಜಧಾನಿಯಲ್ಲಿ ಅವರು ವಾಸ್ತವ್ಯ ಹೂಡುವ ಸಮಯದಲ್ಲಿ, ಅವರು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ, ಹೊಸ ಅಮೆರಿಕ ರಾಯಭಾರ ಕಚೇರಿಯ ವಿಸ್ತರಿತ ಕಟ್ಟಡದ ಸಮರ್ಪಣೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಮತ್ತು ರೂಸ್ವೆಲ್ಟ್ ಹೌಸ್‌ನಲ್ಲಿ ರಾಯಭಾರಿ ಸೆರ್ಗಿಯೊ ಗೋರ್ ಆಯೋಜಿಸಿರುವ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

### ಅಮೆರಿಕ ಭೇಟಿಗೆ ಮೋದಿಗೆ ಆಹ್ವಾನ

ಶ್ವೇತಭವನಕ್ಕೆ ಶೀಘ್ರದಲ್ಲೇ ಭೇಟಿ ನೀಡುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಹ್ವಾನದ ಸಂದೇಶವನ್ನು ಮಾರ್ಕೊ ರೂಬಿಯೋ ಪ್ರಧಾನಿ ನರೇಂದ್ರ ಮೋದಿ ಅವರಿಗೆ ರವಾನಿಸಿದರು.

# 10 ದಿನಗಳಲ್ಲಿ 3ನೇ ಬಾರಿ ಪೆಟ್ರೋಲ್, ಡೀಸೆಲ್ ದರ ಏರಿಕೆ



**ನವದೆಹಲಿ, ಮೇ 23:** ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಶನಿವಾರ ಮತ್ತೊಮ್ಮೆ ಹೆಚ್ಚಿಸಲಾಗಿದೆ. ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ ಜಾಗತಿಕ ಕಚ್ಚಾ ತೈಲ ಬೆಲೆ ಏರಿಕೆ ಬೆನ್ನಲ್ಲೇ ಕಳೆದ 10 ದಿನಗಳ ಅಂತರದಲ್ಲಿ ಮೂರನೇ ಬಾರಿ ದರ ಏರಿಕೆಯಾಗಿದೆ. ಸರ್ಕಾರಿ ತೈಲ ಮಾರುಕಟ್ಟೆ ಕಂಪನಿಗಳು ಪೆಟ್ರೋಲ್ ಬೆಲೆಯನ್ನು ಲೀಟರ್‌ಗೆ 87 ಪೈಸೆ ಮತ್ತು ಡೀಸೆಲ್ ಬೆಲೆ ಲೀಟರ್‌ಗೆ 91 ಪೈಸೆ ಹೆಚ್ಚಿಸಿವೆ. ಇದರಿಂದ ಗೃಹ ಬಜೆಟ್ ಮತ್ತು ಸಾರಿಗೆ ವೆಚ್ಚಗಳ ಮೇಲೆ ಮತ್ತಷ್ಟು ಒತ್ತಡ ಉಂಟು ಮಾಡಿದೆ.

ದೆಹಲಿಯಲ್ಲಿ ಪೆಟ್ರೋಲ್ ಬೆಲೆ ಲೀ.ಗೆ 99.51 ರೂ., ಡೀಸೆಲ್ ಲೀ.ಗೆ 92.50 ರೂಗಳಿಗೆ ಏರಿದೆ. ಮೇ ತಿಂಗಳಲ್ಲಿ ಇಂಧನ ಬೆಲೆಗಳು 3 ರೂ. ಹೆಚ್ಚಳ ನಂತರ 90 ಪೈಸೆಗಳ ಹೆಚ್ಚಳದ ನಂತರ ಈಗ ಲೀಟರ್‌ಗೆ 5 ರೂ. ಗಳಷ್ಟು ಏರಿಕೆಯಾಗಿದೆ. ಮುಂಬೈನಲ್ಲಿ ಪೆಟ್ರೋಲ್ ಬೆಲೆ ಲೀ.ಗೆ 108 ರೂ. ಹಾಗೂ ಡೀಸೆಲ್ ಲೀ.ಗೆ 95 ರೂ.ಗಿಂತ ಹೆಚ್ಚಾಗಿದೆ. ಕೋಲ್ಕತ್ತಾ, ಚೆನ್ನೈ ಮತ್ತು ಇತರ ಪ್ರಮುಖ ನಗರಗಳಲ್ಲಿಯೂ ಇದೇ ರೀತಿ ಏರಿಕೆ ಕಂಡುಬಂದಿದೆ. ರಾಜ್ಯ ತೆರಿಗೆಗಳು ಅಂತಿಮ ಚಿಲ್ಲರೆ ಬೆಲೆಗಳ ಮೇಲೆ ಪರಿಣಾಮ ಬೀರುತ್ತಿವೆ. ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆ ಮತ್ತು ಪ್ರಮುಖ ಅಂತರರಾಷ್ಟ್ರೀಯ ತೈಲ ಪೂರೈಕೆ ಮಾರ್ಗಗಳಲ್ಲಿನ ಅಡಚಣೆಗಳ ಕಾರಣದಿಂದಾಗಿ ಬ್ರೆಂಟ್ ಕಚ್ಚಾತೈಲ ಬೆಲೆಗಳು ಹೆಚ್ಚುತ್ತಲೇ ಇದ್ದು, ತೈಲ ಕಂಪನಿಗಳು ಹೆಚ್ಚುತ್ತಿರುವ ಆಮದು ಹೊರೆಯ ಒಂದು ಭಾಗವನ್ನು ಗ್ರಾಹಕರಿಗೆ ವರ್ಗಾಯಿಸಲು ಮುಂದಾಗಿವೆ.

# ವಿಮಾನ ಟಿಕೆಟ್ ಬುಕ್ಕಿಂಗ್ ದುಪ್ಪಟ್ಟು ಶುಲ್ಕ: ತನಿಖೆಗೆ ಸಚಿವ ಜೋಶಿ ಆದೇಶ



**ನವದೆಹಲಿ, ಮೇ 23:** ವಿಮಾನ ಪ್ರಯಾಣಿಕರಿಗೆ ಆನ್‌ಲೈನ್ ಟಿಕೆಟ್ ಬುಕ್ಕಿಂಗ್ ವೇದಿಕೆಗಳು ದುಪ್ಪಟ್ಟು ಶುಲ್ಕ ವಿಧಿಸುತ್ತಿದ್ದು, ತಕ್ಷಣವೇ ತನಿಖೆ ನಡೆಸಿ ಕ್ರಮ ಕೈಗೊಳ್ಳುವಂತೆ ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರು ಕೇಂದ್ರ ಗ್ರಾಹಕ ಸಂರಕ್ಷಣಾ ಪ್ರಾಧಿಕಾರದ (ಸಿಸಿಪಿಎ) ಸಿಸಿಪಿಎ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಆನ್‌ಲೈನ್ ಟಿಕೆಟ್ ಬುಕಿಂಗ್ ವೇದಿಕೆಗಳು ಗ್ರಾಹಕರಿಗೆ ವಿಮಾನಯಾನ ಸಂಸ್ಥೆಗಳು ಈ ವಿಧಿಸುವುದಕ್ಕಿಂತ ದುಪ್ಪಟ್ಟು ಶುಲ್ಕ ಸುಲಿಗೆ ಮಾಡುತ್ತಿರುವುದನ್ನು ಗ್ರಾಹಕರೊಬ್ಬರು ಬಯಲಿಗೆಳೆದಿದ್ದು, ಆನ್‌ಲೈನ್ ಟಿಕೆಟ್ ಬುಕ್ಕಿಂಗ್ ವೇದಿಕೆಗಳು ವಿಮಾನ ಪ್ರಯಾಣಿಕರಿಗೆ ಟಿಕೆಟ್ ಬುಕಿಂಗ್ ಅಥವಾ ರದ್ದುಪಡಿಸುವಾಗ ವಿಮಾನಯಾನ ಸಂಸ್ಥೆಗಳು ವಿಧಿಸುತ್ತಿದ್ದ ಶುಲ್ಕಕ್ಕಿಂತ 15 ಪಟ್ಟು ಹೆಚ್ಚಿನ ಶುಲ್ಕ ಹೇರುತ್ತಿದ್ದುದು ಕಂಡುಬಂದಿದೆ. ಹೀಗಾಗಿ ತಕ್ಷಣವೇ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸಚಿವ ಜೋಶಿ ಆದೇಶಿಸಿದ್ದಾರೆ.

**ಸಚಿವರ ನಿರ್ದೇಶನಕ್ಕೆ ಕಾರಣ:** ತೇಜಿಂದರ್‌ಪಾಲ್ ಸಿಂಗ್ ಬಗ್ಗಾ ಎಂಬುವರು ಆಗೋಡಾ ಆನ್ ಲೈನ್ ವೇದಿಕೆ ಮೂಲಕ ಮುಂಬೈ ಟಿಕೆಟ್ ಬುಕ್ ಮಾಡುವಾಗ ಆಕಸ್ಮಿಕವಾಗಿ ಮುಂಬೈ ಬದಲು "ನವಿ ಮುಂಬೈ" ಆಯ್ಕೆ ಮಾಡಿದ್ದರು. ಇದನ್ನು ರದ್ದು ಪಡಿಸಲು ಆಗೋಡಾ ಬರೋಬ್ಬರಿ 4,764 ರೂ. ರದ್ದತಿ ಶುಲ್ಕ ಮತ್ತು ಕೇವಲ ರೂ.1,571 ಮರುಪಾವತಿ ತೋರಿಸಿದೆ. ಹೀಗಾಗಿ ಈ ಗ್ರಾಹಕರು ಬಳಿಕ ಅಕಾಸಾ ಏರ್‌ನಲ್ಲಿ ನೇರವಾಗಿ ರದ್ದತಿ ಶುಲ್ಕದ ಪರಿಶೀಲನೆ ನಡೆಸಿದಾಗ ಕೇವಲ 299 ರೂ. ವಿಧಿಸಿ, 6,076 ರೂ. ಮರುಪಾವತಿ ತೋರಿಸಿದೆ.

ಹೀಗಾಗಿ ತೇಜಿಂದರ್‌ಪಾಲ್ ಸಿಂಗ್ ಬಗ್ಗಾ, ವಿಮಾನಯಾನ ಸಂಸ್ಥೆಯ ಈ ಕ್ರಮ ಅನೈತಿಕವಾಗಿದೆ ಎಂದು ಗ್ರಾಹಕ ಇಲಾಖೆ ಗಮನ ಸೆಳೆದಿದ್ದರು.

# ಕ್ರೀಡೆ, ಪ್ರವಾಸೋದ್ಯಮ, ಉದ್ಯೋಗ ಸೃಷ್ಟಿ ಆರ್ಥಿಕ ಬೆಳವಣಿಗೆಗೆ ನಾಂದಿ

### ಸೂರ್ಯನಗರದಲ್ಲಿ ಅಂತಾರಾಷ್ಟ್ರೀಯ ಕ್ರೀಡಾಂಗಣ ನಿರ್ಮಾಣಕ್ಕೆ ಶಂಕುಸ್ಥಾಪನೆ, ನಮ್ಮ ಮನೆ ಯೋಜನೆಗೆ ಸಿಎಂ ಚಾಲನೆ



**ಬೆಂಗಳೂರು, ಮೇ 23:** ಸೂರ್ಯನಗರದಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಮುಂದಾಗುವ ಮೂಲಕ ಕ್ರೀಡೆ, ಪ್ರವಾಸೋದ್ಯಮ, ಉದ್ಯೋಗ ಸೃಷ್ಟಿ ಆರ್ಥಿಕ ಬೆಳವಣಿಗೆ ಸೇರಿ ಎಲ್ಲಾ ದೃಷ್ಟಿಯಿಂದ ಈ ಭಾಗದ ಸಮಗ್ರ ಅಭಿವೃದ್ಧಿಗೆ ನಾವು ಮುಂದಡಿ ಇಟ್ಟಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ವಸತಿ ಇಲಾಖೆ, ಕರ್ನಾಟಕ ಗೃಹಮಂಡಳಿ ಜಂಟಿಯಾಗಿ ಸೂರ್ಯಗ್ರಾಮದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣದ ಶಂಕುಸ್ಥಾಪನೆ, ಮುಖ್ಯಮಂತ್ರಿಗಳ "ನಮ್ಮ ಮನೆ" ಯೋಜನೆಗೆ ಚಾಲನೆ, ಸೂರ್ಯಶೈನ್, ಸೂರ್ಯ ಡಿವೈನ್ ವಸತಿ ಸಮುಚ್ಚಯ ಕಾಮಗಾರಿಗಳ ಶಂಕುಸ್ಥಾಪನೆ, ವಸತಿ ಯೋಜನೆಗೆ ಭೂಮಿ ನೀಡಿದ ಭೂಮಾಲೀಕರಿಗೆ ಸಾಂಕೇತಿಕ ನಿವೇಶನ ಹಂಚಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಲ್ಲಿಯವರೆಗೂ ಕೇವಲ ವಸತಿ ನಿರ್ಮಾಣ ಮಾಡುತ್ತಿದ್ದ ವಸತಿ ಇಲಾಖೆ ಮತ್ತು ಗೃಹ ಮಂಡಳಿ ಈಗ 80 ಸಾವಿರ ಆಸನ ವ್ಯವಸ್ಥೆಯ ಕ್ರೀಡಾಂಗಣ ನಿರ್ಮಾಣಕ್ಕೆ ಮುಂದಾಗಿರುವುದು ಪ್ರಗತಿಯ ದೂರದೃಷ್ಟಿಯಾಗಿದೆ . ಇದಕ್ಕಾಗಿ ಶಿವಲಿಂಗೇಗೌಡರು ಮತ್ತು ಜಮೀರ್ ಅಹಮದ್ ಅಭಿನಂದನಾರ್ಹರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗುಜರಾತ್‌ನಲ್ಲಿರುವ ಕ್ರೀಡಾಂಗಣ 90 ಸಾವಿರ ಆಸನ ವ್ಯವಸ್ಥೆ ಇರುವಂಥಾದ್ದು. ನಮ್ಮ ರಾಜ್ಯದ್ದು ಎರಡನೇ ದೊಡ್ಡ ಕ್ರೀಡಾಂಗಣವಾಗಿದೆ. ಇದರಿಂದ ಪ್ರವಾಸೋದ್ಯಮದ ಪ್ರಗತಿಯ ಜೊತೆಗೆ ಸುತ್ತಮುತ್ತಲ ಊರುಗಳ ಆರ್ಥಿಕತೆಯೂ ಹೆಚ್ಚುತ್ತದೆ. ಉದ್ಯೋಗವೂ ಹೆಚ್ಚುತ್ತದೆ. ಸರ್ಕಾರದ ಆರ್ಥಿಕ ನೆರವಿಲ್ಲದೆ KHB ಹಣದಿಂದಲೇ ಕ್ರೀಡಾಂಗಣ ನಿರ್ಮಾಣ ಆಗಲಿದೆ ಎಂದು ಶಿವಲಿಂಗೇಗೌಡರು ಹೇಳಿದ್ದಾರೆ ಎಂದು ಸಿಎಂ ಉಲ್ಲೇಖಿಸಿದರು.

ಖಾಲಿ ಇರುವ ಗೃಹಮಂಡಳಿ ನಿವೇಶನಗಳ ಮಾರಾಟದಿಂದ ಮಂಡಳಿಗೆ 20 ಸಾವಿರ ಕೋಟಿ ಆದಾಯ ಬರುವ ಅಂದಾಜಿದೆ. ನೆತ್ತಿ ಮೇಲೆ ಸೂರು ಇರಬೇಕು ಎನ್ನುವುದು ಪ್ರತಿಯೊಬ್ಬರ ಆಸೆ. ಈಗ ಭೂಮಿ ಬೆಲೆ ಹೆಚ್ಚುತ್ತಿರುವುದರಿಂದ ಬಡ, ಮಧ್ಯಮ ವರ್ಗದವರಿಗೆ ಕೈಗೆಟುಕುವ ದರದಲ್ಲಿ ಕೆ.ಎಚ್.ಬಿ ನಿವೇಶನಗಳನ್ನು ನಿರ್ಮಿಸಿ ಒದಗಿಸುತ್ತಿದೆ ಎಂದರು. ಈ ಭಾಗದ ಅಭಿವೃದ್ಧಿಗೆ ಪೂರಕವಾಗಿ ಜಿಗಣಿ ಹೋಬಳಿಯ ಪ್ರಮುಖ ಸಂಪರ್ಕ ರಸ್ತೆ ನಿರ್ಮಾಣಕ್ಕೂ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅಧಿಕಾರಿಗಳು ಈ ಕೆಲಸವನ್ನೂ ಆರಂಭಿಸುತ್ತಾರೆ. ಕ್ರೀಡಾಂಗಣ, ರಸ್ತೆ ಮಾತ್ರವಲ್ಲದೆ ವಸತಿ ಇಲಾಖೆ ಈ ಬಾರಿ ಇಲ್ಲಿಯವರೆಗೂ 3 ಲಕ್ಷಕ್ಕೂ ಹೆಚ್ಚು ಮನೆ ಮತ್ತು ನಿವೇಶನಗಳನ್ನೂ ರಾಜ್ಯದಲ್ಲಿ ನೀಡಲಾಗಿದೆ ಎಂದರು.

ಡಿಸಿಎಂ ಡಿ.ಕೆ.ಶಿವಕುಮಾರ್, ಗೃಹ ಸಚಿವ ಜಿ.ಪರಮೇಶ್ವರ್, ವಸತಿ ಸಚಿವ ಜಮೀರ್ ಅಹಮದ್, ಕೆಎಚ್‌ಬಿ ಅಧ್ಯಕ್ಷ ಶಿವಲಿಂಗೇಗೌಡ, ಶಾಸಕ ಆನೇಕಲ್ ಶಿವಣ್ಣ, ಹಿರಿಯ ಶಾಸಕರಾದ ಟಿ.ಬಿ.ಜಯಚಂದ್ರ, ಕೃಷ್ಣಪ್ಪ, ಮಾಜಿ ಸಂಸದ ಡಿ.ಕೆ.ಸುರೇಶ್, ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ಬಯ್ಯ, ಎಂಎಲ್‌ಸಿ ರಾಮೋಜಿಗೌಡ, ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ.ರೇವಣ್ಣ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

# ಸಿಎಂ ಸೇರಿ ಯಾವುದೇ ಹುದ್ದೆ ನೀಡಿದರೂ ನಿಭಾಯಿಸುವೆ: ಪರಮೇಶ್ವರ್



**ಬೆಂಗಳೂರು, ಮೇ 23:** ಮುಖ್ಯಮಂತ್ರಿ ಸ್ಥಾನ ಸೇರಿದಂತೆ ಯಾವುದೇ ಹುದ್ದೆ ಕೊಟ್ಟರೂ ನಿಭಾಯಿಸುವ ಸಾಮರ್ಥ್ಯ ನನಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹಸಚಿವನಾಗಿ ಇದುವರೆಗೆ 8 ವರ್ಷ ಸಮರ್ಥವಾಗಿ ಕಾರ್ಯನಿರ್ವಹಿಸಿದ್ದೇನೆ. ಗೃಹ ಸಚಿವನಾಗಿರುವುದಕ್ಕೆ ಯಾವುದೇ ಬೇಸರವಿಲ್ಲ ಎಂದು ಸ್ಪಷ್ಟಪಡಿಸಿದರು.

ಗೃಹಖಾತೆಯ ಜೊತೆಗೆ ಯಾವುದೇ ಹೆಚ್ಚುವರಿ ಜವಾಬ್ದಾರಿ ವಹಿಸಿದರೂ ನಿರ್ವಹಿಸುತ್ತೇನೆ. ಮುಖ್ಯಮಂತ್ರಿ ಸ್ಥಾನ ಕೊಟ್ಟರೂ ನಿಭಾಯಿಸುತ್ತೀರಾ ಎಂಬ ಪ್ರಶ್ನೆಗೆ ಅವರು, ಏನೇ ಕೊಟ್ಟರೂ ನಿಭಾಯಿಸುತ್ತೇನೆ. ಆ ಸಾಮರ್ಥ್ಯ ನನಗಿದೆ ಎಂದರು. ಸಂಪುಟ ಪುನರ್‌ರಚನೆ ಸಂದರ್ಭದಲ್ಲಿ ಖಾತೆ ಬದಲಾವಣೆಗೆ ಕೇಳಿದ್ದೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಗೃಹಖಾತೆ ಬದಲಾಯಿಸುವಂತೆ ನಾನು ಯಾರನ್ನೂ ಕೇಳಿಲ್ಲ ಎಂದು ಸ್ಪಷ್ಟಪಡಿಸಿದರು.

ಶಾಸಕರು ಸಚಿವ ಸ್ಥಾನ ನೀಡುವಂತೆ ಕೋರುವುದರಲ್ಲಿ ಯಾವುದೇ ತಪ್ಪಿಲ್ಲ. ಎರಡು–ಮೂರು ಬಾರಿ ಶಾಸಕರಾಗಿದ್ದಾರೆ. ಅವರಿಗೂ ಸಚಿವರಾಗಬೇಕೆಂಬ ಅಪೇಕ್ಷೆ ಇದೆ. ಹೀಗಾಗಿ ಹೈಕಮಾಂಡ್ ಮೇಲೆ ಅವರು ಒತ್ತಡ ತರುತ್ತಿರಬಹುದು. ಆದರೆ ಶೇ.15ಕ್ಕಿಂತ ಹೆಚ್ಚು ಸಚಿವ ಸ್ಥಾನ ನೀಡಲಾಗುವುದಿಲ್ಲ. ಕೆಲವು ಹಿರಿಯ ಸಚಿವರನ್ನು ಸಂಪುಟದಿಂದ ಕೈ ಬಿಡುವುದು ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದರು.

ರಾಜ್ಯಸಭೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ಕೆಪಿಸಿಸಿ ಅಧ್ಯಕ್ಷರು, ಮುಖ್ಯಮಂತ್ರಿಗಳು ಹಾಗೂ ಹೈಕಮಾಂಡ್ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಅವರು ತಿಳಿಸಿದರು. ಕಾರಾಗೃಹದಲ್ಲಿ ನಟ ದರ್ಶನ್ ಆತ್ಮಹತ್ಯೆಗೆ ಯತ್ನಿಸಿಲ್ಲ ಎಂದು ಹಿರಿಯ ಅಧಿಕಾರಿಗಳು ಈಗಾಗಲೇ ಸ್ಪಷ್ಟಪಡಿಸಿದ್ದಾರೆ ಎಂದರು.



### ನಿತ್ಯ ಪಂಚಾಂಗ 24.05.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಶುದ್ಧ, ಅಷ್ಟಮಿ, ಮಖ ನಕ್ಷತ್ರ, ಕಾಮನ್‌ವೆಲ್ತ್ ಡೇ, ಪೆಂಟೆಕೋಸ್ಟ್

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಅಕ್ರಮವಾಸಿಗಳು, ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುವವರಿಗೆ ಮತ ನಿರಾಕರಿಸುವುದೇ ಎಸ್‌ಐಆರ್ ಉದ್ದೇಶ: ಕೋಟ ಶ್ರೀನಿವಾಸ

ಬೆಂಗಳೂರು, ಮೇ 23: ಬಡವರು ಮತ್ತು ದುರ್ಬಲರ ಮತವನ್ನು ಕಸಿಯುವ ತಂತ್ರದ ಭಾಗವಾಗಿ ಎಸ್‌ಐಆರ್ ಇಲ್ಲ ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ದೇಶದಲ್ಲಿ ವಾಸವಿದ್ದು, ದೇಶದ ಮತದಾರ ಅಲ್ಲದವರಿಗೆ ಮತ ನಿರಾಕರಿಸಿ, ನೈಜ ಭಾರತೀಯರಿಗೆ ಮಾತ್ರ ಮತದಾನದ ಅವಕಾಶ ಕೊಡುವ ಪ್ರಕ್ರಿಯೆ ಇದಾಗಿದೆ. ದಾಖಲೆ ಕೊಡದವರಿಗೆ ಭಾರತೀಯರೆಂದು ದಾಖಲೆ ಕೊಡಲು ನೋಟಿಸ್ ಕೊಡಲಾಗುತ್ತದೆ. ವಿದೇಶದಿಂದ ಬಂದು ಅಕ್ರಮವಾಗಿ ನೆಲೆಸಿದವರು ಮತ್ತು ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವವರಿಗೆ ಮತ ನಿರಾಕರಿಸುವುದು ಇದರ ಮೂಲ ಉದ್ದೇಶಗಳಲ್ಲಿ ಒಂದು. ಕಾಂಗ್ರೆಸ್ಸಿಗರು ಎಸ್‌ಐಆರ್ ಅನ್ನು ಸ್ವಾಗತಿಸಬೇಕು. ಅಪಪ್ರಚಾರ ಮಾಡಬಾರದು ಎಂದರು.

ರಾಜ್ಯದಲ್ಲಿ ವಿನಾಶಕಾರಿ ದೊಂಬಿ ಸೃಷ್ಟಿ, ಕುಕ್ಕರ್ ಬಾಂಬ್ ಇಟ್ಟುಕೊಂಡು ಹೋಗುವ ಪರಂಪರೆ, ಪೊಲೀಸ್ ಠಾಣೆಗೆ ಬೆಂಕಿ ಹಾಕುವವರು, ಶಿವಲಿಂಗ ಇರುವ ದೇವಸ್ಥಾನದಲ್ಲಿ ಭಕ್ತರಿಗೆ ಅಪಮಾನ ಮಾಡಿ ಭಕ್ತೆಯರಿಗೆ ಬೆದರಿಸುವುದು– ಇಂಥ ಸಮಾಜ ದ್ರೋಹಿಗಳ ವಿರುದ್ಧದ ಪ್ರಕರಣ ವಾಪಸ್ ಪಡೆದಿದ್ದಾರೆ. ಇದರಿಂದ ಕ್ರೌರ್ಯ ವೈಭವೀಕರಿಸುವವರು, ಷಡ್ಯಂತ್ರ ಮಾಡುವವರು, ಬೆದರಿಕೆ ಒಡ್ಡುವವರು, ಹಿಂದೂ ವಿರೋಧಿಗಳಿಗೆ ಅನುಕೂಲ ಆಗಲಿದೆ ಎಂದು ಪ್ರಶ್ನೆಯೊಂದಕ್ಕೆ ಕೋಟ ಶ್ರೀನಿವಾಸ ಪೂಜಾರಿ ಪೆಟ್ರೋಲಿಯಂ ಉತ್ಪನ್ನಗಳ ಬೆಲೆ ಏರಿಕೆ ವಿರುದ್ಧ ಕಾಂಗ್ರೆಸ್ ಟೀಕೆ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಸಿದ್ದರಾಮಯ್ಯನವರು ಕೇಂದ್ರ ಸರಕಾರ, ಪ್ರಧಾನಿ ಮೋದಿ ಅವರನ್ನು ಟೀಕಿಸಲು ಏನು ಸಿಗುತ್ತದೆ ಎಂದು ಹುಡುಕುತ್ತಿದ್ದಾರೆ. ಯುದ್ಧ ನಡೆಯುತ್ತಿರುವುದರಿಂದ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ತೈಲಬೆಲೆಗೆ ಅನುಗುಣವಾಗಿ ಬೆಲೆ ಏರಿಕೆ ಮಾಡಲಾಗಿದೆ. ಹಲವಾರು ದೇಶಗಳಲ್ಲಿ ಪರಿಸ್ಥಿತಿ ಅವರ ಕೈಮೀರಿಹೋಗಿ ಬಹಳ ಕಷ್ಟ ಪಡುವಂತಾಗಿದೆ ಎಂದು ಉತ್ತರ ಕೊಟ್ಟರು. ತೈಲ ಸಂಗ್ರಹ, ವಿತರಣೆ, ಆಮದು ಮತ್ತು ಉತ್ಪಾದನೆಯಲ್ಲಿ ನಿಯಂತ್ರಣ ಸಾಧಿಸಿ ಭಾರತೀಯರಿಗೆ ವಿತರಿಸುವ ಕೆಲಸವನ್ನು ಮೋದಿಯವರು ಮಾಡುತ್ತಿದ್ದಾರೆ ಎಂದು ವಿಶ್ಲೇಷಿಸಿದರು.

# ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಲ್ಲಿ ಮೋದಿ ವಿಫಲ

**ಆರು ತಿಂಗಳ ಹಿಂದೆಯೇ ಎಚ್ಚರಿಕೆ ನೀಡಿದ್ದ ರಾಹುಲ್‌ಗಾಂಧಿ: ದಿನೇಶ್ ಗುಂಡೂರಾವ್**

ಬೆಂಗಳೂರು, ಮೇ 23: ಕೇಂದ್ರ ಸರ್ಕಾರದ ಆರ್ಥಿಕ ನೀತಿಯಿಂದ ಮುಂಬರುವ ದಿನಗಳಲ್ಲಿ ಭಾರತ ದೊಡ್ಡ ಸಮಸ್ಯೆಗೆ ಸಿಲುಕಲಿದೆ. ದೇಶದ ಜನರು ಸಂಕಷ್ಟಕ್ಕೆ ಒಳಗಾಗಲಿದ್ದಾರೆ ಎಂದು ರಾಹುಲ್ ಗಾಂಧಿಯವರು ಆರು ತಿಂಗಳ ಹಿಂದೆಯೇ ಹೇಳಿದ್ದರು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಅನವಶ್ಯಕವಾಗಿ ನಡೆಯುತ್ತಿರುವ ಯುದ್ಧದಿಂದ ಈ ಪರಿಸ್ಥಿತಿ ಬಂದಿದೆ ಎನ್ನುವುದನ್ನು ಒಪ್ಪಿಕೊಳ್ಳೋಣ. ಕೇಂದ್ರ ಸರ್ಕಾರ ಮೊದಲಿನಿಂದಲೂ ಸರಿಯಾಗಿ ನಡೆದುಕೊಂಡಿಲ್ಲ. ಭಾರತದ ನಿಲುವು ಏನು ಎನ್ನುವುದನ್ನು ಹೇಳಿಲ್ಲ. ಪ್ರವಾಸ ಮಾಡಬೇಡಿ, ಚಿನ್ನ ಖರೀದಿಸಬೇಡಿ ಇಂತಹ ಹೇಳಿಕೆ ನೀಡುತ್ತಿರುವ ನರೇಂದ್ರ ಮೋದಿ ಕಾಲಹರಣ ಮಾಡುತ್ತಿದ್ದಾರೆ. ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವಲ್ಲಿ ಸೋತಿದ್ದಾರೆ ಎಂದರು.

ಹಿಂದೆ ಮನಮೋಹನ್‌ಸಿಂಗ್ ಪ್ರಧಾನಿ ಇದ್ದಾಗ, ಬ್ಯಾರಲ್‌ಗೆ 120 ಡಾಲರ್ ವರೆಗೂ ಹೋಗಿತ್ತು. ಆದರೆ ಜನರಿಗೆ ತೊಂದರೆ ಆಗದಂತೆ ಅವರು ಕ್ರಮ ಕೈಗೊಂಡಿದ್ದರು. ಆದರೆ ಈಗ ಏನಾಗಿದೆ ನೋಡಿ. ಈವರೆಗೆ ಕಡಿಮೆ ದರ ಇದ್ದಾಗಲೂ ಕೇಂದ್ರ ಸರ್ಕಾರ ಪೆಟ್ರೋಲ್ ದರ ಇಳಿಸಲಿಲ್ಲ. ಬೇಕಾದಷ್ಟು ಲಾಭ ಮಾಡಿಕೊಂಡಿತ್ತು. ಈಗ ಯುದ್ಧದ ಕಾರಣದಿಂದ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಏರಿಕೆ ಆದಾಗ ಟ್ಯಾಕ್ಸ್ ದರ ಇಳಿಸಿ ಜನರಿಗೆ ಅನುಕೂಲ ಮಾಡುವ ಬದಲು ತೈಲದರ ಏರಿಕೆಯನ್ನು ನಿರಂತರವಾಗಿ ಮಾಡುತ್ತಿದೆ ಎಂದರು. ಜನಸಾಮಾನ್ಯರ ಬದುಕನ್ನೇ ತೊಂದರೆಗೆ ಸಿಲುಕಿಸಿದೆ. ಮೋದಿಯವರಿಗೆ ಚುನಾವಣೆ ಗೆಲ್ಲುವುದು ಮಾತ್ರ ಪ್ರಾಮುಖ್ಯ. ಜನರ ಕಷ್ಟ ಬೇಕಾಗಿಲ್ಲ. ಸಮಾಜವನ್ನು ವಿಭಜಿಸಿ, ಶಾಂತಿ, ಸಹಬಾಳ್ವೆಯನ್ನು ಹಾಳುಮಾಡಿ, ಇನ್‌ಸ್ಟಾಗ್ರಾಂನಲ್ಲಿ ಫೋಟೋ, ವಿಡಿಯೋ ಹಾಕುತ್ತ ಕಾಲ ಕಳೆಯುತ್ತಿದ್ದಾರೆ. ಸಾರ್ವಜನಿಕರು ತೊಂದರೆಯಲ್ಲಿ ಬೇಯುತ್ತಿದ್ದಾರೆ ಎಂದು ದಿನೇಶ್ ಗುಂಡೂರಾವ್ ಹೇಳಿದರು.

### ಎಬೋಲಾ ಕುರಿತು ಆತಂಕ ಬೇಡ



ಎಬೋಲಾ ಕುರಿತು ಸಾರ್ವಜನಿಕರು ಆತಂಕಕ್ಕೆ ಒಳಗಾಗಬೇಡಿ, ಜಾಗೃತಿ ಇರಲಿ. ಸರ್ಕಾರ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡಿದೆ. ಆರೋಗ್ಯ ಇಲಾಖೆ ಅಧಿಕಾರಿಗಳು ಕೇಂದ್ರದ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ಪರಿಸ್ಥಿತಿ ಅವಲೋಕಿಸುತ್ತಿದ್ದಾರೆ. ದೇಶದಲ್ಲಿ ಇನ್ನೂ ಪ್ರಕರಣ ಪತ್ತೆಯಾಗಿಲ್ಲ, ಅಕ್ಕಪಕ್ಕದ ದೇಶಗಳಲ್ಲಿಯೂ ಎಬೋಲಾ ಪ್ರಕರಣ ದಾಖಲಾಗಿಲ್ಲ. ಉಗಾಂಡಾ, ಕಾಂಗೋ ಮುಂತಾದ ಆಫ್ರಿಕನ್ ದೇಶಗಳಿಂದ ಬಂದವರನ್ನು 21 ದಿನಗಳ ಕಾಲ ನಿಗಾದಲ್ಲಿ ಇರಿಸಲಾಗುವುದು. ರೋಗಲಕ್ಷಣ ಕಂಡುಬಂದಲ್ಲಿ ತಕ್ಷಣ ಮಾಹಿತಿ ನೀಡಲು ಸೂಚಿಸಲಾಗಿದೆ. ಸಾರ್ವಜನಿಕರು ವದಂತಿಗಳಿಗೆ ಕಿವಿಗೊಡಬೇಡಿ ಎಂದು ಸಚಿವ ದಿನೇಶ್ ಗುಂಡೂರಾವ್ ವಿನಂತಿಸಿದರು.




ಬಿಜೆಪಿ ಬೆಂಗಳೂರು ಉತ್ತರ ಜಿಲ್ಲೆ ವತಿಯಿಂದ ಹಮ್ಮಿಕೊಳ್ಳಲಾದ ಎರಡು ದಿನಗಳ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ. ಪಂ. ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನವನ್ನು ಪ್ರತಿಪಕ್ಷದ ನಾಯಕ ಆರ್. ಅಶೋಕ್ ಅವರು ಈ ಮಹಾಭಿಯಾನದಲ್ಲಿ ಭಾಗವಹಿಸಿ, ಕಾರ್ಯಕ್ರಮವನ್ನು ಉದ್ಘಾಟಿಸಿದರು. ಪಕ್ಷದ ತತ್ವ–ಸಿದ್ಧಾಂತಗಳು ಹಾಗೂ ಸಂಘಟನಾತ್ಮಕ ಬೆಳವಣಿಗೆಯ ಕುರಿತು ಅವರು ಕಾರ್ಯಕರ್ತರಿಗೆ ಮಾರ್ಗದರ್ಶನ ನೀಡಿದರು. ವಿಧಾನ ಪರಿಷತ್‌ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ, ಜಿಲ್ಲಾ ಬಿಜೆಪಿ ಅಧ್ಯಕ್ಷ ಎಸ್. ಹರೀಶ್, ಶಾಸಕರಾದ ಎಸ್. ವಿಶ್ವನಾಥ್, ಬೈರತಿ ಬಸವರಾಜ್, ಕೆ. ಗೋಪಾಲಯ್ಯ ಹಾಗೂ ಇತರ ಪ್ರಮುಖ ನಾಯಕರು ಮತ್ತು ಕಾರ್ಯಕರ್ತರು ಹಾಜರಿದ್ದರು.

# ತೈಲಬೆಲೆ ಏರಿಕೆ ಅನಿವಾರ್ಯ ಬಿ.ವೈ. ವಿಜಯೇಂದ್ರ ಸಮರ್ಥನೆ



### ರೈತರ ಬಗ್ಗೆ ಕಾಂಗ್ರೆಸ್ ಅಸಡ್ಡೆ

ಆನೇಕಲ್ ಸಮೀಪ ಕ್ರಿಕೆಟ್ ಸ್ಟೇಡಿಯಂ ನಿರ್ಮಿಸುತ್ತಿರುವ ಸಂಬಂಧ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ವಿಜಯೇಂದ್ರ, ಕಾಂಗ್ರೆಸ್ ಸರ್ಕಾರಕ್ಕೆ ರೈತರ ಬಗ್ಗೆ ಅಸಡ್ಡೆ ಇದೆ. ಅವರ ಸಮಸ್ಯೆ ತಿಳಿದಿಲ್ಲ. ಬದಲಿಗೆ ರಿಯಲ್ ಎಸ್ಟೇಟ್ ದಂಧೆಯಲ್ಲಿ ತೊಡಗಿದೆ. ರಾಜ್ಯದಲ್ಲಿ ನೆರೆ ಬಂದಾಗ ಸರ್ಕಾರ ರೈತರ ಪರವಾಗಿ ನಿಲ್ಲಲಿಲ್ಲ. ಬರಗಾಲ ಇದ್ದಾಗಲೂ ಸಹಾಯ ಮಾಡಲಿಲ್ಲ. ಬೆಂಗಳೂರು ವಿಮಾನ ನಿಲ್ದಾಣದ ಸಮೀಪ ಸಾವಿರಾರು ಎಕರೆ ಜಾಗ ಇದೆ. ಅಲ್ಲೇ ಸ್ಟೇಡಿಯಂ ನಿರ್ಮಿಸ ಬಹುದಿತ್ತು. ಅದು ಬಿಟ್ಟು ಆನೇಕಲ್‌ನಲ್ಲಿ ಫಲವತ್ತಾದ ಜಮೀನು ಪಡೆದು ರೈತರಿಗೆ ಪದೇಪದೇ ತೊಂದರೆ ಕೊಡುತ್ತಿದ್ದಾರೆ. ಅನ್ನದಾತರ ಹಿತಾಸಕ್ತಿ ಕಡೆಗಣಿಸಲು ಅವಕಾಶ ನೀಡುವುದಿಲ್ಲ. ರೈತರ ಪರವಾಗಿ ಬಿಜೆಪಿ ನಿಲ್ಲಲಿದೆ ಎಂದು ಹೇಳಿದರು.

### ದೇವೇಗೌಡರನ್ನು ಬಿಜೆಪಿ ವಿರೋಧಿಸಿಲ್ಲ

ರಾಜ್ಯಸಭೆ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಚರ್ಚೆ ಆಗಿದೆ. ಒಬ್ಬರಿಗೆ ಅವಕಾಶ ಇದೆ. ದೇವೇಗೌಡರನ್ನು ರಾಜ್ಯಸಭೆಗೆ ಕಳಿಸಲು ಬಿಜೆಪಿ ವಿರೋಧಿಸಿಲ್ಲ. ದೇವೇಗೌಡರಿಗೆ ಅವಕಾಶ ನೀಡುವ ನಿರ್ಧಾರ ರಾಷ್ಟ್ರೀಯ ನಾಯಕರದ್ದು. ಈ ಸಂಬಂಧ ಯಾವುದೇ ಸೂಚನೆ ಸಿಕ್ಕಿಲ್ಲ ಎಂದು ವಿಜಯೇಂದ್ರ ತಿಳಿಸಿದರು.

ಬೆಂಗಳೂರು, ಮೇ 23: ಜಾಗತಿಕ ಬೆಳವಣಿಗೆಯಿಂದಾಗಿ ಮೂರನೇ ಬಾರಿಗೆ ಕೇಂದ್ರ ಸರ್ಕಾರ ಅನಿವಾರ್ಯವಾಗಿ ತೈಲ ಬೆಲೆ ಏರಿಸಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸಮರ್ಥಿಸಿ ಕೊಂಡಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಸರ್ಕಾರಕ್ಕೆ ಇಷ್ಟ ಇಲ್ಲದೇ ಇದ್ದರೂ ಕಠಿಣ ನಿರ್ಧಾರ ಕೈಗೊಂಡಿದೆ. ಸಿದ್ದರಾಮಯ್ಯ ಅವರು ಈ ಹಿಂದೆ ತೈಲಬೆಲೆ ಹತ್ತು ರೂಪಾಯಿ ಕಡಿಮೆ ಮಾಡುತ್ತೇನೆ ಎಂದು ಹೇಳಿದ್ದರು. ಈಗ ಅವರು ರಾಜ್ಯದ ಜನರ ಒಳಿತಿಗಾಗಿ ತೈಲದ ಮೇಲಿನ ತೆರಿಗೆಯನ್ನು ಕಡಿಮೆ ಮಾಡಲಿ. ಜಾಗತಿಕ ಸ್ಥಿತಿಗತಿಯನ್ನು ಸಿದ್ದರಾಮಯ್ಯ ಅವರು ಅರ್ಥ ಮಾಡಿಕೊಂಡು ತೈಲದ ಮೇಲಿನ ಹೆಚ್ಚುವರಿ ತೆರಿಗೆಯನ್ನು ಇಳಿಸಲಿ ಎಂದು ಆಗ್ರಹಿಸಿದರು.

ಸಚಿವ ಪ್ರಿಯಾಂಕ್ ಖರ್ಗೆ ಅವರು ಬಿಜೆಪಿಗೆ ಬುದ್ಧಿ ಹೇಳುವುದು ಬಿಟ್ಟು ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಹೆಚ್ಚುವರಿ ತೆರಿಗೆಯನ್ನು ಕಡಿಮೆ ಮಾಡಿ ದೇಶಕ್ಕೆ ಮಾದರಿಯಾಗುವ ಕೆಲಸ ಮಾಡಿಸಲಿ. ಈ ವಿಷಯದಲ್ಲಿ ಅವರು ಸಿಎಂಗೆ ಬುದ್ಧಿ ಹೇಳಲಿ ಎಂದರು.

ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಅಧಿಕಾರ ಬಂದಾಗಿನಿಂದ ತುಷ್ಟೀಕರಣದ ಎಲ್ಲ ಮಿತಿಗಳನ್ನು ದಾಟಿ ಅಲ್ಪಸಂಖ್ಯಾತರ ಓಲೈಕೆ ಮಾಡುತ್ತಿದೆ. ಹಿಂದೂಗಳ ಮೇಲೆ ನಿರಂತರ ದೌರ್ಜನ್ಯ ನಡೆಯುತ್ತಿದೆ. ಅಲ್ಪಸಂಖ್ಯಾತರನ್ನು ಓಲೈಸಲು ಯಾವ ಮಟ್ಟಕ್ಕಾದರೂ ಈ ಸರ್ಕಾರ ಇಳಿಯಲಿದೆ. ಅಳಂದ ಗಲಭೆ ಪ್ರಕರಣವನ್ನು ಕೈ ಬಿಡಲು ಸಚಿವ ಸಂಪುಟ ತೀರ್ಮಾನ ಕೈಗೊಂಡಿದೆ. ದೇಶದ್ರೋಹಿಗಳ ವಿರುದ್ಧ, ಕಾನೂನು ಹಾಳು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಬೇಕಾದ ಸರ್ಕಾರ ಹಾಗೂ ಕಾಂಗ್ರೆಸ್ ತಮ್ಮ ಮತಬ್ಯಾಂಕ್ ಸುಭದ್ರ ಮಾಡಿಕೊಳ್ಳುತ್ತಿದೆ ಎಂದು ದೂರಿದರು.

# ಅಭಿವೃದ್ಧಿ ಹೊಂದಿದ ನವಸಮಾಜ ನಿರ್ಮಾಣ ಡಾ.ಡಿ.ವೀರೇಂದ್ರ ಹೆಗ್ಗಡೆಯವರ ಗುರಿ

**ಜಿಲ್ಲಾ ಜನಜಾಗೃತಿ ವೇದಿಕೆ ಸಭೆಗೆ ಚಾಲನೆ ನೀಡಿ ದಿನೇಶ್ ಪೂಜಾರಿ ಹೇಳಿಕೆ**




ಕಲಬುರಗಿ, ಮೇ 23: ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೂಲಕ ರಾಜ್ಯದಲ್ಲಿ ಪರಿವರ್ತನೆಯ ಅಭಿವೃದ್ಧಿ ಹೊಂದಿದ ನವಸಮಾಜವನ್ನು ಹುಟ್ಟುಹಾಕಲು ಪ್ರಯತ್ನ ಮಾಡುತ್ತಿದ್ದಾರೆ ಎಂದು ಯೋಜನೆಯ ಪ್ರಾದೇಶಿಕ ನಿರ್ದೇಶಕ ದಿನೇಶ್ ಪೂಜಾರಿ ಅಭಿಪ್ರಾಯ ಪಟ್ಟರು.

ಕಲಬುರಗಿ ಜಿಲ್ಲಾ ಕಚೇರಿಯ ಮಾತೃಶ್ರೀ ಸಭಾಭವನದಲ್ಲಿ ಮೇ 23ರಂದು ಅಖಿಲ ಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಟ್ರಸ್ಟ್ ಸಭೆಯನ್ನು ಉದ್ಘಾಟಿಸಿ, ದುಶ್ಚಟ, ದುರಭ್ಯಾಸ, ನಿವಾರಣೆಯೊಂದಿಗೆ ಸ್ವಾವಲಂಬನೆಯ ಸಮಾಜ ನಿರ್ಮಾಣ ಮಾಡಲು ಕಾರ್ಯಕ್ರಮ ರೂಪಿಸಿ ಅನುಷ್ಠಾನಕ್ಕೆ ಕಂಕಣಬದ್ಧರಾಗಿದ್ದು ಸಮಾಜದ ಕೈಗೊಂಡಿರುವ ಹತ್ತಾರು ಯೋಜನೆಗಳು ಇಂದು ಮೌನ ಕ್ರಾಂತಿ ಮಾಡುತ್ತಿದೆ. ಜನಜಾಗೃತಿ ವೇದಿಕೆಯ ಮೂಲಕ ಅನುಷ್ಠಾನಗೊಂಡಿರುವ ಮದ್ಯವರ್ಜನ ಶಿಬಿರ, ಸ್ವಾಸ್ಥ್ಯಸಂಕಲ್ಪ ಯೋಜನೆಗಳು ಪರಿಣಾಮಕಾರಿ ಬದಲಾವಣೆಗೆ ಪ್ರೇರಣೆ ನೀಡಿದೆ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಕೋಶಾಧಿಕಾರಿ ಮತ್ತು ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ಡಾ. ಸದಾನಂದ ಪೆರ್ಲ ಮಾತನಾಡಿ, ಧರ್ಮಸ್ಥಳ ಸಂಸ್ಥೆಯು ಅರೋಗ್ಯವಂತ ಸಮಾಜ ನಿರ್ಮಾಣ ಕಾರ್ಯದಲ್ಲಿ ನಿರಂತರ ತೊಡಗಿಕೊಂಡಿರುವುದು ಶ್ಲಾಘನೀಯ. ಇದರೊಂದಿಗೆ ಸಮಾಜ ಮುಖಿ ಸೇವೆಯಲ್ಲಿ ತೊಡಗಿಕೊಂಡಿರುವ ಸ್ಥಳೀಯ ಸಂಘ – ಸಂಸ್ಥೆಗಳನ್ನು ಒಗ್ಗೂಡಿಸಿಕೊಂಡು ಕೆಲಸ ಮಾಡಿದರೆ ಸಂಸ್ಥೆಯ ಜನಪರ ಕಾರ್ಯಕ್ರಮಗಳನ್ನು ಮನೆ ಮನೆಗೆ, ಮನ ಮನಕ್ಕೆ ತಲುಪಿಸಲು ಸಾಧ್ಯ ಎಂದರು.

ಜಿಲ್ಲಾ ಜನಜಾಗೃತಿ ವೇದಿಕೆಯ ಅಧ್ಯಕ್ಷ ಸಿ. ಎನ್ ಬಾಬಾಳಗಾಂವ್ ಮಾತನಾಡಿ ವೀರೇಂದ್ರ ಹೆಗ್ಗಡೆಯವರು ಹುಟ್ಟು ಹಾಕಿದ ಜನಜಾಗೃತಿ ವೇದಿಕೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿರುವುದು ನಮ್ಮೆಲ್ಲರ ಪುಣ್ಯ. ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಅವರದು ದೊಡ್ಡ ಕೊಡುಗೆಯಾಗಿದ್ದು ನಾಡಿನಾದ್ಯಂತ ಮೆಚ್ಚುಗೆ ಪಡೆದಿದ್ದಾರೆ.ಇಂತಹ ಮಹಾನ್ ವ್ಯಕ್ತಿಗಳ ನೇತೃತ್ವದಲ್ಲಿ ನಮಗೆ ಸಿಕ್ಕಿರುವ ಈ ಅವಕಾಶವನ್ನು ಬಳಸಿಕೊಂಡು ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಜನಜಾಗೃತಿ ವೇದಿಕೆಯ ಎಲ್ಲಾ ಕಾರ್ಯಕ್ರಮಗಳನ್ನು ಉತ್ತಮ ರೀತಿಯಲ್ಲಿ ಅನುಷ್ಠಾನಕ್ಕೆ ತರುವ ಮೂಲಕ ಅಭಿವೃದ್ಧಿ ಹೊಂದಿದ ಸಮಾಜ ಕಟ್ಟುವ ಬಗ್ಗೆ ಒಟ್ಟಾಗಿ ದುಡಿಯೋಣ ಎಂದು ಸದಸ್ಯರಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಉಪಾಧ್ಯಕ್ಷರಾದ ಅಫ್ಜಲ್‌ಪುರ ತಾಲೂಕಿನ ಚಂದ್ರಶೇಖರ ಕರ್ಜಗಿ, ಆಳಂದ ತಾಲೂಕಿನ ಶಾಂತಪ್ಪ ಕೋರೆ, ಕಲಬುರಗಿ ತಾಲೂಕಿನ ನ್ಯಾಯವಾದಿ ಮಾಲತಿ ರೇಶ್ಮಿ, ಕಮಲಾಪುರ್ ತಾಲೂಕಿನ ಅನಿಲ್ ಕುಮಾರ್ ಡಾಂಗೆ, ಚಿಂಚೋಳಿ ತಾಲೂಕಿನ ನರಸಮ್ಮ ಆವಂಟಿ,ನ್ಯಾಯವಾದಿ ಸಿದ್ದು ಹಿರೇಮಠ ಸಲಹೆ ಸೂಚನೆ ನೀಡಿ ಅನಿಸಿಕೆಗಳನ್ನು ಹಂಚಿಕೊಂಡರು.

ಜನಜಾಗೃತಿ ವೇದಿಕೆಯ ಜಿಲ್ಲಾಕಾರ್ಯದರ್ಶಿ ಹಾಗೂ ಯೋಜನಾ ಜಿಲ್ಲಾ ನಿರ್ದೇಶಕ ಗಣಪತಿ ಮಾಳಂಜಿ ಸಭೆಯಲ್ಲಿ ವರದಿ ಮಂಡಿಸಿದರು.

ಜನಜಾಗೃತಿ ವೇದಿಕೆಯ ಯೋಜನಾಧಿಕಾರಿ ರಾಜೇಶ್ ಕೆ. ಜನಜಾಗೃತಿ ವೇದಿಕೆಯ ವಾರ್ಷಿಕ ಕಾರ್ಯಕ್ರಮಗಳು ಹಾಗೂ ಮಂಜೂರಾಗಿರುವ ಅನುದಾನಗಳ ಬಗ್ಗೆ ತಿಳಿಸಿದರು.

ಕಮಲಾಪುರ, ಕಲಬುರಗಿ, ಆಳಂದ, ಅಫ್ಜಲ್‌ಪುರ ಚಿಂಚೋಳಿ, ಸೇಡಂ ತಾಲೂಕಿನ ಜಿಲ್ಲಾ ಜನಜಾಗೃತಿ ಪದಾಧಿಕಾರಿಗಳು, ತಾಲೂಕಿನ ಕ್ಷೇತ್ರ ಯೋಜನಾಧಿಕಾರಿಗಳು ಉಪಸ್ಥಿತರಿದ್ದು ನೂತನವಾಗಿ ಯೋಜನಾ ಕಚೇರಿಗೆ ಆಗಮಿಸಿದ ನೂತನ ಯೋಜನಾಧಿಕಾರಿಗಳ ಪರಿಚಯವನ್ನು ಮಾಡಿ ಕಳೆದ ವರ್ಷದ ಸಾಧನೆಯ ವರದಿಯನ್ನು ಮಂಡಿಸಿದರು. ಅಫ್ಜಲ್‌ಪುರ ಯೋಜನಾಧಿಕಾರಿ ಮಹಾಂತೇಶ್ ಸ್ವಾಗತಿಸಿ ಕಮಲಾಪುರ ಯೋಜನಾಧಿಕಾರಿ ರಜಬ್ ಅಲಿ ವಂದಿಸಿದರು. ಜಿಲ್ಲಾ ವಿಚಕ್ಷಣಾಧಿಕಾರಿ ಚಿದಂಬರ ಕೆ. ನಿರೂಪಿಸಿದರು, ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು.

# ಮೆಲೋನಿ ಜೊತೆ ಮೋದಿ ವರ್ತನೆ ಹಾಸ್ಯಾಸ್ಪದ: ಹರಿಪ್ರಸಾದ್ ಟೀಕೆ



**ಬೆಂಗಳೂರು, ಮೇ 23:** 75 ವರ್ಷದ ಪ್ರಧಾನಿ ನರೇಂದ್ರ ಮೋದಿ ತಮಗಿಂತ ತೀರಾ ಸಣ್ಣ ವಯಸ್ಸಿನ ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಜೊತೆಗೆ ನಡೆದುಕೊಳ್ಳುತ್ತಿರುವ ರೀತಿ, ರೋಮ್ ನಗರದಲ್ಲಿ ಅವರಿಬ್ಬರು ತೆಗೆಸಿಕೊಂಡಿರುವ ಫೋಟೋಗಳನ್ನು ನೋಡಿದರೆ ದೇಶದ ಜನರಿಗೆ ನಗು ಬರುತ್ತದೆ. ದೇಶದಲ್ಲಿ ಇಷ್ಟೆಲ್ಲ ಸಮಸ್ಯೆ ಇರುವಾಗ ಮೇಲೋನಿ ಜತೆ ಮೆಲೋಡಿ ಹಂಚಿಕೊಂಡು ಕಾಲ ಕಳೆಯುತ್ತಿದ್ದಾರೆ ಎಂದು ಕಾಂಗ್ರೆಸ್ ನಾಯಕ, ವಿಧಾನ ಪರಿಷತ್ ಸದಸ್ಯ ಬಿ.ಕೆ ಹರಿಪ್ರಸಾದ್ ವಾಗ್ದಾಳಿ ನಡೆಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ನಿರುದ್ಯೋಗ, ಆರ್ಥಿಕ ಬಿಕ್ಕಟ್ಟು ಹಾಗೂ ಜ್ವಲಂತ ಜನವಿರೋಧಿ ಸಮಸ್ಯೆಗಳು ದಿನಕ್ಕೊಂದು ಹೆಚ್ಚಾಗುತ್ತಿದ್ದರೂ, ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಪರಿಸ್ಥಿತಿಯನ್ನು ಕಡೆಗಣಿಸಿ ವಿದೇಶಿ ಪ್ರವಾಸಗಳಲ್ಲಿ ನಿರತರಾಗಿದ್ದಾರೆ ಎಂದು ಕಿಡಿಕಾರಿದ್ದಾರೆ. ಪ್ರಧಾನಿ ಮೋದಿಯವರ ಆಡಳಿತ ವೈಖರಿಯನ್ನು ರೋಮ್ ಸಾಮ್ರಾಜ್ಯದ ಕ್ರೂರದೊರೆ ನೀರೋ ಚಕ್ರವರ್ತಿ ಮತ್ತು ಆಸ್ಟ್ರಿಚ್ (ಉಷ್ಟ್ರಪಕ್ಷಿ) ಹಕ್ಕಿಗೆ ಹೋಲಿಸಿ ಲೇವಡಿ ಮಾಡಿದ್ದಾರೆ.

ಪ್ರಧಾನಿ ಅವರ ವಿದೇಶಿ ಪ್ರವಾಸಗಳ ಹಪಾಹಪಿತನವನ್ನು ಟೀಕಿಸಿದ ಬಿ.ಕೆ.ಹರಿಪ್ರಸಾದ್, ಮೋದಿಯವರು ಒಂಥರಾ ಆಸ್ಟ್ರಿಚ್ ಪಕ್ಷಿ ಇದ್ದ ಹಾಗೆ. ಮರುಭೂಮಿಯಲ್ಲಿ ಭೀಕರ ಬಿರುಗಾಳಿ ಅಥವಾ ಸಂಕಷ್ಟ ಎದುರಾದಾಗ ಆಸ್ಟ್ರಿಚ್ ಪಕ್ಷಿಯು ಮರಳಿನೊಳಗೆ ತನ್ನ ಕತ್ತನ್ನು ಹೂತುಕೊಂಡು, ಜಗತ್ತಿನಲ್ಲಿ ಏನೂ ಆಗುತ್ತಿಲ್ಲ ಎಂಬಂತೆ ಸುಮ್ಮನೆ ಕೂರುತ್ತದೆ. ಇಂದಿನ ಪ್ರಧಾನಿಯವರೂ ಅಷ್ಟೇ; ದೇಶದಲ್ಲಿ ಸಮಸ್ಯೆಗಳು ಬಿರುಗಾಳಿಯಂತೆ ಎದ್ದಾಗ ಅವುಗಳನ್ನು ಎದುರಿಸುವ ಬದಲು ವಿದೇಶಿ ಪ್ರವಾಸಗಳ ಹೆಸರಿನಲ್ಲಿ ಹೋಗಿ ಅಡಗಿಕೊಳ್ಳುತ್ತಾರೆ ಎಂದು ಲೇವಡಿ ಮಾಡಿದ್ದಾರೆ.

# ಕಾರ್ಮಿಕರ ಕನಿಷ್ಠ ವೇತನ ಶೇ.60 ಏರಿಕೆ ಮಾಡಿ ಸರ್ಕಾರ ಅಧಿಸೂಚನೆ

**ರಾಜ್ಯದ 81 ಅನುಸೂಚಿತ ಉದ್ಯೋಗಗಳಲ್ಲಿ ದುಡಿಯುವವರಿಗೆ ಅನುಕೂಲ**

**ಬೆಂಗಳೂರು, ಮೇ 23:** ಕಾರ್ಮಿಕರ ಕನಿಷ್ಠ ವೇತನವನ್ನು ಸರಾಸರಿ ಶೇ.60ರಷ್ಟು ಏರಿಕೆ ಮಾಡಿ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಈ ಮೂಲಕ ರಾಜ್ಯದ ಕೋಟ್ಯಂತರ ಕಾರ್ಮಿಕರಿಗೆ ಸರ್ಕಾರ, ಕಾರ್ಮಿಕ ಇಲಾಖೆಯ ಮೂಲಕ ಭರ್ಜರಿ ಕೊಡುಗೆ ನೀಡಿದೆ. ಈ ಅಧಿಸೂಚನೆಯು ರಾಜ್ಯದ ಅಸಂಘಟಿತ ಮತ್ತು ನಿರ್ದಿಷ್ಟ ವಲಯಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಆರ್ಥಿಕ ಸೌಲಭ್ಯವನ್ನು ಒದಗಿಸಲಿದೆ. ಸುಪ್ರೀಂಕೋರ್ಟ್ ನಿರ್ದೇಶನದ ಅನ್ವಯ ಈ ವೇತನ ಪರಿಷ್ಕರಣೆಯನ್ನು ಮಾಡಲಾಗಿದೆ. ಈ ಬಾರಿಯ ಅಧಿಸೂಚನೆಯ ವಿಶೇಷವೆಂದರೆ ಇದೇ ಮೊದಲ ಬಾರಿಗೆ ಎಲ್ಲಾ ನಿಗದಿತ ಉದ್ಯೋಗಗಳನ್ನು ಒಂದೇ ಅಧಿಸೂಚನೆಯಡಿ ತಂದಿರುವುದು. ಈ ಹಿಂದೆ ಇದ್ದ ನಾಲ್ಕು ವಲಯಗಳ ವರ್ಗೀಕರಣವನ್ನು ಮೂರು ವಲಯಗಳಿಗೆ ಪರಿಷ್ಕರಿಸಲಾಗಿದೆ.

ನೂತನ ಕಾರ್ಮಿಕರ ಕನಿಷ್ಠ ವೇತನ ಹೆಚ್ಚಳ ಅಧಿಸೂಚನೆಯು ಖಾಸಗಿ ಶಾಲೆ– ಕಾಲೇಜು ಬೋಧಕೇತರ ಸಿಬ್ಬಂದಿ, ಇ–ಕಾಮರ್ಸ್ ವಲಯದ ನೌಕರರು ಮತ್ತು ಕೊರಿಯರ್ ಸಂಸ್ಥೆಗಳ ನೌಕರರು ಮತ್ತು ಧಾರ್ಮಿಕ ಸಂಸ್ಥೆಗಳಲ್ಲಿ ದುಡಿಯುವ ಸಿಬ್ಬಂದಿಗೂ ಲಾಭ ಮಾಡಿಕೊಟ್ಟಿದೆ. ಒಟ್ಟಾರೆಯಾಗಿ ಕರ್ನಾಟಕದಲ್ಲಿನ 81 ಅನುಸೂಚಿತ ಉದ್ಯೋಗಗಳಲ್ಲಿ ದುಡಿಯುವ ಶ್ರಮಿಕರಿಗೆ ಅನುಕೂಲವಾಗಲಿದೆ.ಕನಿಷ್ಠ ವೇತನ ಪರಿಷ್ಕರಣೆ ಮಾಡಬೇಕು ಎಂಬುದು ಬಹುದಿನಗಳ ಬೇಡಿಕೆಯಾಗಿತ್ತು. ವಿವಿಧ ಸಂಘಟನೆಗಳು, ಕಾರ್ಮಿಕರ ಒಕ್ಕೂಟಗಳು ಇದಕ್ಕಾಗಿ ಬೇಡಿಕೆ ಇಟ್ಟಿದ್ದವು. ಇದೀಗ ಕಾರ್ಮಿಕ ಇಲಾಖೆ ಸ್ಪಂದಿಸಿದೆ.

### 3 ವಲಯದಲ್ಲಿ ವರ್ಗೀಕರಣ

2016–2017 ನಂತರ ಒಂದು ದಶಕದ ನಂತರ ಈ ಪರಿಷ್ಕರಣೆ ಜಾರಿಗೆ ಬಂದಿದೆ. ಕಾರ್ಮಿಕ ಸಂಘಗಳು ಕನಿಷ್ಠ ವೇತನ ಅಧಿಸೂಚನೆ ಹೊರಡಿಸಲು ಒತ್ತಾಯಿಸುತ್ತಿದ್ದವು. ಆದರೆ ಕೈಗಾರಿಕೆಗಳು, ವಿಶೇಷವಾಗಿ ಎಂಎಸ್‌ಎಂಇ ವಲಯದಿಂದ ವಿರೋಧ ವ್ಯಕ್ತವಾಗಿತ್ತು. ವಲಯ 3 ರಲ್ಲಿನ ಕೌಶಲ್ಯರಹಿತ ಕಾರ್ಮಿಕರಿಗೆ ರೂ.19,300ರಿಂದ ವಲಯ 1ರಲ್ಲಿ ಹೆಚ್ಚು ಕೌಶಲ್ಯಪೂರ್ಣ ಕಾರ್ಮಿಕರಿಗೆ 31,100 ರವರೆಗೆ ಏರಿಕೆ ಮಾಡಲಾಗಿದೆ. ಎರಡು ವರ್ಷಗಳ 1,030 ಮೊತ್ತದ ವೇರಿಯಬಲ್ ಡಿ.ಎ.ಯನ್ನು (ವಿಡಿಎ) ಕನಿಷ್ಠ ವೇತನದಲ್ಲಿ ಸೇರಿಸಲಾಗಿದೆ. ಕನಿಷ್ಠ ವೇತನ ಲೆಕ್ಕಾಚಾರ ಮಾಡಲು ರಾಜ್ಯವನ್ನು ಮೂರು ವಲಯಗಳಾಗಿ ವರ್ಗೀಕರಿಸಲಾಗಿದೆ. ಗ್ರೇಟರ್ ಬೆಂಗಳೂರು ಪ್ರದೇಶವು ವಲಯ 1ರ ಅಡಿಯಲ್ಲಿ ಬರಲಿದೆ. ವಲಯ 2ರಲ್ಲಿ ಜಿಲ್ಲಾ ಕೇಂದ್ರಗಳು ಬರಲಿವೆ ಮತ್ತು ಉಳಿದ ಪ್ರದೇಶಗಳು ವಲಯ 3ರ ಅಡಿಯಲ್ಲಿ ವರ್ಗೀಕರಿಸಲಾಗಿದೆ.

# ಕೇಸರಿ ವಸ್ತ್ರ ಧರಿಸಿ ಶಾಲೆಗೆ ಬಂದರೆ ಕಾನೂನು ಕ್ರಮ

**ಶಿಕ್ಷಣ ಸಂಸ್ಥೆಗಳಲ್ಲಿ ಧಾರ್ಮಿಕ ಉಡುಪುಗಳಿಗೆ ಆಸ್ಪದವಿಲ್ಲ: ಸಚಿವ ಮಧು ಬಂಗಾರಪ್ಪ**



ಬೆಂಗಳೂರು, ಮೇ 23: ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಧಾರ್ಮಿಕ ಉಡುಪುಗಳಿಗೆ ಆಸ್ಪದವಿಲ್ಲ. ಒಂದುವೇಳೆ ಈ ನಿಯಮ ಮೀರಿ ಯಾರಾದರೂ ಕೇಸರಿ ವಸ್ತ್ರ ಧರಿಸಿ ಬಂದರೆ ಅಂತಹವರ ವಿರುದ್ಧ ಕಾನೂನು ಕ್ರಮ ಜರುಗಿಸುವುದಾಗಿ ಎಂದು ಸಚಿವ ಮಧು ಬಂಗಾರಪ್ಪ ಎಚ್ಚರಿಕೆ ನೀಡಿದ್ದಾರೆ.

ಪ್ರತಿಪಕ್ಷಗಳು ಮೊದಲು ಕೇಂದ್ರ ಸರ್ಕಾರದ ವಿದ್ಯಾಲಯಗಳಲ್ಲಿರುವ ನಿಯಮಾವಳಿಗಳನ್ನು ಅರಿತುಕೊಳ್ಳಲಿ ಎಂದು ಕುಟುಕಿದ್ದಾರೆ.ರಾಷ್ಟ್ರೀಯ ಮಟ್ಟದ ಪರೀಕ್ಷೆಗಳನ್ನು ಸಮರ್ಪಕವಾಗಿ ನಡೆಸದ ಕೇಂದ್ರ ಸರ್ಕಾರ ವಿಫಲವಾಗಿದ್ದು ಪರೀಕ್ಷಾರ್ಥಿಗಳನ್ನು ಸಂಕಷ್ಟಕ್ಕೆ ದೂಡಿದೆ ಎಂದು ತರಾಟೆಗೆ ತೆಗೆದುಕೊಂಡರು.

ದೇಶದಲ್ಲಿ 'ನೀಟ್' ಪರೀಕ್ಷಾ ಹಗರಣದ ಹೊಣೆ ಹೊರಲಾಗದೆ ಕೇಂದ್ರ ಸಚಿವರು ಕೆಲ ದಿನ ತಲೆಮರೆಸಿಕೊಂಡಿದ್ದರು ಎಂದು ಆರೋಪಿಸಿದ ಸಚಿವರು, ಕಳೆದ ಮೂರು ವರ್ಷಗಳಲ್ಲಿ ನಮ್ಮ ಇಲಾಖೆಯಲ್ಲಿ ಯಾವುದೇ ಪ್ರಶ್ನೆಪತ್ರಿಕೆ ಸೋರಿಕೆಯಾಗಿಲ್ಲ ಎಂಬ ಹೆಮ್ಮೆಯಿದೆ ಎಂದಿದ್ದಾರೆ.

ಈ ವೇಳೆ ಲೋಪವಿಲ್ಲದೆ ಪರೀಕ್ಷೆ ನಡೆಸುವುದನ್ನು ತಾವೇ ಕೇಂದ್ರ ಸರ್ಕಾರಕ್ಕೆ ಕಲಿಸಿಕೊಡುವುದಾಗಿ ಸವಾಲು ಹಾಕಿದ ಅವರು, ಶೇಕಡಾ 96 ರಷ್ಟಿರುವ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿರುವ ಬಿಜೆಪಿಗೆ ಶೀಘ್ರದಲ್ಲೇ ದೇಶದ ಜನ ಬುದ್ಧಿ ಕಲಿಸಲಿದ್ದಾರೆ ಎಂದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# 19ನೇ ಉದ್ಯೋಗ ಮೇಳ: 51 ಸಾವಿರ ನೇಮಕಾತಿ ಪತ್ರ ವಿತರಣೆ




## ವಿಶ್ವವು ಭಾರತದ ಬೆಳವಣಿಗೆಯ ಪ್ರಯಾಣಕ್ಕೆ ಸೇರಲು ಬಯಸುತ್ತದೆ ಎಂದ ಪ್ರಧಾನಿ ಮೋದಿ

**ನವದೆಹಲಿ, ಮೇ 23:** 19ನೇ ಆವೃತ್ತಿಯ ರೋಜ್‌ಗಾರ್ ಮೇಳದ ಅಡಿಯಲ್ಲಿ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವಕರಿಗೆ 51,000 ಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ಪ್ರಧಾನಿ ನರೇಂದ್ರ ಮೋದಿ ಶನಿವಾರ ವಿತರಿಸಿದರು, ಭಾರತದ ಯುವ ಜನಸಂಖ್ಯೆಯು 2047 ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವತ್ತ ದೇಶದ ಮೆರವಣಿಗೆಯನ್ನು ಮುನ್ನಡೆಸುತ್ತಿದೆ ಎಂದು ಪ್ರತಿಪಾದಿಸಿದರು. ನೇಮಕ ಪತ್ರ ಪಡೆದ ಅಭ್ಯರ್ಥಿಗಳನ್ನು ಉದ್ದೇಶಿಸಿ ವಿಡಿಯೋ ಸಂವಾದದಲ್ಲಿ ಮಾತನಾಡಿದ ಮೋದಿ, ದೇಶದ ಯುವಕರಿಗೆ ಹೊಸ ಉದ್ಯೋಗಾವ'ಕಾಶಗಳೊಂದಿಗೆ ಸಬಲೀಕರಣ ಗೊಳಿಸುವ ಮತ್ತು ರಾಷ್ಟ್ರ ನಿರ್ಮಾಣದಲ್ಲಿ ಅವರ ಪಾತ್ರವನ್ನು ಬಲಪಡಿಸುವ ಸರ್ಕಾರದ ಬದ್ಧತೆಯನ್ನು ರೋಜ್‌ಗಾರ್ ಮೇಳ ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. "ವಿಕಸಿತ್ ಭಾರತ್ ಕಡೆಗೆ ಪ್ರಯಾಣವನ್ನು ವೇಗಗೊಳಿಸುವಲ್ಲಿ ಭಾರತದ ಯುವಕರು ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಹೊಸ ಅವಕಾಶಗಳೊಂದಿಗೆ ಯುವ ಶಕ್ತಿಯನ್ನು ಸಬಲೀಕರಣಗೊಳಿಸುವ ನಮ್ಮ ಸರ್ಕಾರದ ಬದ್ಧತೆಯನ್ನು ರೋಜ್‌ಗಾರ್ ಮೇಳ ಪ್ರತಿಬಿಂಬಿಸುತ್ತದೆ" ಎಂದು ಪ್ರಧಾನಿ ಹೇಳಿದರು. ಭಾರತದಲ್ಲಿ ಬೆಳೆಯುತ್ತಿರುವ ಜಾಗತಿಕ ವಿಶ್ವಾಸವನ್ನು ಎತ್ತಿ ತೋರಿಸಿದ ಮೋದಿ, ಅದರ ಯುವಪ್ರತಿಭೆ ಮತ್ತು ತ್ವರಿತ ತಾಂತ್ರಿಕ ಪ್ರಗತಿಯಿಂದಾಗಿ ಜಗತ್ತು ದೇಶದೊಂದಿಗೆ ಪಾಲುದಾರರಾಗಲು ಉತ್ಸುಕವಾಗಿದೆ ಎಂದು ಹೇಳಿದರು.

ಈ ಎಲ್ಲಾ ಒಪ್ಪಂದಗಳು ಉಜ್ವಲ ಮತ್ತು ಸಮರ್ಥ ಭಾರತದ ಭರವಸೆಯೊಂದಿಗೆ ಬರುತ್ತವೆ" ಎಂದು ಅವರು ಹೇಳಿದರು.

19ನೇ ರೋಜ್‌ಗಾರ್ ಮೇಳವನ್ನು ದೇಶಾದ್ಯಂತ 47 ಸ್ಥಳಗಳಲ್ಲಿ ನಡೆಸಲಾಯಿತು. ಹೊಸದಾಗಿ ನೇಮಕಗೊಂಡ ಅಭ್ಯರ್ಥಿಗಳು ರೈಲ್ವೆ ಸಚಿವಾಲಯ, ಗೃಹ ವ್ಯವಹಾರಗಳ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಹಣಕಾಸು ಸೇವೆಗಳ ಇಲಾಖೆ ಮತ್ತು ಉನ್ನತ ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸೇರಲಿದ್ದಾರೆ.

ಸರ್ಕಾರದ ಪ್ರಕಾರ, ಈ ಉಪಕ್ರಮವನ್ನು ಪ್ರಾರಂಭಿಸಿದ ನಂತರ ಇಲ್ಲಿಯವರೆಗೆ ಆಯೋಜಿಸಲಾದ 18 ರೋಜ್‌ಗಾರ್ ಮೇಳಗಳ ಮೂಲಕ 2 ಲಕ್ಷ ನೇಮಕಾತಿ ಪತ್ರಗಳನ್ನು ವಿತರಿಸಲಾಗಿದೆ. ಯುವಕರಿಗೆ ಉದ್ಯೋಗಾವಕಾಶಗಳನ್ನು ವಿಸ್ತರಿಸುವುದರ ಜೊತೆಗೆ ಸರ್ಕಾರಿ ಇಲಾಖೆಗಳಲ್ಲಿನ ಖಾಲಿ ಹುದ್ದೆಗಳನ್ನು ಸಮಯಕ್ಕೆ ಅನುಗುಣವಾಗಿ ಭರ್ತಿ ಮಾಡುವ ಗುರಿಯನ್ನು ಹೊಂದಿರುವ ಕೇಂದ್ರದ ಪ್ರಮುಖ ನೇಮಕಾತಿ ಡ್ರೈವ್‌ಗಳಲ್ಲಿ ಒಂದಾಗಿ ರೋಜ್‌ಗಾರ್ ಮೇಳ ಹೊರಹೊಮ್ಮಿದೆ. ಸರ್ಕಾರವು ತನ್ನ ವಿಶಾಲ ಆರ್ಥಿಕ ಮತ್ತು ಆಡಳಿತ ಕಾರ್ಯಸೂಚಿಯ ಭಾಗವಾಗಿ ಸಾರ್ವಜನಿಕ ವಲಯದ ನೇಮಕಾತಿ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿಗೆ ನಿರಂತರವಾಗಿ ಒತ್ತು ನೀಡುತ್ತಿರುವ ಮಧ್ಯೆ ಇತ್ತೀಚಿನ ಸುತ್ತಿನ ನೇಮಕಾತಿ ಬಂದಿದೆ.

# ಜನರ ಹಣ ಲೂಟಿ ಮಾಡುವ ಬಿಜೆಪಿ ಹಸಿವು ತಣಿದಿಲ್ಲ: ಖರ್ಗೆ



ನವದೆಹಲಿ, ಮೇ 23: ಚುನಾವಣೆಯ ಫಲಿತಾಂಶ ಹೊರಬೀಳುವವರೆಗೂ ಸುಮ್ಮನಿದ್ದ ಕೇಂದ್ರ ಸರ್ಕಾರವು ಕಳೆದ ಹತ್ತು ದಿನಗಳಲ್ಲಿ ಮೂರು ಬಾರಿ ಪೆಟ್ರೋಲ್, ಡೀಸೆಲ್ ಬೆಲೆಯನ್ನು ಏರಿಸಿದೆ. ಈ ವಿಚಾರದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಶನಿವಾರ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಬಿಜೆಪಿ ಜನರ ಗಳಿಕೆಯನ್ನು ಕಂತು-ಕಂತಾಗಿ ಲೂಟಿ ಮಾಡುತ್ತಿದೆ. ಬಿಜೆಪಿ ಹಸಿವು ಇನ್ನೂ ತಣಿದಿಲ್ಲ ಎಂದು ಟೀಕಿಸಿದ್ದಾರೆ.

ಶನಿವಾರ ಮತ್ತೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾಗಿದೆ. ಕಳೆದ ಮಂಗಳವಾರ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಪ್ರತಿ ಲೀಟರ್ಗೆ 90 ಪೈಸೆ ಹೆಚ್ಚಿಸಿತ್ತು. ಅದಕ್ಕೂ ಹಿಂದೆ ಮೂರು ರೂ. ಬೆಲೆ ಏರಿಸಲಾಗಿತ್ತು. ಅಂದರೆ ಕಳೆದ ಹತ್ತು ದಿನಗಳ ಅವಧಿಯಲ್ಲಿ ಮೂರನೇ ಬಾರಿಗೆ ಪೆಟ್ರೋಲ್, ಡೀಸೆಲ್ ದರ ಏರಿಕೆಯಾಗಿದೆ. ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ ಲೀಟರ್‌ಗೆ 94 ಪೈಸೆ ಏರಿಕೆಯಾಗಿದೆ, ಡೀಸೆಲ್ ಬೆಲೆ 98 ಪೈಸೆ ಏರಿಕೆಯಾಗಿದೆ. ಹೊಸ ದರದ ಅನ್ವಯ ಪೆಟ್ರೋಲ್ ಲೀಟರ್‌ಗೆ 107.12 ರೂ., ಡೀಸೆಲ್ ಬೆಲೆ 95.04 ರೂ.ಗಳಿಗೆ ಏರಿಕೆಯಾಗಿದೆ.

ಹೀಗೆ ಪದೇ ಪದೇ ಇಂಧನ ಬೆಲೆ ಏರಿಸುತ್ತಿರುವ ವಿಚಾರದಲ್ಲಿ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ಖರ್ಗೆ ತಿಳಿಸಿದ್ದಾರೆ. ಪೆಟ್ರೋಲ್ ಈಗ 100ರ ಗಡಿ ದಾಟಿದೆ. ಸಾರ್ವಜನಿಕರು ಕಷ್ಟಪಟ್ಟು ಸಂಪಾದಿಸಿದ ಆದಾಯದ ವ್ಯವಸ್ಥಿತ ಲೂಟಿ ಇದು! ಪೆಟ್ರೋಲ್ ಮತ್ತು ಡೀಸೆಲ್ ಮೇಲೆ ದೈನಂದಿನ 1,000 ಕೋಟಿ ಕೇಂದ್ರ ತೆರಿಗೆ ವಿಧಿಸಿದ ನಂತರವೂ ಬಿಜೆಪಿಯ ಹಸಿವು ತಣಿದಿಲ್ಲ ಎಂದು ದೂರಿದ್ದಾರೆ.

ಅಂತಾರಾಷ್ಟ್ರೀಯ ಬೆಲೆಗಳು ಕಡಿಮೆಯಾದಾಗ, ಅದರ ಪ್ರಯೋಜನವನ್ನು ಸಾರ್ವಜನಿಕರಿಗೆ ನೀಡಲ್ಲ. (ಬೆಲೆ ಇಳಿಕೆ ಮಾಡಲ್ಲ) ಆದರೆ ಈಗ ನಿರ್ದಯವಾಗಿ ಜನರನ್ನು ದೋಚುತ್ತಿದ್ದಾರೆ. ಬಿಕ್ಕಟ್ಟು ಎದುರಾದಾಗ, ಚುನಾವಣಾ ಪ್ರಚಾರದಲ್ಲಿ ವ್ಯಸ್ತರಾದರು. ಚುನಾವಣೆಗಳು ಮುಗಿದ ನಂತರ, ತ್ಯಾಗ ಸದ್ಗುಣಗಳ ಬೋಧನೆಗೆ ಇಳಿದರು. ಅದಾದ ಬಳಿಕ ಕೇವಲ 8 ದಿನಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳನ್ನು ಮೂರು ಬಾರಿ ಹೆಚ್ಚಿಸಿದ್ದಾರೆ ಎಂದು ಖರ್ಗೆ ಹೇಳಿದ್ದಾರೆ.

ಇತರ ರಾಷ್ಟ್ರಗಳಿಗೆ ಹೋಲಿಸಿದರೆ, ಭಾರತದಲ್ಲಿ ಇಂಧನ ಬೆಲೆಗಳು ಅತ್ಯಂತ ಕಡಿಮೆಯಾಗಿವೆ ಎಂದು ಕೇಂದ್ರ ಸರ್ಕಾರ ಹೇಳಿಕೊಳ್ಳುತ್ತದೆ. ಪಶ್ಚಿಮ ಏಷ್ಯಾದಲ್ಲಿ ಯುದ್ಧದ ನಂತರ ಮೋದಿ ಅವರು ನಮ್ಮಲ್ಲಿ ಏನೂ ತೊಂದರೆಯಿಲ್ಲ, ಎಲ್ಲವೂ ಇದೆ ಎಂದು ಪದೇ ಪದೇ ಹೇಳೀದರು. ಆದರೆ ಇತರ ರಾಷ್ಟ್ರಗಳು ತಮ್ಮ ನಾಗರಿಕರಿಗೆ ಪರಿಹಾರವನ್ನು ಒದಗಿಸುವಲ್ಲಿ ತೊಡಗಿತ್ತು ಎಂದು ಹೇಳಿದ್ದಾರೆ.

ಇಟಲಿ ಇಂಧನದ ಮೇಲಿನ ಅಬಕಾರಿ ಸುಂಕವನ್ನು ಕಡಿತಗೊಳಿಸಿದೆ. ಇದರಿಂದಾಗಿ ಜನರಿಗೆ ಸಹಾಯವಾಗಿದೆ. ಆಸ್ಟ್ರೇಲಿಯಾ ತನ್ನ ಅಬಕಾರಿ ಸುಂಕವನ್ನು ಕಡಿಮೆ ಮಾಡಿದೆ. ಇದರಿಂದಾಗಿ ಅಲ್ಲಿ ಪೆಟ್ರೋಲ್ ಬೆಲೆಯಲ್ಲಿ ಸುಮಾರು 17ರಷ್ಟು ಇಳಿಕೆಯಾಗಿದೆ. ಜರ್ಮನಿ ತೈಲದ ಮೇಲಿನ ತೆರಿಗೆಯನ್ನು ಕಡಿಮೆ ಮಾಡಿದೆ. ಇದರಿಂದಾಗಿ ಇಂಧನ ಬೆಲೆಗಳು ಲೀಟರ್‌ಗೆ 1719 ರಷ್ಟು ಇಳಿಕೆಯಾಗಿದೆ. ಯುಕೆ ಮನೆಗಳಿಗೆ 100 ಪೌಂಡ್ ತೈಲ ಸಂಬಂಧಿತ ಆರ್ಥಿಕ ಸಹಾಯವನ್ನು ನೀಡಿದೆ. ಇಂಧನ ಮತ್ತು ವಿದ್ಯುತ್ ಎರಡರ ಮೇಲಿನ ತೆರಿಗೆಗಳನ್ನೂ ಕಡಿಮೆ ಮಾಡಿದೆ. ಐರ್ಲೆಂಡ್‌ನಲ್ಲಿ 250 ದಶಲಕ್ಷ ಪರಿಹಾರ ಪ್ಯಾಕೇಜ್ ನೀಡಿರುವುದಕ್ಕೆ ಧನ್ಯವಾದಗಳು. ಇದರಿಂದಾಗಿ ಪೆಟ್ರೋಲ್ ಬೆಲೆಗಳು ಲೀಟರ್‌ಗೆ ಸುಮಾರು 0.15 ರಷ್ಟು ಮತ್ತು ಡೀಸೆಲ್ ಬೆಲೆಗಳು ಲೀಟರ್‌ಗೆ 0.20 ರಷ್ಟು ಇಳಿದಿದೆ ಎಂದು ಮಲ್ಲಿಕಾರ್ಜುನ ಖರ್ಗೆ ವಿವರಿಸಿದ್ದಾರೆ.

ಆದರೆ ಪ್ರಧಾನಿ ನರೇಂದ್ರ ಮೋದಿಯವರೇ ದಯವಿಟ್ಟು ವಿವರಿಸಿ. ಈ ವ್ಯವಸ್ಥಿತ ಲೂಟಿಯ ಆದಾಯವು ನಿಜವಾಗಿಯೂ ಯಾರಿಗೆ ಹರಿಯುತ್ತಿದೆ ನೀವು ಏಕೆ ರಾಜಿ ಮಾಡಿಕೊಂಡಂತೆ ಕಾಣುತ್ತೀರಿ ಈ ಸರ್ಕಾರದೊಳಗಿನ ನಾಯಕತ್ವ ಬಿಕ್ಕಟ್ಟು ತುಂಬಾ ನಿಜ. 140 ಕೋಟಿ ಭಾರತೀಯರಿಗೆ ಇದು ತಿಳಿದಿದೆ ಎಂದು ಖರ್ಗೆ ಹೇಳಿದ್ದಾರೆ.




ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶನಿವಾರ ಮಹಾರಾಷ್ಟ್ರದಲ್ಲಿ ಭಾರತದ ಮೊದಲ 300 ಕಿಮೀ ಸಾರ್ವತ್ರಿಕ ರಾಕೆಟ್ ಉಡಾವಣಾ ವ್ಯವಸ್ಥೆಯನ್ನು ಉದ್ಘಾಟಿಸಿದರು.

# 3 ವರ್ಷವಾದರೂ ಪ್ರತಿಪಕ್ಷ ನಾಯಕನಿಗಿಲ್ಲ ಸರ್ಕಾರಿ ನಿವಾಸ

**ಐದಾರು ಬಾರಿ ಪತ್ರ ಬರೆದರೂ ಸ್ಪಂದನೆಯಿಲ್ಲ**

**ಸರ್ಕಾರದ ವಿರುದ್ಧ ಆರ್.ಅಶೋಕ್ ಅಸಮಾಧಾನ**



**ಬೆಂಗಳೂರು, ಮೇ 23:** ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 3 ವರ್ಷ ಪೂರ್ಣಗೊಳಿಸುತ್ತಿರುವ ಸಂದರ್ಭದಲ್ಲಿ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರಿಗೆ ಇನ್ನೂ ಸರ್ಕಾರಿ ನಿವಾಸವನ್ನು ಮಂಜೂರು ಮಾಡಿಲ್ಲ. ಹುದ್ದೆ ಅಲಂಕರಿಸಿದಾಗಿನಿಂದ ಈವರೆಗೆ ಹಲವು ಬಾರಿ ಪತ್ರ ಬರೆದು ಮನವಿ ಮಾಡಿಕೊಂಡಿದ್ದರೂ, ರಾಜ್ಯ ಸರ್ಕಾರವು ಸ್ಪಂದಿಸಿಲ್ಲ ಎಂದು ಅವರು ಆಡಳಿತ ಪಕ್ಷದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಶಿಷ್ಟಾಚಾರದ ಪ್ರಕಾರ ವಿಧಾನಸಭೆ ಹಾಗೂ ವಿಧಾನಪರಿಷತ್ ವಿಪಕ್ಷದ ನಾಯಕರಿಗೆ ಸರ್ಕಾರಿ ಬಂಗಲೆ ನೀಡಬೇಕು. ಈ ಹಿಂದೆ ಬಿಜೆಪಿ ಸರ್ಕಾರ ಆಡಳಿತದಲ್ಲಿದ್ದ ಸಂದರ್ಭದಲ್ಲಿ ಕುಮಾರಕೃಪ ರಸ್ತೆಯಲ್ಲಿರುವ ಸರ್ಕಾರಿ ಬಂಗಲೆ ನೀಡಲಾಗಿತ್ತು. ಇದು ಅದೃಷ್ಟದ ಬಂಗಲೆ ಎಂದೇ ನಂಬಲಾಗಿತ್ತು. ಇದೀಗ ಆ ಬಂಗಲೆಯಲ್ಲಿ ಡಿಸಿಎಂ ಡಿ. ಕೆ.ಶಿವಕುಮಾರ್ ಉಳಿದುಕೊಂಡಿದ್ದಾರೆ.

ಆರ್.ಅಶೋಕ್ ಅವರು ಬೆಂಗಳೂರಿನ ರೇಸ್‌ಕೋರ್ಸ್ ರಸ್ತೆಯಲ್ಲಿರುವ ರೇಸ್‌ವ್ಯೂ ಕಾಟೇಜ್ ಅಥವಾ ಕುಮಾರಪಾರ್ಕ್‌ನಲ್ಲಿರುವ ನಿವಾಸಗಳನ್ನು ಮಂಜೂರು ಮಾಡುವಂತೆ ಮುಖ್ಯಮಂತ್ರಿ ಮತ್ತು ಮುಖ್ಯ ಕಾರ್ಯದರ್ಶಿಗೆ ಇದುವರೆಗೆ ಐದಾರು ಬಾರಿ ಅಧಿಕೃತ ಪತ್ರಗಳನ್ನು ಬರೆದಿದ್ದಾರೆ. ಹಲವು ಬಾರಿ ಪತ್ರ ಬರೆದು ಹಾಗೂ ಅಧಿಕಾರಿಗಳನ್ನು ಖುದ್ದಾಗಿ ಭೇಟಿಯಾದರೂ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಲಾಗಿದೆ. ಅಧಿಕೃತ ನಿವಾಸ ಇಲ್ಲದಿರುವುದರಿಂದ, ಜಯನಗರದ ಸ್ವಂತ ನಿವಾಸದಿಂದಲೇ ಅಧಿಕೃತ ಸಭೆಗಳನ್ನು ನಡೆಸುತ್ತಿದ್ದಾರೆ. ಈ ಬಗ್ಗೆ ಸ್ವತಃ ಆರ್.ಅಶೋಕ್ ಅಧಿಕೃತವಾಗಿ ಹೇಳಿಕೊಂಡಿದ್ದಾರೆ.

### ತಕ್ಷಣ ಕೈಗೊಳ್ಳುವುದಾಗಿ ಸಿಎಂ ಭರವಸೆ

**ಇದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ ಅವರು ಇದು ಗಂಭೀರವಾದ ವಿಷಯ. ಈ ಬಗ್ಗೆ ಇದುವರೆಗೆ ಮಾಹಿತಿ ಇರಲಿಲ್ಲ ತಕ್ಷಣವೇ ನಿಮಗೆ ಸರ್ಕಾರಿ ಬಂಗಲೇ ಮಂಜೂರು ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವುದಾಗಿ ತಿಳಿಸಿದರು. ಅಲ್ಲದೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ನಿರ್ಣಯವನ್ನು ಮಂಡಿಸುವುದಾಗಿ ಸಿಎಂ ಆಶ್ವಾಸನೆ ನೀಡಿದ್ದಾರೆ. ಅಲ್ಲದೆ ಸಭೆಯಲ್ಲಿ ಭಾಗಿಯಾಗಿದ್ದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕೂಡಲೇ ಅಗತ್ಯವಿರುವ ಕಡೆ ನಿವಾಸ ಮಂಜೂರಾತಿಗೆ ಕ್ರಮ ತೆಗೆದುಕೊಳ್ಳುವಂತೆ ಸೂಚನೆ ಕೊಟ್ಟಿದ್ದಾರೆ ಎನ್ನಲಾಗಿದೆ.**

ನಾವು ಐದಾರು ಬಾರಿ ಈ ಸಂಬಂಧ ಪತ್ರವನ್ನು ಬರೆದಿದ್ದೇನೆ. ಹಾಗಿದ್ದರೂ ಸರ್ಕಾರ ಸ್ಪಂದನೆ ಮಾಡಿಲ್ಲ ಎಂದಿದ್ದಾರೆ.

ವಿಧಾನಸೌಧದಲ್ಲಿ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರ ಆಯ್ಕೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಸಭೆಯಲ್ಲಿ ಈ ವಿಷಯ ಪ್ರಸ್ತಾಪಿಸಿದ ಅಶೋಕ್, ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷ ಪೂರ್ಣಗೊಳಿಸುತ್ತಿದೆ ವಿಧಾನಸಭೆಯ ವಿರೋಧ ಪಕ್ಷದ ನಾಯಕನಿಗೆ ಒಂದು ಸರ್ಕಾರಿ ಬಂಗಲೇ ನೀಡದಿರುವುದು ಅತ್ಯಂತ ನಾಚಿಕೆಗೇಡಿನ ಸಂಗತಿ. ಒಬ್ಬ ವಿರೋಧ ಪಕ್ಷದ ನಾಯಕನನ್ನು ಈ ರೀತಿ ನಡೆಸಿಕೊಳ್ಳುವುದು ಸರಿಯೇ ಎಂದು ಖಾರವಾಗಿ ಪ್ರಶ್ನೆ ಮಾಡಿದ್ದಾರೆ. ಹಿಂದೆ ನೀವು ವಿರೋಧ ಪಕ್ಷದ ನಾಯಕನಾಗಿದ್ದ ವೇಳೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ನಿಮಗೆ ಕೇಳಿದ ಕಡೆ ಸರ್ಕಾರಿ ಬಂಗಲೆಯನ್ನು ಮಂಜೂರು ಮಾಡಿದ್ದೆವು. ಮೂರು ವರ್ಷಗಳಲ್ಲಿ ಹಲವು ಬಾರಿ ಮನವಿ ಮಾಡಿದರೂ ಒಂದು ನಿವಾಸ ಮಂಜೂರು ಮಾಡಲು ಸಾಧ್ಯವಾಗಿಲ್ಲ. ಮುಂದೆ ನಮ ಸರ್ಕಾರ ಬಂದರೆ, ನಾನು ಕೂಡಾ ಹೇಗೆ? ಯಾರಿಗೆ? ಯಾವಾಗ? ಮನೆ ಮಂಜೂರು ಮಾಡಬೇಕು ಎಂಬುದು ಗೊತ್ತಿದೆ ಎಂದು ಅಸಮಾಧಾನ ಹೊರ ಹಾಕಿದ್ದಾರೆ.

# ರಾಷ್ಟ್ರ ನಿರ್ಮಾಣದಲ್ಲಿ ಸರ್ಕಾರಿ ನೌಕರರ ಪಾತ್ರ ಪ್ರಮುಖ: ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ

ಬೆಂಗಳೂರು, ಮೇ 23: ರಾಷ್ಟ್ರ ನಿರ್ಮಾಣದಲ್ಲಿ ಸರ್ಕಾರಿ ನೌಕರರ ಪಾತ್ರ ಪ್ರಮುಖವಾಗಿದೆ. ಜ್ಞಾನ, ಕೌಶಲ್ಯಾ ಮತ್ತು ಕಠಿಣ ಪರಿಶ್ರಮ ಹಾಗೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವ ಮೂಲಕ ಇಲಾಖೆಗಳ ಬೆಳವಣಿಗೆಗೆ ಕೈಜೋಡಿಸಬೇಕು ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ,ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ದಿಮೆಗಳ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಅಭಿಪ್ರಾಯ ಪಟ್ಟಿದ್ದಾರೆ.

ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಉದ್ಯೋಗ ಪಡೆದ ಅಭ್ಯರ್ಥಿಗಳಿಗೆ ನಗರದ ರೈಲ್ವೆ ಕಾಲೋನಿಯ ಅನುಗ್ರಹ ಕಮ್ಯುನಿಟಿ ಸಭಾಂಗಣದಲ್ಲಿ ನೇಮಕಾತಿ ಪತ್ರಗಳನ್ನು ವಿತರಿಸಿ ಅವರು ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರು ಉದ್ಯೋಗ ಸೃಷ್ಟಿಗೆ ಹೆಚ್ಚು ಆದ್ಯತೆ ನೀಡುತ್ತಿದ್ದಾರೆ. ದೇಶದ ಯುವಜನರ ಸಬಲೀಕರಣ ಮತ್ತು ದೇಶ ನಿರ್ಮಾಣದಲ್ಲಿ ಅವರ ಪಾಲ್ಗೊಳ್ಳುವಿಕೆಯನ್ನು ಅರ್ಥಪೂರ್ಣ ಅವಕಾಶ ನೀಡುವಲ್ಲಿ ಉದ್ಯೋಗ ಮೇಳವು ಮಹತ್ವದ ಪಾತ್ರ ವಹಿಸುತ್ತಿದೆ ಎಂದರು.

ಸರ್ಕಾರಿ ಕೆಲಸಕ್ಕೆ ಬೆಳ್ಳಿಗ್ಗೆ 10 ರಿಂದ ಸಂಜೆ 5 ರವರೆಗೆ ಮಾಡುವ ಕೆಲಸವಲ್ಲ ಬದಲಾಗಿ, ಇದು ರಾಷ್ಟ್ರಕ್ಕೆ ಸಲ್ಲಿಸುವ ಸೇವೆಯಾಗಿದ್ದು ಇಲಾಖೆಗಳಿಗೆ ಹೊಸದಾಗಿ ಸೇರುವ ಅಭ್ಯರ್ಥಿಗಳು ಅತ್ಯುತ್ತಮ ಕಾರ್ಯಕ್ಷಮತೆಯನ್ನು ತೋರಿಸುವ ಮೂಲಕ ತಮ್ಮ ಇಲಾಖೆ ಮತ್ತು ದೇಶಕ್ಕಾಗಿ ಶ್ರಮಿಸಬೇಕು ಎಂದು ಅವರು ಸಲಹೆ ನೀಡಿದರು.

ರಾಷ್ಟ್ರ ನಿರ್ಮಾಣದಲ್ಲಿ ಸರ್ಕಾರಿ ನೌಕರರ ಪಾತ್ರ ಪ್ರಮುಖವಾಗಿದೆ. ಜ್ಞಾನ, ಕೌಶಲ್ಯ ಮತ್ತು ಕಠಿಣ ಪರಿಶ್ರಮ ಹಾಗೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವ ಮೂಲಕ ಇಲಾಖೆಗಳ ಬೆಳವಣಿಗೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

# ನಾಗರಿಕಸ್ನೇಹಿಯಾಗಿ ಇ-ಸ್ವತ್ತು ತಂತ್ರಾಂಶ ಮಾರ್ಪಾಡು: ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಮೇ 23:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು 2025 ಅನ್ನು ಅಧಿಸೂಚಿಸಲಾಗಿದ್ದು, ಸದರಿ ನಿಯಮಗಳನ್ವಯ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಈ ಹಿಂದೆ ಇದ್ದ ಇ-ಸ್ವತ್ತು ತಂತ್ರಾಂಶವನ್ನು ನಾಗರಿಕ ಸ್ನೇಹಿಯಾಗಿ ಮಾರ್ಪಡಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸಾರ್ವಜನಿಕರು ಇ-ಸ್ವತ್ತು ತಂತ್ರಾಂಶದ ಮೂಲಕ ತಮ್ಮ ಆಸ್ತಿಗೆ ಸಂಬಂಧಿಸಿದಂತೆ ನಮೂನೆಗಳನ್ನು ಪಡೆಯಲು ಅರ್ಜಿಗಳನ್ನು ಸಲ್ಲಿಸುವಾಗ ಎದುರಾಗುತ್ತಿದ್ದ ಸಮಸ್ಯೆಗಳನ್ನು ನಿವಾರಿಸಲು ಹಾಗೂ ನಿಯಮಗಳಲ್ಲಿ ಸೂಕ್ತ ವರ್ಗೀಕರಣ ಮತ್ತು ಪರಿಷ್ಕರಣೆ ಮಾಡುವಂತೆ ಬಂದ ಬೇಡಿಕೆಗಳನ್ನು ಆಧರಿಸಿ ಸಾರ್ವಜನಿಕ ಹಿತದೃಷ್ಟಿಯಿಂದ ಪ್ರಮುಖ ಮಾರ್ಪಾಡು ಹಾಗೂ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ ಎಂದಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಈ ಹಿಂದೆ ಅಧಿಸೂಚಿಸಲಾಗಿದ್ದ ನಿಯಮಗಳಲ್ಲಿ ಕೆಲವೊಂದು ಮಾರ್ಪಾಡುಗಳನ್ನು ಮಾಡಲಾಗಿದ್ದು, ಕಂದಾಯ ಇಲಾಖೆಯಿಂದ ಕರ್ನಾಟಕ ಭೂ-ಕಂದಾಯ ಅಧಿನಿಯಮದಡಿ ವಿತರಿಸಲಾಗಿದ್ದ ಹಕ್ಕುಪತ್ರಗಳು, ಮನೆದಳ ಮತ್ತು ಕಣಮನೆ ಪ್ರಮಾಣ ಪತ್ರಗಳ ಅನ್ವಯ ನಮೂನೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗುತ್ತದೆ ಎಂದು ಹೇಳಿದ್ದಾರೆ.

ಕೃಷಿ ಭೂಮಿಯಲ್ಲಿ ವಾಸ ಅಥವಾ ಕೃಷಿ ಉದ್ದೇಶಕ್ಕೆ ಮೂಲ ಮಾಲೀಕರು ಕಟ್ಟಿರುವ ಕಟ್ಟಡಗಳು, ವಸತಿ ಯೋಜನೆಯಡಿ ಕೃಷಿ ಭೂಮಿಯಲ್ಲಿ ಸೃಜನೆಯಾಗಿರುವ ಕಟ್ಟಡಗಳು, ಗ್ರಾಮ ಠಾಣಾದಲ್ಲಿ ನೊಂದಾಯಿತ ದಾಖಲೆಗಳಿಲ್ಲದ ಕಟ್ಟಡಗಳು ಹಾಗೂ ಅರಣ್ಯ ಹಕ್ಕು ಕಾಯ್ದೆಯಡಿ ಮಂಜೂರಾಗಿರುವ ಆಸ್ತಿಗಳನ್ನು ಇ-ಸ್ವತ್ತು 2.0 ತಂತ್ರಾಂಶದ ಮೂಲಕ ನಮೂನೆಗಳನ್ನು ವಿತರಿಸುವ ಮೂಲಕ ಗ್ರಾಮ ಪಂಚಾಯಿತಿಯ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಅವಕಾಶ ಕಲ್ಪಿಸುವ ಬಗ್ಗೆ ಚರ್ಚಿಸಲಾಗಿದೆ.

ಸಾರ್ವಜನಿಕರು ನಮೂನೆಗಳನ್ನು ಪಡೆಯಲು ಸಲ್ಲಿಸುವ ಅರ್ಜಿಗಳನ್ನು ನಿಗದಿತ ಸಮಯದೊಳಗೆ ಇತ್ಯರ್ಥಪಡಿಸಲು ಎಲ್ಲಾ ಹಂತದಲ್ಲಿಯೂ ಕಾಲಮಿತಿಯನ್ನು ನಿಗದಿಪಡಿಸಲಾಗುವುದು. ಒಂದು ವೇಳೆ ನಿಗದಿತ ಅವಧಿಯಲ್ಲಿ ಇತ್ಯರ್ಥವಾಗದಿದ್ದಲ್ಲಿ, "ಸ್ವಯಂಚಾಲಿತ ಅನುಮೋದನೆ" ಪ್ರಕ್ರಿಯೆಯನ್ನು ಜಾರಿಗೊಳಿಸಲಾಗುತ್ತದೆ.

**ಮೇಲ್ಮನವಿ ಅವಧಿ ವಿಸ್ತರಣೆ:** ಸಾರ್ವಜನಿಕರು ತಮ್ಮ ಆಸ್ತಿಗೆ ಹೊಸದಾಗಿ ನಮೂನೆ- 11ಬಿ ಪಡೆಯಲು ನಿಗದಿಪಡಿಸಲಾಗಿದ್ದ ಮೇಲ್ಮನವಿ ಅವಧಿಯನ್ನು 30 ಸೆಪ್ಟೆಂಬರ್ 2026 ರವರೆಗೆ ವಿಸ್ತರಿಸಲಾಗುತ್ತಿದೆ. ಈ ಎಲ್ಲಾ ಕ್ರಮಗಳು ಗ್ರಾಮೀಣ ಭಾಗದ ನಾಗರಿಕರಿಗೆ ಆಸ್ತಿ ದಾಖಲಾತಿಗಳನ್ನು ಸುಲಭವಾಗಿ ಮತ್ತು ಪಾರದರ್ಶಕವಾಗಿ ಪಡೆಯಲು ಸಹಕಾರಿಯಾಗಲಿವೆ ಎಂದು ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

## ಮುಸ್ಲಿಂ, ಪಾಕ್ ಪದಬಳಕೆ ಬಿಜೆಪಿಯ ರಾಜಕೀಯ ಅಸ್ತ್ರ: ಜಾರಕಿಹೊಳಿ ವಾಗ್ದಾಳಿ



**ಬೆಳಗಾವಿ, ಮೇ 23: ಜನಪರ ಸಮಸ್ಯೆಗಳಿಂದ ಸಾರ್ವಜನಿಕರ ಗಮನವನ್ನು ಬೇರೆಡೆಗೆ ಸೆಳೆಯಲು ಬಿಜೆಪಿ ನಾಯಕರು 'ಮುಸ್ಲಿಂ' ಮತ್ತು 'ಪಾಕಿಸ್ತಾನ' ಎಂಬ ಪದಗಳನ್ನು ರಾಜಕೀಯ ಅಸ್ತ್ರವಾಗಿ ಪದೇಪದೆ ಬಳಸುತ್ತಿದ್ದಾರೆ. ಇದು ಕೇವಲ ರಾಜಕೀಯ ಸ್ಟಂಟ್ ಆಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ವಾಗ್ದಾಳಿ ನಡೆಸಿದ್ದಾರೆ.**

**ರಾಜ್ಯ ಸರ್ಕಾರವು ಪ್ರಸ್ತುತ ಮುಸ್ಲಿಮರು, ರೈತರು, ಕನ್ನಡ ಕಾರ್ಯಕರ್ತರು ಸೇರಿದಂತೆ ಸಮಾಜದ ವಿವಿಧ ವರ್ಗಗಳಿಗೆ ಸಂಬಂಧಿಸಿದ ಸುಮಾರು 50ರಿಂದ 60 ಪ್ರಮುಖ ಪ್ರಕರಣಗಳನ್ನು ನಿರ್ವಹಿಸುತ್ತಿದೆ ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಶ್ರಮಿಸುತ್ತಿದೆ. ಆದರೆ, ಬಿಜೆಪಿ ನಾಯಕರು 'ಮುಸ್ಲಿಂ' ಮತ್ತು 'ಪಾಕಿಸ್ತಾನ'ದ ಹೆಸರುಗಳನ್ನು ಬಳಸಿಕೊಂಡು ಜನರ ಭಾವನೆಗಳನ್ನು ಕೆರಳಿಸುತ್ತಿದ್ದಾರೆ ಎಂದು ಎಂದು ಕಿಡಿಕಾರಿದರು. ಈ ರೀತಿಯ ಪದಗಳನ್ನು ಬಳಸುವುದರಿಂದ ಮಾತ್ರ ಸಾರ್ವಜನಿಕರ ಗಮನವನ್ನು ತಮ್ಮತ್ತ ಸೆಳೆಯಬಹುದು ಎಂಬ ಭ್ರಮೆಯಲ್ಲಿದ್ದಾರೆ ಎಂದು ಎಂದು ಟೀಕಿಸಿದ್ದಾರೆ.**

**ಮಾದಾವರ-ತುಮಕೂರು ಮೆಟ್ರೋ ರೈಲು: ಸಂಪುಟದಲ್ಲಿ ಚರ್ಚಿಸಿ ಡಿಪಿಆರ್ ಬಗ್ಗೆ ನಿರ್ಧಾರ**

# ಪಿಪಿಪಿ ಮಾದರಿಯಲ್ಲಿ ಯೋಜನೆ ಅನುಷ್ಠಾನಕ್ಕೆ ಉದ್ದೇಶ: ಗೃಹ ಸಚಿವ ಜಿ.ಪರಮೇಶ್ವರ್



ಬೆಂಗಳೂರು, ಮೇ 23: ತುಮಕೂರು ರಸ್ತೆಯ ಮಾದಾವರ-ತುಮಕೂರು ನಡುವಿನ ಮೆಟ್ರೋ ರೈಲು ಯೋಜನೆಯ ವಿಸ್ತೃತ (ಡಿಪಿಆರ್) ವರದಿಯ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದರು.

ವಿಧಾನಸೌಧದಲ್ಲಿ ಮೆಟ್ರೋ ರೈಲು ಯೋಜನೆಯ ವಿಸ್ತೃತ ವರದಿ ಸ್ವೀಕರಿಸಿ ಮಾತನಾಡಿದ ಅವರು, ಮಾದಾವರ-ತುಮಕೂರು ಮೆಟ್ರೋ ರೈಲು ಯೋಜನೆಯ ಡಿಪಿಆರ್ ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದರು.

ಮುಖ್ಯಮಂತ್ರಿಗಳು ಆಯವ್ಯಯದಲ್ಲಿ ಘೋಷಿಸಿದಂತೆ ಮಾದಾವರದಿಂದ ತುಮಕೂರಿಗೆ ಮೆಟ್ರೋ ರೈಲು ಯೋಜನೆ ವಿಸ್ತರಿಸುವ ಅಗತ್ಯದ ಕುರಿತಂತೆ ಯೋಜನೆಯ ಸಾಧಕ-ಬಾಧಕಗಳ ಬಗ್ಗೆ ಹೈದ್ರಾಬಾದ್ ಮೂಲದ ಕಂಪನಿ ಕಾರ್ಯಸಾಧ್ಯತಾ ವರದಿಯನ್ನು ನೀಡಿತ್ತು. ಆ ವರದಿಯಲ್ಲಿ ಮೆಟ್ರೋ ರೈಲು ಯೋಜನೆಯನ್ನು ಮಾಡಬಹುದು ಎಂದು ವರದಿ ಕೊಟ್ಟಿತ್ತು. ಅದಕ್ಕಾಗಿ 3.50 ಕೋಟಿ ರೂ. ವೆಚ್ಚವಾಗಿತ್ತು ಎಂದರು.

ಅನಂತರ ಮತ್ತೆ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲು ತೀರ್ಮಾನಿಸಲಾಗಿತ್ತು. ಮೆಟ್ರೋ ರೈಲು ನಿಗಮದವರೇ ಡಿಪಿಆರ್ ಮಾಡಿಸಿ ಅವರ ಹಂತದಲ್ಲಿ ಚರ್ಚೆ ಮಾಡಿ ಸರ್ಕಾರಕ್ಕೆ ವರದಿ ಕೊಟ್ಟಿದ್ದಾರೆ. ಪಿಪಿಪಿ ಮಾದರಿಯಲ್ಲಿ ಈ ಮೆಟ್ರೋ ರೈಲು ಯೋಜನೆ ಅನುಷ್ಠಾನಕ್ಕೆ ತರಬೇಕು ಎಂಬ ಉದ್ದೇಶವಿದ್ದು ಸುಮಾರು 20 ಸಾವಿರ ಕೋಟಿ ರೂ. ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ ಎಂದು ಅವರು ಹೇಳಿದರು.

ಈ ಮಾರ್ಗದಲ್ಲಿ ರಾಷ್ಟ್ರೀಯ ಹೆದ್ದಾರಿ ಇದ್ದು, ಎಷ್ಟು ನಿಲ್ದಾಣಗಳನ್ನು ನಿರ್ಮಿಸಬೇಕು, ಎಷ್ಟು ಸಿಬ್ಬಂದಿ ಬೇಕು ಎಂಬ ವಿಚಾರದ ಬಗ್ಗೆ ಡಿಪಿಆರ್‌ನಲ್ಲಿ ಉಲ್ಲೇಖಿಸಿದ್ದಾರೆ. ಈ ವಿಷಯವನ್ನು ಸಚಿವ ಸಂಪುಟದಲ್ಲಿ ಚರ್ಚಿಸಿ ಟೆಂಡರ್ ಕರೆದು ಯೋಜನೆ ಅನುಷ್ಠಾನದ ಬಗ್ಗೆ ತೀರ್ಮಾನಿಸಲಾಗುತ್ತದೆ ಎಂದು ತಿಳಿಸಿದರು.

ತುಮಕೂರು ಮತ್ತು ಬೆಂಗಳೂರು ನಡುವೆ ಪ್ರಯಾಣಿಕರ ಸಂಖ್ಯೆ ಹೆಚ್ಚಿರುವ ಹಿನ್ನೆಲೆಯಲ್ಲಿ ಮೆಟ್ರೋ ರೈಲು ಯೋಜನೆ ಜಾರಿಗೊಳಿಸಬೇಕು ಎಂಬ ಬೇಡಿಕೆ ಇದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ರವಿಶಂಕರ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸರ್ಕಾರಿ ಉದ್ಯಮ-ನಿಗಮಗಳೇ ಉತ್ಪನ್ನಗಳ ಮೇಲೆ ಕನ್ನಡ ಬಳಸುತ್ತಿಲ್ಲ

**ಬೆಂಗಳೂರು, ಮೇ 22:** ರಾಜ್ಯದಲ್ಲಿರುವ ಎಲ್ಲ ಸರ್ಕಾರಿ ಮತ್ತು ಖಾಸಗಿ ವಲಯಗಳಲ್ಲಿ ತಯಾರಾಗುವ ಎಲ್ಲಾ ಉತ್ಪನ್ನಗಳ ಹೆಸರು ಮತ್ತು ಅವುಗಳ ಬಳಕೆ ಕುರಿತಾದ ಮಾಹಿತಿಗಳನ್ನು ಇತರ ಭಾಷೆಗಳ ಜೊತೆಗೆ ಕನ್ನಡದಲ್ಲಿ ಮುದ್ರಿಸುವುದನ್ನು ಕಡ್ಡಾಯಗೊಳಿಸಿದೆ. ಆದರೆ, ಕರ್ನಾಟಕ ಸರ್ಕಾರದ ಉದ್ದಿಮೆಗಳು ಹಾಗೂ ನಿಗಮಗಳೇ ಅದನ್ನು ಸರಿಯಾಗಿ ಪಾಲಿಸದಿರುವುದನ್ನು ಕನ್ನಡ ಗೆಳೆಯರ ಬಳಗವು ತೀವ್ರವಾಗಿ ಖಂಡಿಸಿದೆ. ರಾಜ್ಯದ ಹೆಮ್ಮೆಯ ಉದ್ದಿಮೆ ಕರ್ನಾಟಕ ಸಾಬೂನು ಮತ್ತು ಮಾರ್ಜಕ ಕಾರ್ಖಾನೆಯನ್ನು (ಕೆ.ಎಸ್.ಡಿ.ಎಲ್) ನಷ್ಟದ ನೆಪಮಾಡಿ ಮುಚ್ಚುವ ಹುನ್ನಾರ ನಡೆಯುತ್ತಿದ್ದಾಗ ಅದನ್ನು ನಷ್ಟದಿಂದ ಪಾರುಮಾಡಿ ಲಾಭದಾಯ ಉದ್ದಿಮೆಯಾಗಿ ಮಾಡಿದ ಕೈಗಾರಿಕಾ ಸಚಿವರು ಅಭಿನಂದನಾರ್ಹರು. ಆದರೆ, ಈ ಉದ್ಯಮದ ಉತ್ಪನ್ನಗಳ ಮೇಲೆ ಕನ್ನಡವನ್ನು ಕಂಡು ಕಾಣದಂತೆ ಸಣ್ಣದಾಗಿ ಕೊನೆಯಲ್ಲಿ ಮುದ್ರಿಸುತ್ತಿರುವುದು ಕನ್ನಡಕ್ಕೆ ಮಾಡುತ್ತಿರುವ ಅವಮಾನವಾಗಿದೆ. ಹಾಗೇ ಕರ್ನಾಟಕ ಸರ್ಕಾರದ ಅಂಗ ಸಂಸೆ ಎಂಎಸ್‌ಐಎಲ್ ನೋಟ್ ಬುಕ್ ಹೊರತುಪಡಿಸಿ ಬೇರೆ ಉತ್ಪನ್ನಗಳ ಮೇಲೆ ಕನ್ನಡದಲ್ಲಿ ಮುದ್ರಿಸುತ್ತಿಸಿಲ್ಲ. ಸರ್ಕಾರಿ ಸಂಸ್ಥೆಗಳೇ ಪಾಲಿಸದಿರುವಾಗ ಖಾಸಗಿ, ಬಹುರಾಷ್ಟ್ರೀಯ ಉದ್ದಿಮೆಗಳನ್ನು ಅನುಸರಿಸಿ ಎನ್ನಲಾದೀತೇ?

ನಾಮಫಲಕಗಳಲ್ಲಿ ಕನ್ನಡ ಬಳಕೆ ಕಡ್ಡಾಯ ಹಾಗೂ ಜಾಹೀರಾತು, ಸೂಚನಾ ಫಲಕಗಳಲ್ಲೂ ಕನ್ನಡವನ್ನು ಕಡ್ಡಾಯಗೊಳಿಸುವ ರಾಜ್ಯ ಸರ್ಕಾರದ ನಿರ್ಧಾರವು ಕನ್ನಡ ವಾತಾವರಣ ನಿರ್ಮಾಣ ದೃಷ್ಟಿಯಿಂದ ಅತ್ಯಂತ ಮಹತ್ವದ್ದಾಗಿದೆ. ಸರ್ಕಾರಿ ಇಲಾಖೆಗಳ ನಾಮಫಲಕಗಳು ಕನ್ನಡ ಲಿಪಿಯಲ್ಲಿವೆ. ಆದರೆ, ಕನ್ನಡದಲ್ಲಿಲ್ಲ. ನಿದರ್ಶನಕ್ಕೆ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯೂನಿಕೇಷನ್ & ಅಡ್ವರ್ಟೈಸಿಂಗ್ ಲಿಮಿಟೆಡ್ ಎಂದಿದೆ. ಕನ್ನಡದಲ್ಲಿ ಕರ್ನಾಟಕ ರಾಜ್ಯ ಮಾರುಕಟ್ಟೆ ಚಟುವಟಿಕೆ ಸಂವಹನ ಮತ್ತು ಜಾಹೀರಾತು ನಿಯಮಿತ ಆಗಬೇಕಿತ್ತು. ಕೇಂದ್ರ ಸರ್ಕಾರದ ಕಚೇರಿಗಳು, ರಕ್ಷಣಾ ಇಲಾಖೆಗಳ ನಾಮಫಲಕಗಲ್ಲಿ ಕನ್ನಡಕ್ಕೆ ಬಳಕೆ ಆಗಿದೆಯೇ ಅನ್ನುವುದನ್ನು ಯಾರೂ ಪರಿಶೀಲಿಸುತ್ತಿಲ್ಲ.

# ಹಿಂದುಳಿದ ವರ್ಗಗಳ ಕುಟುಂಬದಿಂದಲೂ ಮೀಸಲಾತಿಗೆ ಬೇಡಿಕೆ: ಸುಪ್ರೀಂ ಅಸಮಾಧಾನ

**ನವದೆಹಲಿ, ಮೇ 23:** ಹಿಂದುಳಿದ ವರ್ಗಗಳಲ್ಲಿ ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಮುನ್ನಡೆ ಸಾಧಿಸಿರುವ ಕುಟುಂಬಗಳು ಮೀಸಲಾತಿ ಸೌಲಭ್ಯಗಳಿಗಾಗಿ ನಿರಂತರವಾಗಿ ಬೇಡಿಕೆ ಇಡುತ್ತಿರುವುದರ ಕುರಿತು ಶುಕ್ರವಾರದಂದು ಸುಪ್ರೀಂ ಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಅಲ್ಲದೆ, ಇಂತಹ ಕುಟುಂಬಗಳಿಗೆ ಕೋಟಾದ ಸೌಲಭ್ಯಗಳು ಸಿಗಬೇಕೇ ಎಂದು ನ್ಯಾಯಾಲಯ ಪ್ರಶ್ನಿಸಿದೆ.

ಹಿಂದುಳಿದ ವರ್ಗಗಳೊಳಗಿನ ಕೆನೆಪದರು ವರ್ಗಕ್ಕೆ ಮೀಸಲಾತಿ ಸೌಲಭ್ಯಗಳನ್ನು ನೀಡುವ ಕುರಿತಾದ ಅರ್ಜಿಯ ವಿಚಾರಣೆ ನಡೆಸುತ್ತಿದ್ದ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಮತ್ತು ನ್ಯಾಯಮೂರ್ತಿ ಉಜ್ಜಲ್ ಭುಯಾನ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು ಈ ಅವಲೋಕನಗಳನ್ನು ಮಾಡಿದೆ. ಇಂತಹ ಪ್ರಗತಿಯು ಸಾಮಾಜಿಕ ಚಲನಶೀಲತೆಗೆ (ಸಾಮಾಜಿಕ ಸ್ಥಾನಮಾನದ ಸುಧಾರಣೆ) ಕಾರಣವಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿದೆ.

**ಐಎಎಸ್ ಅಧಿಕಾರಿಗಳ ಮಕ್ಕಳಿಗೆ ಮೀಸಲಾತಿ ಏಕೆ?**

ಮಾಧ್ಯಮ ವರದಿಯ ಪ್ರಕಾರ, "ತಂದೆ-ತಾಯಿ ಇಬ್ಬರೂ ಐಎಎಸ್ ಅಧಿಕಾರಿಗಳಾಗಿದ್ದರೆ ಅವರ ಮಕ್ಕಳಿಗೆ ಮೀಸಲಾತಿ ಏಕೆ ಬೇಕು. ಶಿಕ್ಷಣ ಮತ್ತು ಆರ್ಥಿಕ ಸಬಲೀಕರಣದಿಂದಾಗಿ ಸಾಮಾಜಿಕ ಚಲನಶೀಲತೆ ಉಂಟಾಗುತ್ತದೆ. ಆದರೂ ಅವರ ಮಕ್ಕಳಿಗೆ ಮತ್ತೆ ಮೀಸಲಾತಿಯನ್ನು ಹುಡುಕುತ್ತಾ ಹೋದರೆ, ನಾವು ಈ ವ್ಯವಸ್ಥೆಯಿಂದ ಎಂದಿಗೂ ಹೊರಬರಲು ಸಾಧ್ಯವಿಲ್ಲ. ಇದು ನಾವು ಗಂಭೀರವಾಗಿ ಯೋಚಿಸಬೇಕಾದ ವಿಷಯವಾಗಿದೆ. ಹಾಗಾದರೆ ಮೀಸಲಾತಿ ನೀಡುವುದರ ಪ್ರಯೋಜನವಾದರೂ ಏನು? ನೀವು ಮೀಸಲಾತಿ ನೀಡುತ್ತಿದ್ದೀರಿ. ಪೋಷಕರು ಓದಿದ್ದಾರೆ, ಉತ್ತಮ ಉದ್ಯೋಗದಲ್ಲಿದ್ದಾರೆ, ಉತ್ತಮ ಆದಾಯ ಗಳಿಸುತ್ತಿದ್ದಾರೆ, ಆದರೂ ಅವರ ಮಕ್ಕಳಿಗೆ ಮತ್ತೆ ಮೀಸಲಾತಿ ಬೇಕು ಎನ್ನುತ್ತಾರೆ. ನೋಡಿ, ಅವರು ಮೀಸಲಾತಿಯಿಂದ



ಹೊರಬರಬೇಕು ಎಂದು ನ್ಯಾಯಮೂರ್ತಿ ನಾಗರತ್ನ ಅಭಿಪ್ರಾಯಪಟ್ಟಿದ್ದಾರೆ.

ವರದಿಯ ಪ್ರಕಾರ, ಈ ಪ್ರಕರಣವು ಕರ್ನಾಟಕದ ಹಿಂದುಳಿದ ವರ್ಗಗಳ ಪ್ರವರ್ಗ-2(ಎ) ಅಡಿಯಲ್ಲಿ ಬರುವ ಕುರುಬ ಸಮುದಾಯದ ಅಭ್ಯರ್ಥಿಯೊಬ್ಬರಿಗೆ ಸಂಬಂಧಿಸಿದ್ದಾಗಿದೆ.

ಈ ಅಭ್ಯರ್ಥಿಯು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಲ್ಲಿ ಸಹಾಯಕ ಇಂಜಿನಿಯರ್ ಆಗಿ ಆಯ್ಕೆಯಾಗಿದ್ದರು. ಆದರೆ ಜಿಲ್ಲಾ ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿಯು ಇವರು 'ಕ್ರೀಮಿ ಲೇಯರ್' (ಕೆನೆಪದರ) ವ್ಯಾಪ್ತಿಗೆ ಬರುತ್ತಾರೆ ಎಂದು ಪತ್ತೆಹಚ್ಚಿದ ನಂತರ, ಇವರಿಗೆ ಜಾತಿ ಸಿಂಧುತ್ವ ಪ್ರಮಾಣಪತ್ರ ನೀಡಲು ನಿರಾಕರಿಸಲಾಗಿತ್ತು.

ಶುಕ್ರವಾರದ ವಿಚಾರಣೆಯ ಸಂದರ್ಭದಲ್ಲಿ, ಸರ್ವೋಚ್ಚ ನ್ಯಾಯಾಲಯವು ಕ್ರೀಮಿ ಲೇಯರ್ ಕುಟುಂಬಗಳಿಗೆ ನಿರಂತರವಾಗಿ ಮೀಸಲಾತಿ ಸೌಲಭ್ಯಗಳನ್ನು ವಿಸ್ತರಿಸುವುದರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿತು. ಶೈಕ್ಷಣಿಕ ಮತ್ತು ಆರ್ಥಿಕ ಸಬಲೀಕರಣದೊಂದಿಗೆ ವ್ಯಕ್ತಿಯ ಸಾಮಾಜಿಕ ಸ್ಥಾನಮಾನವು ಸುಧಾರಿಸುತ್ತದೆ ಎಂದು ನ್ಯಾಯಮೂರ್ತಿ ನಾಗರತ್ನ ಗಮನಿಸಿದರು.

ಇಂತಹ ಸಂದರ್ಭಗಳಲ್ಲಿ ಮುಂದಿನ ಪೀಳಿಗೆಗೆ ಮೀಸಲಾತಿಯ ಅರ್ಹತೆಯನ್ನು ಮರುಪರಿಶೀಲಿಸುವ ಅಗತ್ಯವಿದೆ ಎಂದು ನ್ಯಾಯಾಲಯ ಹೇಳಿದೆ.

ಇಲ್ಲಿ ಒಂದು ರೀತಿಯ ಸಮತೋಲನ ಇರಬೇಕಾಗುತ್ತದೆ. ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವುದನ್ನು ಒಪ್ಪಿಕೊಳ್ಳೋಣ. ಆದರೆ ಪೋಷಕರು ಮೀಸಲಾತಿಯ ಸೌಲಭ್ಯವನ್ನು ಪಡೆದುಕೊಂಡು ಒಂದು ಹಂತವನ್ನು ತಲುಪಿದ ನಂತರವೂ, ಅಂದರೆ ಇಬ್ಬರೂ ಐಎಎಸ್ ಅಧಿಕಾರಿಗಳಾಗಿದ್ದರೆ, ಇಬ್ಬರೂ ಸರ್ಕಾರಿ ಸೇವೆಯಲ್ಲಿದ್ದರೆ ಮತ್ತು ಉತ್ತಮ ಸ್ಥಾನದಲ್ಲಿದ್ದರೆ, ಅಲ್ಲಿ ಸಾಮಾಜಿಕ ಚಲನಶೀಲತೆ ಬಂದಿರುತ್ತದೆ. ಈಗ ಅವರು ಕ್ರೀಮಿ ಲೇಯರ್‌ನಿಂದ ತಮ್ಮನ್ನು ಹೊರಗಿಟ್ಟಿರುವುದನ್ನು ಪ್ರಶ್ನಿಸುತ್ತಿದ್ದಾರೆ. ಇದನ್ನು ಸಹ ನಾವು ನೆನಪಿನಲ್ಲಿಡಬೇಕಾಗುತ್ತದೆ," ಎಂದು ನ್ಯಾಯಮೂರ್ತಿ ನಾಗರತ್ನ ಹೇಳಿರುವುದಾಗಿ ವರದಿ ಉಲ್ಲೇಖಿಸಿದೆ.

# ದೆಹಲಿ ಗಲಭೆ ಪಿತೂರಿ ಪ್ರಕರಣ: ಜಾಮೀನು ವಿಚಾರಣೆ ವಿಸ್ತೃತ ಪೀಠಕ್ಕೆ ವರ್ಗಾವಣೆ

**ನವದೆಹಲಿ, ಮೇ 23:** 2020ರ ದೆಹಲಿ ಗಲಭೆಗೆ ಸಂಬಂಧಿಸಿದ ಪಿತೂರಿ ಪ್ರಕರಣದಲ್ಲಿ ಯುಎಪಿಎ ಅಡಿಯಲ್ಲಿ ಬಂಧಿತರಾಗಿರುವ ಉಮರ್ ಖಾಲಿದ್ ಮತ್ತು ಶರ್ಜೀಲ್ ಇಮಾಮ್ ಅವರ ಜಾಮೀನು ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ವಿಸ್ತೃತ ಪೀಠಕ್ಕೆ ವರ್ಗಾಯಿಸಿದೆ.

ಜನವರಿ 5ರಂದು ಉಮರ್ ಖಾಲಿದ್ ಮತ್ತು ಶರ್ಜೀಲ್ ಇಮಾಮ್ ಅವರಿಗೆ ಜಾಮೀನು ನಿರಾಕರಿಸಿದ್ದ ಆದೇಶಕ್ಕೆ ಸಂಬಂಧಿಸಿದ ಇತ್ತೀಚಿನ ಅವಲೋಕನಗಳಿಗೆ ಸುಪ್ರೀಂ ಕೋರ್ಟ್ ಪ್ರತಿಕ್ರಿಯಿಸಲು ನಿರಾಕರಿಸಿದೆ. ಇತ್ತೀಚಿನ ತೀರ್ಪಿನಲ್ಲಿ ಮಾಡಲಾದ ಅವಲೋಕನಗಳಿಗೆ ಉತ್ತರಿಸಲು ಬಯಸುವುದಿಲ್ಲ ಎಂದು ಪೀಠವು ಹೇಳಿದೆ.

ಯೂನಿಯನ್ ಆಫ್ ಇಂಡಿಯಾ/ಕೆಎ ನಜೀಬ್ ಪ್ರಕರಣದಲ್ಲಿ ತ್ರಿಸದಸ್ಯ ಪೀಠವು ಗಂಕಂ ಪ್ರಕರಣಗಳಲ್ಲಿ ದೀರ್ಘಕಾಲದ



ಬಂಧನವನ್ನು ಜಾಮೀನಿಗೆ ಆಧಾರವಾಗಿ ಪರಿಗಣಿಸಬಹುದು ಎಂದು ಹೇಳಿತ್ತು. ಈ ಹಿನ್ನೆಲೆಯಲ್ಲಿ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಮತ್ತು ನ್ಯಾಯಮೂರ್ತಿ ಉಜ್ಜಾಲ್ ಭುಯಾನ್ ಅವರ ಪೀಠವು ನ್ಯಾಯಾಂಗ ಶಿಸ್ತು ಕಾಪಾಡಲು ಸಣ್ಣ ಪೀಠಗಳು ದೊಡ್ಡ ಪೀಠಗಳ ತೀರ್ಪುಗಳನ್ನು ಗಮನದಲ್ಲಿಟ್ಟುಕೊಳ್ಳಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿತ್ತು.

ಈ ಪ್ರಕರಣದಲ್ಲಿಯೇ ತಸ್ಲೀಮ್ ಅಹ್ಮದ್ ಮತ್ತು ಖಾಲಿದ್ ಸೈಫಿ ಅವರ ಜಾಮೀನು ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಾಲಯವು ಅವರಿಬ್ಬರಿಗೂ ಆರು ತಿಂಗಳ ಮಧ್ಯಂತರ ಜಾಮೀನು ನೀಡಿದೆ. ಆದರೆ ಮಾಧ್ಯಮಗಳ ಜೊತೆ ಮಾತನಾಡಬಾರದು ಎಂಬ ಷರತ್ತುಗಳನ್ನು ವಿಧಿಸಿದೆ.ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಮತ್ತು ಪಿ. ಬಿ. ವರಾಲೆ ಅವರಿದ್ದ ಸುಪ್ರೀಂ ಕೋರ್ಟ್ ಪೀಠವು ಈ ವಿಷಯವನ್ನು ವಿಸ್ತೃತ ಪೀಠಕ್ಕೆ ವರ್ಗಾಯಿಸಿದೆ.

ಆದರೆ ನಜೀಬ್ ತೀರ್ಪು ಎಂದರೆ ವಿಚಾರಣೆಯಲ್ಲಿ ವಿಳಂಬವಾದರೆ ಯಾಂತ್ರಿಕವಾಗಿ ಜಾಮೀನು ನೀಡಲೇಬೇಕು ಎಂಬ ಅರ್ಥವಲ್ಲ ಎಂದು ನ್ಯಾಯಮೂರ್ತಿ ಅರವಿಂದ್ ಕುಮಾರ್ ನೇತೃತ್ವದ ಪೀಠವು ಸ್ಪಷ್ಟಪಡಿಸಿದೆ. ಇದೇ ಪ್ರಕರಣದಲ್ಲಿ ಜನವರಿ 5ರಂದು ಐವರು ಆರೋಪಿಗಳಿಗೆ ಜಾಮೀನು ನೀಡಲಾಗಿದ್ದರೂ, ಉಮರ್ ಖಾಲಿದ್ ಮತ್ತು ಶರ್ಜೀಲ್ ಇಮಾಮ್ ಅವರಿಗೆ ಜಾಮೀನು ನಿರಾಕರಿಸಲಾಗಿತ್ತು.

# ವಿಮಾನ ಇಂಧನ ಮೇಲಿನ ತೆರಿಗೆ ಶೇ.25ರಿಂದ 7ಕ್ಕೆ ಇಳಿಕೆ

- ವಿಮಾನಯಾನ ಕ್ಷೇತ್ರದ ಮೇಲಿನ ಆರ್ಥಿಕ ಒತ್ತಡ ತಗ್ಗಿಸಲು ದೆಹಲಿ ಸರ್ಕಾರದಿಂದ ಕ್ರಮ
- ಆರು ತಿಂಗಳವರೆಗೆ ಜಾರಿ: ದೆಹಲಿ ಸಿಎಂ ರೇಖಾಗುಪ್ತಾ

**ನವದೆಹಲಿ, ಮೇ 23:** ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಯುದ್ಧದ ಪರಿಸ್ಥಿತಿಯು ಜಾಗತಿಕ ವಿಮಾನ ಯಾನ ಕ್ಷೇತ್ರದ ಮೇಲೆ ಭಾರಿ ಪರಿಣಾಮ ಬೀರಿದೆ. ಜಗತ್ತಿನ ಶೇಕಡಾ 20 ರಷ್ಟು ಇಂಧನ ಪೂರೈಕೆಯನ್ನು ಹೊತ್ತೊಯ್ಯುವ ಹಾರ್ಮುಜ್ ಜಲಸಂಧಿ ಬಹುತೇಕ ಮುಚ್ಚಲ್ಪಟ್ಟಿರುವುದರಿಂದ ವಿಮಾನ ಇಂಧನ ತೈಲದ ಬೆಲೆಗಳು ಗಗನಕ್ಕೇರುತ್ತಿವೆ. ಹಾಗಾಗಿ ಜಾಗತಿಕ ಭೌಗೋಳಿಕ ರಾಜಕೀಯ ಬೆಳವಣಿಗೆಗಳಿಂದಾಗಿ ವಿಮಾನಯಾನ ಕ್ಷೇತ್ರದ ಮೇಲಿನ ಆರ್ಥಿಕ ಒತ್ತಡವನ್ನು ತಗ್ಗಿಸಲು ದೆಹಲಿ ಸರ್ಕಾರವು ಕಳೆದ ವಾರ ಮಹತ್ವದ ನಿರ್ಧಾರ ಕೈಗೊಂಡಿದೆ. ವಿಮಾನ ಇಂಧನದ ಮೇಲಿನ ಮೌಲ್ಯವರ್ಧಿತ ತೆರಿಗೆಯನ್ನು ಶೇಕಡಾ 25 ರಿಂದ ಶೇಕಡಾ 7ಕ್ಕೆ ಇಳಿಸಿ ಆರು ತಿಂಗಳ ಅವಧಿಗೆ ಆದೇಶ ಹೊರಡಿಸಿದೆ.

ಈ ಬಗ್ಗೆ ಮಾತನಾಡಿದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಮಾತನಾಡಿ, ದೆಹಲಿಯ ಆರ್ಥಿಕ ಸ್ಪರ್ಧಾತ್ಮಕತೆಯನ್ನು ಕಾಯ್ದುಕೊಳ್ಳಲು ಹಾಗೂ ರಾಜಧಾನಿಯಲ್ಲಿ ವಿಮಾನ ಯಾನ,



ಪ್ರವಾಸೋದ್ಯಮ ಮತ್ತು ಲಾಜಿಸ್ಟಿಕ್ಸ್ ಚಟುವಟಿಕೆಗಳಿಗೆ ಬೆಂಬಲ ನೀಡಲು ಈ ಕ್ರಮ ಕೈಗೊಳ್ಳಲಾಗಿದೆ. ವಿಮಾನ ಇಂಧನದ ಮೇಲಿನ ಈ ರಿಯಾಯಿತಿ ವ್ಯಾಟ್ ದರವು ಆರಂಭದಲ್ಲಿ ಆರು ತಿಂಗಳವರೆಗೆ ಜಾರಿಯಲ್ಲಿರುತ್ತದೆ. ದೇಶ ಮತ್ತು ದೆಹಲಿ ಎರಡರ ಹಿತದೃಷ್ಟಿಯಿಂದ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

ಈ ಮುನ್ನೆಚ್ಚರಿಕೆ ಕ್ರಮದಿಂದಾಗಿ ದೆಹಲಿ ಸರ್ಕಾರಕ್ಕೆ ಸುಮಾರು 985 ಕೋಟಿ ಆದಾಯದ ನಷ್ಟವಾಗಲಿದೆ ಎಂದು ಅಂದಾಜಿಸಲಾಗಿದೆ. ಅಧಿಕಾರಿಗಳ ಪ್ರಕಾರ, ವಿಮಾನಯಾನ ಸಂಸ್ಥೆಗಳ ಒಟ್ಟು ಕಾರ್ಯಾಚರಣೆಯ ವೆಚ್ಚದಲ್ಲಿ ಶೇಕಡಾ 40 ರಷ್ಟು ಭಾಗ ವಿಮಾನ ಇಂಧನಕ್ಕೇ ವ್ಯಯವಾಗುತ್ತದೆ. ಪ್ರಸ್ತುತ ಸಂಸ್ಥೆಗಳು ವ್ಯಾಟ್ ಮತ್ತು ಕೇಂದ್ರ ಅಬಕಾರಿ ಸುಂಕ ಎರಡನ್ನೂ ಪಾವತಿಸುತ್ತಿರುವುದರಿಂದ ಟಿಕೆಟ್ ದರಗಳು ದುಬಾರಿಯಾಗುತ್ತಿವೆ. ಇಂಧನದ ಮೇಲಿನ ವ್ಯಾಟ್‌ನಿಂದ ದೆಹಲಿ ಸರ್ಕಾರಕ್ಕೆ ವಾರ್ಷಿಕವಾಗಿ 1,368 ಕೋಟಿ ರೂ. ಆದಾಯ ಬರುತ್ತಿದ್ದು, ಇದು ದೆಹಲಿಯ ಒಟ್ಟು ವ್ಯಾಟ್ ಸಂಗ್ರಹದ ಶೇಕಡಾ 19 ರಷ್ಟಾಗಿದೆ. ದೇಶದಲ್ಲಿ ಸಂಪರ್ಕ ಮತ್ತು ಆರ್ಥಿಕ ಚಟುವಟಿಕೆಯನ್ನು ಬಲಪಡಿಸುವ ಪ್ರಧಾನಿ ನರೇಂದ್ರ ಮೋದಿಯವರ ಆಶಯಕ್ಕೆ ಪೂರಕವಾಗಿ ಈ ತೆರಿಗೆ ಕಡಿತದ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ಸಿಎಂ ರೇಖಾ ಗುಪ್ತಾ ತಿಳಿಸಿದ್ದಾರೆ.

# ಪಾಕಿಸ್ತಾನದ ಪರ ಬೇಹುಗಾರಿಕೆ: ಬಂಧನ

**ನವದೆಹಲಿ, ಮೇ 23:** ಪಾಕಿಸ್ತಾನದ ಪರವಾಗಿ ಬೇಹುಗಾರಿಕೆ ನಡೆಸಿದ ಆರೋಪದ ಮೇಲೆ ಪಂಜಾಬ್ ಪೊಲೀಸರು ಪಠಾಣ್‌ಕೋಟ್ ನಿವಾಸಿ ಬಲ್ಜಿತ್‌ಸಿಂಗ್ ಎಂಬಾತನನ್ನು ಬಂಧಿಸಲಾಗಿದೆ.

ಪಂಜಾಬ್ ಅನ್ನು ಜಮ್ಮು ಮತ್ತು ಕಾಶ್ಮೀರಕ್ಕೆ ಸಂಪರ್ಕಿಸುವ ಹೆದ್ದಾರಿ ಕಾರಿಡಾರ್‌ನಲ್ಲಿ ಯೋಧರ ಚಲನವಲನದ ನೇರ ಮಾಹಿತಿಯನ್ನು ಪಾಕಿಸ್ತಾನದ ವ್ಯಕ್ತಿಗಳಿಗೆ ರವಾನಿಸುತ್ತಿದ್ದ ಎಂದು ಪೊಲೀಸರು ಶಂಕಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಚಕ್ ಧಾರಿವಾಲ್



ಗ್ರಾಮದ ಸಿಂಗ್, ಸೇನೆ ಮತ್ತು ಅರೆಸೈನಿಕ ಪಡೆಗಳ ಚಲನವಲನಗಳ ಮೇಲೆ ಕಣ್ಣಿಡಲು NH 44ರ ಸೇತುವೆಯ ಬಳಿ ಇರುವ ಅಂಗಡಿಯಲ್ಲಿ ಸಿಸಿಟಿವಿ ಕ್ಯಾಮೆರಾವನ್ನು ಅಳವಡಿಸಿದ್ದ. ಪಾಕಿಸ್ತಾನ ಮೂಲದ ಹ್ಯಾಂಡ್ಲರ್‌ಗಳಿಗೆ ನೇರವಾಗಿ ಮಾಹಿತಿಯನ್ನು ರವಾನಿಸುತ್ತಿದ್ದ ಎಂದು ತಿಳಿದುಬಂದಿದೆ.

ವಿಚಾರಣೆಯ ಸಮಯದಲ್ಲಿ, ಆರೋಪಿಯು ಜನವರಿಯಲ್ಲಿ ಪಠಾಣ್‌ಕೋಟ್-ಜಮ್ಮು ಹೆದ್ದಾರಿಯಲ್ಲಿರುವ ಅಂಗಡಿಯಲ್ಲಿ ಇಂಟರ್ನೆಟ್ ಆಧಾರಿತ ಸಿಸಿಟಿವಿ ಕ್ಯಾಮರಾವನ್ನು ಅಳವಡಿಸಿದ್ದಾಗಿ ಒಪ್ಪಿಕೊಂಡಿದ್ದಾನೆ. ದುಬೈ ಮೂಲದ ಅಪರಿಚಿತ ವ್ಯಕ್ತಿಯಿಂದ ತನಗೆ ಈ ನಿರ್ದೇಶನ ಬರುತ್ತದೆ ಎಂದು ಹೇಳಿದ್ದಾನೆ. 40,000 ಪಾವತಿಸಲಾಗಿತ್ತು ಎಂದೂ ತಿಳಿಸಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ. ಹಾಗೆಯೇ ಸಿಸಿಟಿವಿ ಕ್ಯಾಮರಾವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕಳೆದ ತಿಂಗಳು, ಪೊಲೀಸರು ಎರಡು ಐಎಸ್‌ಐ ಬೆಂಬಲಿತ ಬೇಹುಗಾರಿಕೆ ಪ್ರಕರಣಗಳನ್ನು ಭೇದಿಸಿದ್ದರು. ಚೀನಾ ನಿರ್ಮಿತ ಸೋಲಾರ್‌ಚಾಲಿತ ಸಿಸಿಟಿವಿ ಕ್ಯಾಮರಾಗಳನ್ನು ಬಳಸಿಕೊಂಡು ಪಾಕಿಸ್ತಾನ ಮೂಲದ ಹ್ಯಾಂಡ್ಲರ್‌ಗಳಿಗೆ ಮಿಲಿಟರಿ ಸ್ಥಳಗಳ ಮಾಹಿತಿಯನ್ನು ರವಾನಿಸಲಾಗುತ್ತಿತ್ತು. ಇದಕ್ಕೂ ಮೊದಲು, ಕಪುರ್ತಲಾದಲ್ಲಿ ಒಂದು ಕಂಬದ ಮೇಲೆ ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮೆರಾ ಐಎಸ್‌ಐ ನಿಯಂತ್ರಿತ ಬೇಹುಗಾರಿಕೆ ಜಾಲದ ಭಾಗವಾಗಿದೆ ಎಂದು ತಿಳಿದುಬಂದಿತ್ತು.

# ನಗದು ಕೊರತೆ: ಬ್ಯಾಂಕ್‌ಗಳಿಗೆ 81,590 ಕೋಟಿ ಹರಿಸಿದ ಆರ್‌ಬಿಐ

**ನವದೆಹಲಿ, ಮೇ 23:** ಬ್ಯಾಂಕಿಂಗ್ ವ್ಯವಸ್ಥೆಯಲ್ಲಿನ ತಾತ್ಕಾಲಿಕ ನಗದು ಕೊರತೆಯನ್ನು ನೀಗಿಸಲು ಭಾರತೀಯ ರಿಸರ್ವ್ ಬ್ಯಾಂಕ್ ಮೂರು ದಿನಗಳ ವೇರಿಯಬಲ್ ರೇಟ್ ರೆಪೋ ಹರಾಜಿನ ಮೂಲಕ 81,590 ಕೋಟಿ ಹಣವನ್ನು ಹಣಕಾಸು ಮಾರುಕಟ್ಟೆಗೆ ಹರಿಸಿದೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ರಿಸರ್ವ್ ಬ್ಯಾಂಕ್, ಶೇ 5.26 ರ ಕಟ್-ಆಫ್ ದರದಲ್ಲಿ ಬ್ಯಾಂಕುಗಳಿಗೆ ಈ ಹಣವನ್ನು ಒದಗಿಸಲಾಗಿದೆ ಎಂದು ತಿಳಿಸಿದೆ.

ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ನಗದು ಉಳಿತಾಯ ಗಣನೀಯವಾಗಿ ಕುಸಿದಿದ್ದರೂ ಸಹ,ರಿಸರ್ವ್ ಬ್ಯಾಂಕ್ ಅಧಿಸೂಚನೆ ಹೊರಡಿಸಿದ್ದ 1 ಲಕ್ಷ ಕೋಟಿಗೆ ಹೋಲಿಸಿದರೆ ಬ್ಯಾಂಕುಗಳಿಂದ ಬಂದ ಬೇಡಿಕೆ ಕಡಿಮೆಯಾಗಿತ್ತು. ಆದಾಗ್ಯೂ, ಮೇ 21ರಂದು ನಡೆದ ಹಿಂದಿನ ಹರಾಜಿಗೆ ಹೋಲಿಸಿದರೆ, ಶುಕ್ರವಾರ ನಡೆದ ಹರಾಜಿನಲ್ಲಿ ಬ್ಯಾಂಕುಗಳಿಂದ ಹೆಚ್ಚಿನ ಬೇಡಿಕೆ ಬಂದಿದೆ. ಮೇ 20ರಂದು ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ 1.51 ಲಕ್ಷ ಕೋಟಿಯಷ್ಟಿದ್ದ ನಗದು ಉಳಿತಾಯ, ಮೇ 21ರ ವೇಳೆಗೆ ಸುಮಾರು 58,876.29 ಕೋಟಿಗೆ ಭಾರಿ ಕುಸಿತ ಕಂಡಿದೆ ಎಂದು ಅಂದಾಜಿಸಲಾಗಿದೆ. ಬ್ಯಾಂಕಿಂಗ್ ವ್ಯವಸ್ಥೆಯಲ್ಲಿ ಈ ನಗದು ಲಭ್ಯತೆ ತಗ್ಗಿದ್ದರಿಂದ, ರಾತ್ರಿ ಅವಧಿಯ ಕರೆನ್ಸಿ ಮಾರುಕಟ್ಟೆ ದರಗಳಲ್ಲಿ ತೀವ್ರ ಏರಿಕೆ ಕಂಡುಬಂದಿದೆ. ಮುಂಬರುವ ದಿನಗಳಲ್ಲಿ ಮಾರುಕಟ್ಟೆಯ ನಗದು ಸ್ಥಿತಿಗತಿಗಳನ್ನು ನಿರ್ವಹಿಸಲು ರಿಸರ್ವ್ ಬ್ಯಾಂಕ್ ಮತ್ತೊಂದು ಸುತ್ತಿನ ವಿಆರ್‌ಆರ್ ಹರಾಜನ್ನು ಪ್ರಕಟಿಸಬಹುದು ಎಂದು ಹಣಕಾಸು ಮಾರುಕಟ್ಟೆಯ ತಜ್ಞರು ಅಂದಾಜಿಸಿದ್ದಾರೆ.

ಟ್ರಾನ್ಸಿಯೆಂಟ್ ಲಿಕ್ವಿಡಿಟಿ ಎಂದರೆ ಹಣಕಾಸು ವ್ಯವಸ್ಥೆಯಲ್ಲಿ ಕಂಡುಬರುವ ತಾತ್ಕಾಲಿಕ ನಗದು ಹರಿವಿನ ಏರಿಳಿತವಾಗಿದೆ. ಇನ್ನು ವೇರಿಯಬಲ್ ರೇಟ್ ರೆಪೋ ಎನ್ನುವುದು ಬ್ಯಾಂಕಿಂಗ್ ವ್ಯವಸ್ಥೆಗೆ ಅಲ್ಪಾವಧಿಯ ನಗದು ಒದಗಿಸಲು ಆರ್‌ಬಿಐ ಬಳಸುವ ಒಂದು ವಿತ್ತೀಯ ಸಾಧನ.



ಕೇರಳ ಮುಖ್ಯಮಂತ್ರಿ ವಿ.ಡಿ.ಸತೀಶನ್ ಅವರು ಶನಿವಾರ ನವದೆಹಲಿಯಲ್ಲಿ ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ, ಲೋಕಸಭೆಯ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರನ್ನು ಭೇಟಿಯಾಗಿದ್ದರು.

# ನಾಟಕಗಳು ಜೀವನಕ್ಕೆ ಪಾಠ: ವಾಲ್ಟರ್ ನಂದಳಿಕೆ

## ಚಿಕ್ಕಮಗಳೂರಿನಲ್ಲಿ ಶತಕ ಸಂಭ್ರಮಿಸಿದ 'ಮ್ಹಾತಾರೊ ಚರ್ಬೆಲಾ' ಕೊಂಕಣಿ ನಾಟಕ

**ಮುಂಬಯಿ,ಮೇ.23:** ನಾಟಕಗಳು ಜೀವನಕ್ಕೆ ಪಾಠವಾಗಿದೆ. ಆದ್ದರಿಂದ ರಂಗಾಸಕ್ತಿ ಹೆಚ್ಚಿಸಿಕೊಳ್ಳುವ ಅಗತ್ಯವಿದೆ. ಈ ನೂರರ ಸಂಭ್ರಮ ಒಂದು ದಾಖಲೆಯಾಗಿದ್ದು ಇದು ಇತಿಹಾಸದ ಪುಟ ಸೇರಲಿ. ಇಂತಹ ಮಹಾನ್ ಕಲಾವಿದರಿಗೆ ಹೆಚ್ಚಿನ ಆಯುಷ್ಯ ಪ್ರಾಪ್ತಿಯಾಗಬೇಕು. ಕಲಾವಿದರ ಮುನ್ನಡೆಗೆ ಸಾಂಘಿಕವಾಗಿ ಬಲ ತುಂಬುವ ಕೆಲಸ ಕಲಾಭಿಮಾನಿಗಳಿಂದ ಆಗಬೇಕು. ಈ ಮೂಲಕ ನಾಟಕಗಳ ಒಲವು ಹೆಚ್ಚುವುದು ಮತ್ತು ಕಲಾವಿದರ ಬಲವರ್ಧನೆ ಸಾಧ್ಯವಾಗುವುದು ಎಂದು ದಾಯ್ಜಿವರ್ಲ್ಡ್ ಮೀಡಿಯಾ ಸ್ಥಾಪಕ ಮತ್ತು ವ್ಯವಸ್ಥಾಪಕ ನಿರ್ದೇಶಕ ವಾಲ್ಟರ್ ನಂದಳಿಕೆ ತಿಳಿಸಿದರು.

ಕಾಥೋಲಿಕ್ ಕೊಂಕಣ್ ಸಂಚಾಲನ್ ಚಿಕ್ಕಮಗಳೂರು ಮತ್ತು ಹಾಸನ ಸಂಸ್ಥೆಯು ಕೊಂಕಣಿ ನಾಟಕ ರಂಗದ ಹಿರಿಯಣ್ಣ ಪ್ರಸಿದ್ಧ, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ವಿಜೇತ, ಕೊಮೆಡಿ ಕಿಂಗ್ ನಟ ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ಸಾರಥ್ಯದ ಮುಂಬಯಿ ನಾಟಕ ತಂಡವು ಇಂದಿಲ್ಲಿ ಶನಿವಾರ ಸಂಜೆ ಚಿಕ್ಕಮಗಳೂರು ಆದರ್ಶ ನಗರದಲ್ಲಿನ ಕುವೆಂಪು ಕಲಾ ಮಂದಿರದಲ್ಲಿ ಪ್ರಸ್ತುತ ಪಡಿಸಿದ 'ಮ್ಹಾತಾರೊ ಚರ್ಬೆಲಾ' ನಾಟಕದ 100ನೇ ಪ್ರದರ್ಶನದ ಸಭಾ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿದ್ದು ವಾಲ್ಟರ್ ನಂದಳಿಕೆ ಮಾತನಾಡಿದರು.

ಶತ ಪ್ರದರ್ಶನದ ಪ್ರಯುಕ್ತ ನಡೆಸಲ್ಪಟ್ಟ ಸಭಾಕಾರ್ಯಕ್ರಮದಲ್ಲಿ ಅತಿಥಿ ಅಭ್ಯಾಗತರುಗಳಾಗಿ ಕರ್ನಾಟಕ ಸಿವಿಲ್ ಜಡ್ಜ್ ನಿತಿನ್ ಕುವೆಲ್ಲೋ, ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಜೋಕಿಂ ಸ್ಟ್ಯಾನಿ ಆಲ್ವಾರಿಸ್, ಪತ್ರಕರ್ತ ರೋನ್ಸ್ ಬಂಟ್ವಾಳ್ ಉಪಸ್ಥಿತರಿದ್ದು ನಾಟಕ ತಂಡದ ಅವಿರತ ಶ್ರಮದ ಹಾಗೂ



ಭಾಷಾಭಿಮಾನದ ಫಲ ಈ ನೂರರ ಪ್ರಯೋಗ ರಂಗ ಕ್ಷೇತ್ರದ ಹೆಗ್ಗುರುತು ಆಗಿದೆ ಎಂದರು. ಹಾಗೂ 'ಮ್ಹಾತಾರೊ ಚರ್ಬೆಲಾ' ನಾಟಕ ತಂಡದ ಪ್ರಮುಖ ರೂವಾರಿ ಫ್ರಾನ್ಸಿಸ್ ಫೆರ್ನಾಂಡಿಸ್ ಮತ್ತು ಜೊಯ್ ಪಾಲಡ್ಕ ಅವರಿಗೆ ವಿಶೇಷವಾಗಿ ಸನ್ಮಾನಿಸಿ ಅಭಿನಂದಿಸಿದರು. ಅಂತೆಯೇ ತಂಡದ ಇತರ ಕಲಾವಿದರನ್ನೂ, ಅತಿಥಿಗಳನ್ನೂ ಗೌರವಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಜಡ್ಜ್ ನಿತಿನ್ ಕುವೆಲ್ಲೋ ವಿಶೇಷವಾಗಿ ಸನ್ಮಾನಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ದಾಯ್ಜಿವರ್ಲ್ಡ್‌ನ ಪ್ರವೀಣ್ ತಾವ್ರೋ, ಎಂಸಿಸಿ ಬ್ಯಾಂಕ್‌ನ ನಿರ್ದೇಶಕ ಅಡ್ವಕೇಟ್ ಎ.ಪಿ ಮೊಂತೆರೋ ಮತ್ತಿತರರು ವಿಶೇಷ ಆಮಂತ್ರಿತರಾಗಿ, ಕಾಥೋಲಿಕ್ ಕೊಂಕಣ್ ಸಂಚಾಲನ್ ಅಧ್ಯಕ್ಷ ಜೋಕಿಂ ಡಿಸೋಜಾ, ಉಪಾಧ್ಯಕ್ಷ ಕಿರಣ್ ಡಿಸೋಜಾ, ಮಾಜಿ ಅಧ್ಯಕ್ಷ ಪ್ರಮೋದ್ ಪಿಂಟೋ, ಗೌ। ಕಾರ್ಯದರ್ಶಿ ಲಿಯೋ ಮಥಾಯಸ್, ಗೌ। ಕೋಶಾಧಿಕಾರಿ ವಿನ್ಸೆಂಟ್ ಫುರ್ಟಾಡೋ, ಜೊತೆ ಕಾರ್ಯದರ್ಶಿ ಡಿಂಪಲ್ ಕುವೆಲ್ಲೋ, ಪೋಷಕ ಸದಸ್ಯ ಸ್ಟೇನಿ ಡಿಸಿಲ್ವಾ, ಉಪಸ್ಥಿತರಿದ್ದರು.

83ರ ಹರೆಯದ ಹಿರಿಯಣ್ಣ, ಅಪ್ರತಿಮ ಕಲಾವಿದ ಫ್ರಾನ್ಸಿಸ್ ಫೆರ್ನಾಂಡಿಸ್ ರಚಿಸಿ ಹಿರಿಯ ರಂಗ ಸಂಘಟಕ, ಕಲಾವಿದ ಜೊಯ್ ಪಾಲಡ್ಕ ನಿರ್ದೇಶನದಲ್ಲಿ ನೂರನೇ ಪ್ರದರ್ಶನ ಕಂಡ 'ಮ್ಹಾತಾರೊ ಚರ್ಬೆಲಾ' ನಾಟಕದಲ್ಲಿ ಮೂರು ದಶಕಗಳ ಹಿಂದಿನ ಬಹುತೇಕ ಕಲಾವಿದರೇ ನಟಿಸಿ ಯಶಸ್ವಿಯಾಗಿ ನಾಟಕ ಪ್ರದರ್ಶಿಸಿದರು.

ಫ್ರಾನ್ಸಿಸ್ ಫೆರ್ನಾಂಡಿಸ್ ಕಾಸ್ಸಿಯಾ ಪ್ರಧಾನ ಭೂಮಿಕೆಯಲ್ಲಿ ನಟಿಸಿದ್ದು, ಜೊಯ್ ಪಾಲಡ್ಕ, ಬೆಟ್ಟಿ ನ್ಹಾಜ್ ಬಾಂದ್ರ, ಜ್ಯೂಲಿ ವಾಜ್ ಮರೋಳ್, ಫ್ಲೋರಾ ಡಿ'ಸೋಜಾ ಕಲ್ಮಾಡಿ (ಜೆರಿಮೆರಿ), ಶಾಂತಿ ಬಾರ್ಬೋಜಾ ಬೊಳಿಯೆ, ಗ್ರೇಗರಿ ಸಿಕ್ವೇರಾ ನಿಡ್ಡೋಡಿ, ಪೀಟರ್ ಪಾಯ್ಸ್ ಬಸ್ರೂರು, ಪೀಟರ್ ಕುಟಿನ್ಹೋ ಮುಂಡ್ಕೂರು, ಲವಿನಾ ಡಿಸೋಜಾ ಜೆರಿಮೆರಿ ಅಭಿನಯಿಸಿ ಕಲಾಭಿಮಾನಿಗಳ ಮೆಚ್ಚುಗೆಗೆ ಪಾತ್ರರಾದರು. ಗಾಂಧರ್ವ ಆಕಾಡೆಮಿ ಅವರಿಂದ ನೃತ್ಯ ಪ್ರದರ್ಶನ ನೇರವೇರಿತು. ವಿನ್ಸೆಂಟ್ ಫೆರ್ನಾಂಡಿಸ್ ಕೊಂಕಣಿ ಹಾಡುಗಳನ್ನು ಪ್ರಸ್ತುತ ಪಡಿಸಿದರು.

ನೆರೆದಿದ್ದ ನಾಟಕ ಕಲಾಭಿಮಾನಿಗಳು, ಮ್ಹಾತಾರೊ ಹಿತೈಷಿಗಳು ವಿಶೇಷವಾಗಿ ಫ್ರಾನ್ಸಿಸ್ ಫೆರ್ನಾಂಡಿಸ್ ಹಾಗೂ ಅತಿಥಿಗಳನ್ನು ವಾದ್ಯಘೋಷಗಳ ನೀನಾದದೊಂದಿಗೆ ವೈಭವಪೇತವಾಗಿ ಕಲಾಮಂದಿರಕ್ಕೆ ಬರಮಾಡಿ ಕೊಂಡತು. ಲಿಯೋ ಮಥಾಯಸ್ ಪ್ರಾರ್ಥನೆಗೈದರು. ವೀಣಾ ಲೋಬೊ ಸ್ವಾಗತಿಸಿದರು. ಜೆನಿಫರ್ ಆಂದ್ರಾದೆ ಸನ್ಮಾನ ಪತ್ರ ವಾಚಿಸಿದರು. ವಿನ್ಸೆಂಟ್ ಮೆಂಡೊನ್ಸಾ ಕಲಾವಿದರನ್ನು ಪರಿಚಯಿಸಿದರು. ಜೆನಿಫರ್ ವಾಸ್ ಕಾರ್ಯಕ್ರಮ ನಿರೂಪಿಸಿದರು. ಸಿಲ್ವೆಸ್ಟರ್ ಸಲ್ಡಾನ್ಹಾ ಧನ್ಯವಾದ ಸಮರ್ಪಿಸಿದರು.



# ಕಾಕ್ರೋಚ್ ಜನತಾ ಪಾರ್ಟಿಗೆ ಸಾಲು ಸಾಲು ಸವಾಲು ಎಕ್ಸ್ ಖಾತೆ ಬೆನ್ನಲ್ಲೇ ಇನ್ಸ್ಟಾ ಖಾತೆ ಹ್ಯಾಕ್

**ನವದೆಹಲಿ, ಮೇ 23:** ಕಾಕ್ರೋಚ್ ಜನತಾ ಪಾರ್ಟಿಯ ಎಕ್ಸ್ ಖಾತೆಯನ್ನು ಇತ್ತೀಚೆಗೆ ರಾಷ್ಟ್ರೀಯ ಭದ್ರತೆಯ ಹೆಸರಿನಲ್ಲಿ ನಿರ್ಬಂಧಿಸಲಾಗಿತ್ತು. ಇದರ ಬೆನ್ನಲೆ ಕಾಕ್ರೋಚ್ ಜನತಾ ಪಾರ್ಟಿ ಇನ್ಸ್ಟಾಗ್ರಾಂ ಖಾತೆ ಹ್ಯಾಕ್ ಆಗಿದೆ ಎನ್ನುವ ಆರೋಪವೂ ಕೇಳಿದೆ ಬಂದಿದೆ.

ಸಿಜೆಪಿ ಸ್ಥಾಪಕ ಅಭಿಜಿತ್ ದೀಪ್ಕೆ ಕೆಲವು ಸ್ಕ್ರೀನ್‌ಶಾಟ್‌ಗಳನ್ನು ಹಂಚಿಕೊಂಡು ಇನ್ಸ್ಟಾಗ್ರಾಮ್ ಖಾತೆಯನ್ನು ಸುರಕ್ಷತೆಗಾಗಿ ಲಾಕ್ ಮಾಡಲಾಗಿದೆ, ಗುರುತು ಪರಿಶೀಲನೆ ಮಾಡಿ, ಪಾಸ್‌ವರ್ಡ್ ಬದಲಿಸಿದರೆ ಮಾತ್ರ ಮರುಸ್ಥಾಪಿಸಲಾಗುತ್ತದೆ ಎಂಬ ಸಂದೇಶ ಕಾಣುತ್ತದೆ. ಆದರೆ ಮರುಪಡೆಯುವಿಕೆ ಪ್ರಕ್ರಿಯೆ ಪದೇ ಪದೇ ವಿಫಲವಾಗುತ್ತಿದ್ದು, ಅವರು ಸಂಪೂರ್ಣವಾಗಿ ಖಾತೆಯಿಂದ ಹೊರಗುಳಿದಿರುವುದಾಗಿ ಹೇಳಿದ್ದಾರೆ.

ಮೆಟಾ ನೀಡಿರುವ ಖಾತೆ ಮರುಪಡೆಯುವ ವ್ಯವಸ್ಥೆಯ ಮೂಲಕ ಹಲವಾರು ಬಾರಿ ಪ್ರಯತ್ನಿಸಿದರೂ, ತಮ್ಮ ಖಾತೆಯನ್ನು ಮರಳಿ ಪಡೆಯಲು ಸಾಧ್ಯವಾಗಲಿಲ್ಲ ಎಂದು ಅಬಿಜಿತ್ ದಿಪ್ಕೆ ಹೇಳಿಕೊಂಡಿದ್ದಾರೆ. ಸದ್ಯ ಇದೀಗ ಮತ್ತೆ ಸೋಷಿಯಲ್ ಮೀಡಿಯಾದಲ್ಲಿ ಭಾರೀ ಚರ್ಚೆಯಾಗುತ್ತಿದೆ.ಸಿಜೆಪಿ ಪಕ್ಷದ ಬ್ಯಾಕಪ್ ಇನ್ಸ್ಟಾಗ್ರಾಮ್ ಖಾತೆಯನ್ನೂ ಕೆಲಕಾಲ ಸಂಪೂರ್ಣವಾಗಿ ತೆಗೆದುಹಾಕಲಾಗಿತ್ತು, ನಂತರ ಗಂಟೆಗಳ ಬಳಿಕ ಅದನ್ನು ಪುನಃಸ್ಥಾಪಿಸಲಾಯಿತು ಎಂದು ದೀಪ್ಕೆ ಆರೋಪಿಸಿದ್ದಾರೆ. ಅವರು ಮಾಡಿದ ಪೋಸ್ಟ್‌ಗಳಲ್ಲಿ, ಸಾಮಾಜಿಕ ಮಾಧ್ಯಮ ಕಂಪನಿಗಳು ಈ ಚಳವಳಿಗೆ ಸಂಬಂಧಿಸಿದ ಖಾತೆಗಳನ್ನು ಗುರಿಯಾಗಿಸಿಕೊಂಡಿವೆ ಎಂದು ಕಿಡಿಕಾರಿದ್ದಾರೆ. ಕಾಕ್ರೋಚ್ ಜನತಾ ಪಾರ್ಟಿ ಮೇಲೆ ಕ್ರ್ಯಾಕ್‌ಡೌನ್ ನಡೆಯುತ್ತಿದೆ. ನಮ್ಮ ಇನ್ಸ್ಟಾಗ್ರಾಮ್ ಪುಟ, ನನ್ನ ವೈಯಕ್ತಿಕ ಇನ್ಸ್ಟಾಗ್ರಾಮ್, ಟ್ವಿಟರ್ ಖಾತೆ, ಬ್ಯಾಕಪ್ ಖಾತೆ ಎಲ್ಲವನ್ನೂ ಹ್ಯಾಕ್ ಅಥವಾ ತಡೆಹಿಡಿಯಲಾಗಿದೆ ಎಂದು ಹೇಳಿದ್ದಾರೆ. ತಮ್ಮ ಪಕ್ಷಕ್ಕೆ ಡಿಜಿಟಲ್ ವೇದಿಕೆಗಳಲ್ಲಿ ಪ್ರವೇಶ ನಿರ್ಬಂಧಿಸಲಾಗುತ್ತಿದೆ ಎಂದು ಆರೋಪಿಸಿರುವ ಅಬಿಜಿತ್ ದಿಪ್ಕೆ ದಯವಿಟ್ಟು ಗಮನಿಸಿ. ಸದ್ಯ ನಮಗೆ ಎಲ್ಲ ವೇದಿಕೆಗಳಲ್ಲಿ ಪ್ರವೇಶ ನಿರ್ಬಂಧಿಸಲಾಗಿದೆ. ಹೀಗಾಗಿ, ಇನ್ನುಮುಂದೆ ಪ್ರಕಟವಾಗುವ ಯಾವುದೇ ಪೋಸ್ಟ್ ಕಾಕ್ರೋಚ್ ಜನತಾ ಪಕ್ಷದ ಅಧಿಕೃತ ಹೇಳಿಕೆ ಎಂದು ಪರಿಗಣಿಸಬೇಡಿ ಎಂದು ಮನವಿ ಮಾಡಿದ್ದಾರೆ.

### ಸಿಜೆಪಿ ಸ್ಥಾಪಕ ಅಭಿಜಿತ್ ದೀಪ್ಕೆಗೆ ಕೊಲೆ ಬೆದರಿಕೆ

ರಾಜಕೀಯ ವಿಡಂಬನಾತ್ಮಕ ಕಾಕ್ರೋಚ್ ಜನತಾ ಪಾರ್ಟಿ ಸ್ಥಾಪಕ ಅಭಿಜಿತ್ ದೀಪ್ಕೆಗೆ ಇತ್ತೀಚೆಗೆ ನಿರಂತರವಾಗಿ ಕೊಲೆ ಬೆದರಿಕೆಗಳು ಬರುತ್ತಿವೆ. ಈ ಚಟುವಟಿಕೆಗಳನ್ನು ತಕ್ಷಣವೇ ನಿಲ್ಲಿಸದಿದ್ದರೆ ಅಮೆರಿಕದಲ್ಲಿದ್ದರೂ ಕೊಲ್ಲುವುದಾಗಿ ದುಷ್ಕರ್ಮಿಗಳು ಅವರಿಗೆ ವಾಟ್ಸಾಪ್ ಮೂಲಕ ಸಂದೇಶಗಳನ್ನು ಕಳುಹಿಸಿದ್ದಾರೆ.

### ಬಹಿರಂಗ ಸಭೆಗೆ ಅನುಮತಿ ನಿರಾಕರಿಸಿದ ಬೆಂಗಳೂರು ಪೊಲೀಸರು

ಡಿಜಿಟಲ್ ವ್ಯವಸ್ಥೆಗೆ ಸೀಮಿತವಾಗಿದ್ದ ಸಿಜೆಪಿ ವಾಸ್ತವದಲ್ಲೂ ತಲೆ ಎತ್ತಲು ಶುರು ಮಾಡಿತ್ತು. ಇದರ ಭಾಗವಾಗಿ ನಾಳೆ ಬೆಂಗಳೂರಿನ ಟೌನ್‌ಹಾಲ್ ಬಳಿ ಬಹಿರಂಗ ಸಭೆ ನಡೆಸಲು ಸಿದ್ಧತೆ ನಡೆದಿತ್ತು. ಆದರೆ ಈ ಸಭೆಗೆ ಪೊಲೀಸರು ಅನುಮತಿ ನಿರಾಕರಿಸಿದ್ದಾರೆ. ಹೈಕೋರ್ಟ್ ಆದೇಶದಂತೆ ಫ್ರೀಡಂ ಪಾರ್ಕ್ ಬಿಟ್ಟು ಬೇರೆ ಕಡೆ ಸಭೆ ಮಾಡುವುಂತಿಲ್ಲ ಎಂಬ ಆದೇಶವಿದೆ. ಸದರಿ ಆದೇಶ ಉಲ್ಲಂಘನೆ ಮಾಡಿದ್ರೇ ಕೋರ್ಟ್ ಆದೇಶ ಉಲ್ಲಂಘನೆ ಮಾಡಿದಂತೆ ಅಂತಾ ನೋಟಿಸ್ ನೀಡಲಾಗಿದೆ. ಹೀಗಾಗಿ ಟೌನ್‌ಹಾಲ್ ಒಳಾಂಗಣದಲ್ಲಿ ಬುಕ್ಕಿಂಗ್ ಮಾಡಿಕೊಂಡು ಬಂದ ಬಳಿಕ ಈ ಬಗ್ಗೆ ಪರಿಶೀಲಿಸಿಲಾಗುವುದು ಎಂದು ಬೈರಪ್ಪ ಹರೀಶ್‌ಗೆ ಪೊಲೀಸರು ನೋಟಿಸ್ ಕೊಟ್ಟಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಗೃಹ ಸಚಿವ ಪರಮೇಶ್ವರ್ ಯಾವ ಉದ್ದೇಶಕ್ಕೆ ಮಾಡ್ತಿದ್ದಾರೆ, ಒಂದು ಸಮಾವೇಶ ಮಾಡಿದಾಗ ಯಾರೆಲ್ಲ ಬರ್ತಾರೆ ಅಂತ ಪೊಲೀಸರು ಪರಿಶೀಲಿಸ್ತಾರೆ. ಕಾನೂನು ಸುವ್ಯವಸ್ಥೆ ಪೊಲೀಸರು ಕಾಪಾಡ್ತಾರೆ, ಅನುಮತಿ ಕೊಡೋದು ಬಿಡೋದು ಅವರಿಗೆ ಬಿಟ್ಟ ವಿಚಾರ. ನಮ್ಮ ಪಕ್ಷ, ನಾಯಕರ ಬೆಂಬಲ ಬೇರೆ ಪೊಲೀಸರು ನಿರಾಕರಣೆ ಮಾಡಿದ್ದಾರೆ ಅಂದ್ರೆ ಏನಾದ್ರೂ ಅಂಶಗಳು ಇರಬೇಕಲ್ಲ. ಪೊಲೀಸರ ಕೆಲಸ ಪೊಲೀಸರು ಮಾಡ್ತಾರೆ. ರಾಜಕಾರಣಿಗಳು ಮಾಡೋ ಕೆಲಸ ರಾಜಕಾರಣಿಗಳು ಮಾಡ್ತಾರೆ ಎಂದರು.

**ಮೊದಲ ಬಾರಿಗೆ ರಾಜ್ಯಕ್ಕೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಭೇಟಿ**

# ಪಕ್ಷ ಸಂಘಟನೆ, ಪ್ರಸ್ತುತ ರಾಜಕೀಯ ಸ್ಥಿತಿ, ಜಿಬಿಎ ಚುನಾವಣೆ ಸೇರಿ ಹಲವು ವಿಷಯಗಳ ಕುರಿತು ಪಕ್ಷದ ನಾಯಕರೊಂದಿಗೆ ಚರ್ಚೆ ಸಾಧ್ಯತೆ

**ಬೆಂಗಳೂರು, ಮೇ.23:** ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರು ಮೊದಲ ಬಾರಿಗೆ ರಾಜ್ಯಕ್ಕೆ ಆಗಮಿಸಿರುವುದು ಕೇಸರಿ ಪಾಳಯದಲ್ಲಿ ರಣೋತ್ಸಾಹ ಮೂಡಿಸಿದೆ. ರಾಷ್ಟ್ರೀಯ ಅಧ್ಯಕ್ಷರಾದ ಬಳಿಕ ಇದು ಅವರ ಮೊದಲ ಕರ್ನಾಟಕ ಪ್ರವಾಸವಾಗಿದ್ದು, ರಾಜ್ಯ ರಾಜಕಾರಣದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ಇತ್ತೀಚೆಗಷ್ಟೇ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸಾಧಿಸಿದ ಐತಿಹಾಸಿಕ ಜಯದ ಬೆನ್ನಲ್ಲೇ, ದಕ್ಷಿಣ ಭಾರತದ ಹೆಬ್ಬಾಗಿಲಾದ ಕರ್ನಾಟಕದಲ್ಲಿ ಪಕ್ಷವನ್ನು ಮರುಸಂಘಟಿಸಲು ಹೈಕಮಾಂಡ್ ಸಂಪೂರ್ಣ ಗಮನ ಹರಿಸಿದೆ.

ಎರಡು ದಿನಗಳ ಭೇಟಿಯಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪ್ರಮುಖ ನಾಯಕರು, ಆರ್‌ಎಸ್‌ಎಸ್ ಪ್ರಮುಖರು ಮತ್ತಿತರರನ್ನು ಭೇಟಿ ಯಾಗಿ ಪಕ್ಷ ಸಂಘಟನೆ ಬಗ್ಗೆ ಮಹತ್ವದ ಸಲಹೆಗಳನ್ನು ಪಡೆಯಲಿದ್ದಾರೆ. ಭಾನುವಾರ ಬೆಳಗ್ಗೆ ಮಲ್ಲೇಶ್ವರಂನ ಐತಿಹಾಸಿಕ ಕಾಡು ಮಲ್ಲೇಶ್ವರ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸುವರು. ಈ ವೇಳೆ ರಾಜ್ಯ ಬಿಜೆಪಿ ಅಧ್ಯಕ್ಷರಾದ ಬಿ.ವೈ. ವಿಜಯೇಂದ್ರ ಅವರು ಸಾಥ್ ನೀಡಲಿದ್ದಾರೆ.

ನಂತರ ರಾಜ್ಯ ಬಿಜೆಪಿ ಕಚೇರಿ ಜಗನ್ನಾಥ ಭವನಕ್ಕೆ ಭೇಟಿ ನೀಡಲಿರುವ ನಿತಿನ್ ನಬೀನ್ ಅವರಿಗೆ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಅದ್ದೂರಿ ಮತ್ತು ಸಾಂಪ್ರದಾಯಿಕ ಸ್ವಾಗತ ಕೋರಲಿದ್ದಾರೆ. ಇದಕ್ಕೂ ಮುನ್ನ ನಿತಿನ್ ನಬೀನ್ ಅವರು ಮಾಜಿ ಮುಖ್ಯಮಂತ್ರಿ ಹಾಗೂ ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್.ಯಡಿಯೂರಪ್ಪ ಅವರ ಧವಳಗಿರಿ ನಿವಾಸಕ್ಕೆ ಭೇಟಿ ನೀಡಲಿದ್ದಾರೆ. ಯಡಿಯೂರಪ್ಪ ಅವರೊಂದಿಗೆ ಉಪಾಹಾರ ಸೇವಿಸಿ ರಾಜ್ಯ ರಾಜಕೀಯ ಸ್ಥಿತಿಗತಿ ಹಾಗೂ ಮುಂಬರುವ ಜಿಬಿಎ ಚುನಾವಣೆಗಳ ಕುರಿತು ಮಹತ್ವದ ಚರ್ಚೆ ನಡೆಸಲಿದ್ದಾರೆ. ನಂತರ ಪಕ್ಷದ ಕಚೇರಿಯಲ್ಲಿ ಅತ್ಯಂತ ಪ್ರಮುಖ ಸಂಘಟನಾತ್ಮಕ ಸಭೆ ನಡೆಯಲಿದೆ. ಪಕ್ಷದ ಎಲ್ಲಾ ಶಾಸಕರು, ಸಂಸದರು ಮತ್ತು ವಿಧಾನ ಪರಿಷತ್ ಸದಸ್ಯರು , ರಾಜ್ಯ ಪದಾಧಿಕಾರಿಗಳು, ಮೋರ್ಚಾ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು, ಎಲ್ಲಾ ವಿಭಾಗೀಯ ಉಸ್ತುವಾರಿಗಳು, ಜಿಲ್ಲಾ ಅಧ್ಯಕ್ಷರು ಹಾಗೂ ಐಟಿ–ಸೋಷಿಯಲ್ ಮೀಡಿಯಾ ವಿಭಾಗದ ಮುಖ್ಯಸ್ಥರು ಭಾಗವಹಿಸಲಿದ್ದಾರೆ.

ಮಧ್ಯಾಹ್ನ 2 ಗಂಟೆಗೆ ನಿತಿನ್ ನಬೀನ್ ಅವರ ಅಧ್ಯಕ್ಷತೆಯಲ್ಲಿ ಬಿಜೆಪಿ ರಾಜ್ಯ ಕೋರ್ ಕಮಿಟಿ ಸಭೆ ನಡೆಯಲಿದೆ. ಮೂಲಗಳ ಪ್ರಕಾರ, ಕರ್ನಾಟಕ ಬಿಜೆಪಿ ಕೋರ್ ಕಮಿಟಿಯನ್ನು ಪುನಾರಚಿಸುವ ಸಾಧ್ಯತೆಗಳಿದ್ದು, ಯುವ ಮತ್ತು ಸಕ್ರಿಯ ನಾಯಕರಿಗೆ ಹೆಚ್ಚಿನ ಆದ್ಯತೆ ನೀಡುವ ಕುರಿತು ಚರ್ಚೆಯಾಗಲಿದೆ. ಪ್ರಸ್ತುತ ರಾಜ್ಯ ಅಧ್ಯಕ್ಷರಾಗಿರುವ ಬಿ. ವೈ.ವಿಜಯೇಂದ್ರ ಅವರನ್ನು ಪೂರ್ಣಾವಧಿ ಅಧ್ಯಕ್ಷರನ್ನಾಗಿ ಮುಂದುವರಿಸುವ ಕುರಿತು ಅನೌಪಚಾರಿಕ ಸಮಾಲೋಚನೆ ನಡೆಯಲಿದ್ದು, ಈ ಭೇಟಿಯು ಪಕ್ಷದೊಳಗಿನ ಭಿನ್ನಮತ ಶಮನಕ್ಕೆ ಸಹಕಾರಿಯಾಗಲಿದೆ ಎನ್ನಲಾಗಿದೆ. ಮಧ್ಯಾಹ್ನ 3.45ಕ್ಕೆ ಯಲಹಂಕದ ಸಿಂಗ ನಾಯಕನ ಹಳ್ಳಿಯಲ್ಲಿರುವ ಖಾಸಗಿ



ರೆಸಾರ್ಟ್‌ನಲ್ಲಿ ಆಯೋಜಿಸಲಾಗಿರುವ ಬೆಂಗಳೂರು ಉತ್ತರ ಜಿಲ್ಲಾ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಕಾರ್ಯಕರ್ತರನ್ನು ದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ 4.30ಕ್ಕೆ ರಾಜ್ಯದ ವಿಶೇಷ ತಂಡದೊಂದಿಗೆ ಮಾತುಕತೆ ನಡೆಸಿ ದೆಹಲಿಗೆ ವಾಪಸಾಗಲಿದ್ದಾರೆ.



ಹಾವೇರಿಯ ಪೆಟ್ರೋಲ್ ಬಂಕ್‌ನಲ್ಲಿ ಶನಿವಾರ ವಾಹನಗಳೊಂದಿಗೆ ಸಾಲುಗಟ್ಟಿ ನಿಂತ ಜನರು

# ಕೋಮುಗಲಭೆ ಆರೋಪಿಗಳ ವಿರುದ್ಧ ಕೇಸ್ ವಾಪಸ್ ರಾಜ್ಯದ ಭದ್ರತೆಗೆ ಅಪಾಯ: ಅಶೋಕ್ ಆತಂಕ

**ಬೆಂಗಳೂರು, ಮೇ 23:** ಕೋಮುಗಲಭೆ ಆರೋಪಿಗಳ ವಿರುದ್ಧದ ಪ್ರಕರಣಗಳನ್ನು ಹಿಂಪಡೆಯುವ ಮೂಲಕ ಕಾಂಗ್ರೆಸ್ ಸರ್ಕಾರ ಮತ್ತೆ ಮತಬ್ಯಾಂಕ್ ರಾಜಕಾರಣ ಮಾಡಿದೆ. ಜತೆಗೆ ಸರ್ಕಾರದ ಈ ಕ್ರಮ ರಾಜ್ಯದ ಭದ್ರತೆಗೆ ಅಪಾಯ ತಂದೊಡ್ಡಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.




ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಳಂದದ ಲಾಡ್ಲೆ ಮಶಾಕ್ ದರ್ಗಾ ಬಳಿ ಪೊಲೀಸರ ಮೇಲೆ ಹಲ್ಲೆ ಮಾಡಿರುವವರ, ಸಚಿವರ ಕಾರಿನ ಮೇಲೆ ದಾಳಿ ಮಾಡಿರುವವರ, ದರ್ಗಾ ಹೆಸರಲ್ಲಿ ಕೋಮುಗಲಭೆ ಮಾಡಿರುವವರ ವಿರುದ್ಧ ಇದ್ದ ಪ್ರಕರಣಗಳನ್ನು ಕಾಂಗ್ರೆಸ್ ಸರ್ಕಾರ ವಾಪಸ್ ಪಡೆದಿದೆ. ಈ ಪ್ರಕರಣದಲ್ಲಿ ಪಾಪ್ಯುಲರ್ ಫ್ರಂಟ್ ಸೇರಿದಂತೆ 150 ಮಂದಿಯ ಮೇಲಿದ್ದ ಕೇಸುಗಳನ್ನು ತೆಗೆದುಹಾಕಿ ವೋಟ್ ಬ್ಯಾಂಕ್ ರಾಜಕೀಯ ಮಾಡಲಾಗಿದೆ. ಈ ವಿಚಾರದಲ್ಲಿ ಸಚಿವರು ಹಾಗೂ ಸಿಎಂ ಸಂವಿಧಾನದ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ಮತ ನೀಡಿದರೆ ಸಾಕು, ಭಯೋತ್ಪಾದನೆ ಮಾಡಿದರೂ ಬೆಂಬಲಿಸುತ್ತೇವೆ ಎಂಬ ಸಂದೇಶವನ್ನು ಕಾಂಗ್ರೆಸ್ ನೀಡಿದೆ. ಇಂತಹ ಕ್ರಮಗಳಿಂದಾಗಿ ದೇಶದ ಭದ್ರತೆಗೆ ಅಪಾಯ ಬರುತ್ತದೆ ಎಂದರು.

ಬಾಂಗ್ಲಾಪ್ರಜೆಗಳು ದೇಶದೊಳಗೆ ನುಗ್ಗಿ ದೇಶದ್ರೋಹಿ ಕೆಲಸಗಳನ್ನು ಮಾಡುತ್ತಿದ್ದಾರೆ. ಇದೇ ಮಾದರಿಯಲ್ಲಿ ಕೆಲವರು ಕೋಮುಗಲಭೆ ಮಾಡುತ್ತಿದ್ದಾರೆ. ಈ ಕ್ರಮದಿಂದ ಹಿಂದೆ ಸರಿಯದೇ ಇದ್ದರೆ ಬಿಜೆಪಿ ಹೋರಾಟ ಮಾಡಲಿದೆ ಎಂದು ಎಚ್ಚರಿಸಿದರು. ಹಾಗೂ ಕೋಮುಗಲಭೆ ಮಾಡಿರುವವರು ಯಾರ ಪರವಾಗಿ ಹೋರಾಟ ಮಾಡಿದ್ದಾರೆ. ಇದು ಬಹುಸಂಖ್ಯಾತರಿಗೆ ದ್ರೋಹ ಬಗೆದ ಕ್ರಮ ಎಂದರು.

# ಇಂಧನದ ಜತೆಗೆ ಸಿಎನ್‌ಜಿ ಬೆಲೆಯೂ ಏರಿಕೆ




**ಬೆಂಗಳೂರು, ಮೇ 23:** ಪಶ್ಚಿಮ ಏಷ್ಯಾ ಸಂಘರ್ಷದಿಂದಾಗಿ ದೇಶದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ. ಇದರ ಬೆನ್ನಲ್ಲೇ ಬೆಂಗಳೂರಿನಲ್ಲಿ ಶನಿವಾರ ಸಿಎನ್‌ಜಿ ಬೆಲೆಯೂ ಏರಿಕೆಯಾಗಿದ್ದು, ವಾಹನ ಸವಾರರು ಕಂಗಾಲಾಗಿದ್ದಾರೆ.

ಇಂದು ಬೆಂಗಳೂರಿನಲ್ಲಿ ಸಿಎನ್‌ಜಿ ದರ 2 ರೂಪಾಯಿ ಏರಿಕೆಯಾಗಿದ್ದು, ಕೆಜಿ ಸಿಎನ್‌ಜಿ 93 ರೂಪಾಯಿಯಿಂದ 95 ರೂಪಾಯಿಗೆ ಹೆಚ್ಚಳವಾಗಿದೆ. ಇದು ಕಳೆದ 9 ದಿನದಲ್ಲಿ ಮೂರನೇ ಬಾರಿ ಸಿಎನ್‌ಜಿ ಬೆಲೆ ಏರಿಕೆಯಾಗಿದೆ.

ಶಾಂತಿನಗರದ ಗೇಲ್ ಗ್ಯಾಸ್ ಮುಂಭಾಗದಲ್ಲಿ ಸಿಎನ್‌ಜಿಗಾಗಿ ಚಾಲಕರು ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಎದುರಾಗಿದೆ.

ಗಂಟೆಗಳ ಕಾಲ ಕಾದರೂ ಇಂಧನ ಸಿಗುವ ಯಾವುದೇ ಖಾತರಿಯಿಲ್ಲ. ಇದು ದೈನಂದಿನ ಕೆಲಸ ಕಾರ್ಯಗಳಿಗೆ ಅಡ್ಡಿಯಾಗುತ್ತಿದ್ದು, ಕುಟುಂಬ ನಿರ್ವಹಣೆ ಕಷ್ಟಕರವಾಗಿದೆ ಎಂದು ಚಾಲಕರು ಅಳಲು ತೋಡಿಕೊಂಡಿದ್ದಾರೆ.

ನಿರಂತರ ಬೆಲೆ ಏರಿಕೆ ಮತ್ತು ಇಂಧನ ಪೂರೈಕೆ ಸಮಸ್ಯೆಯಿಂದ ಬೆಂಗಳೂರಿನಲ್ಲಿ ಜೀವನ ನಡೆಸುವುದು ದುಸ್ತರವಾಗಿದೆ ಆಟೋ ಚಾಲಕರು ಹೇಳಿದ್ದಾರೆ.

**ವರ್ಷದೊಳಗೆ 60 ಪ್ರಮುಖ ಸಾಕ್ಷಿಗಳ ವಿಚಾರಣೆ ಪೂರ್ಣಗೊಳಿಸುವಂತೆ ನಿರ್ದೇಶನ**

# ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಸೆಷನ್ಸ್ ಕೋರ್ಟ್‌ಗೆ ಸುಪ್ರೀಂ ಆದೇಶದ ಪ್ರತಿ ಸಲ್ಲಿಕೆ




**ಬೆಂಗಳೂರು, ಮೇ.23:** ರೇಣುಕಾ ಸ್ವಾಮಿ ಕೊಲೆ ಆರೋಪಿ ದರ್ಶನ್ ಅಂಡ್ ಗ್ಯಾಂಗ್ ವಿರುದ್ಧದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ ನೀಡಿರುವ ಮಹತ್ವದ ಆದೇಶದ ಪ್ರತಿಯನ್ನು ದರ್ಶನ್ ಪರ ವಕೀಲರು ಬೆಂಗಳೂರಿನ ಸೆಷನ್ಸ್ ಕೋರ್ಟ್‌ಗೆ ಅಧಿಕೃತವಾಗಿ ಸಲ್ಲಿಸಿದ್ದಾರೆ.

ಈ ಆದೇಶದ ಅನ್ವಯ, ಪ್ರಕರಣದ ತ್ವರಿತಗತಿ ವಿಚಾರಣೆ ನಡೆಸುವ ಹಾಗೂ ಆರೋಪಿಗಳಿಗೆ ಒದಗಿಸಬೇಕಾದ ಕನಿಷ್ಠ ಸೌಲಭ್ಯಗಳ ಮಾರ್ಗಸೂಚಿಗಳನ್ನು ಹೇಗೆ ಅಳವಡಿಸಿಕೊಳ್ಳಬೇಕು ಎಂಬುದರ ಕುರಿತು ಸೆಷನ್ಸ್ ನ್ಯಾಯಾಲಯವು ಮುಂದಿನ ಮಹತ್ವದ ನಿರ್ಧಾರ ಕೈಗೊಳ್ಳಲಿದೆ.

ಪ್ರಕರಣದ ಗಂಭೀರತೆಯನ್ನು ಪರಿಗಣಿಸಿರುವ ಸುಪ್ರೀಂ ಕೋರ್ಟ್, ತ್ವರಿತಗತಿ ತನಿಖೆಗೆ ಕಟ್ಟುನಿಟ್ಟಿನ ಗಡುವು ವಿಧಿಸಿದ್ದು, ಮುಂಬರುವ ಒಂದು ವರ್ಷದ ಅವಧಿಯಲ್ಲಿ ಪ್ರಕರಣದ ಪ್ರಮುಖ 60 ಸಾಕ್ಷಿಗಳ ವಿಚಾರಣೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು ಎಂದು ಸ್ಪಷ್ಟ ನಿರ್ದೇಶನ ನೀಡಿದೆ.

ಇದೇ ವೇಳೆ ರಾಜ್ಯದ ಪೊಲೀಸ್ ಠಾಣಾವಾರು ಸೆಷನ್ಸ್ ಕೋರ್ಟ್‌ಗಳ ಹೊಸ ನಿಯೋಜನೆ ಪ್ರಕ್ರಿಯೆ ನಡೆದಿದ್ದು, ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯ ವ್ಯಾಪ್ತಿಯ ಕೇಸ್‌ಗಳ ಹಂಚಿಕೆಯಲ್ಲಿ ಪ್ರಮುಖ ಬದಲಾವಣೆಯಾಗಿದೆ. ಇದರ ಅನ್ವಯ, ಈವರೆಗೆ ಇಂಚಾರ್ಜ್ ಕೋರ್ಟ್‌ನಲ್ಲಿ ನಡೆಯುತ್ತಿದ್ದ ರೇಣುಕಾಸ್ವಾಮಿ ಕೊಲೆ ಕೇಸಿನ ಒಟ್ಟು ವಿಚಾರಣೆಯು ಮುಂಬರುವ ಜೂನ್ 1ರಿಂದ ಅಧಿಕೃತವಾಗಿ 59ನೇ ಸೆಷನ್ಸ್ ನ್ಯಾಯಾಲಯಕ್ಕೆ ವರ್ಗಾವಣೆಗೊಳ್ಳಲಿದ್ದು, ಮಾನ್ಯ ನ್ಯಾಯಾಧೀಶರಾದ ಸುಜಾತಾ ಎಂ. ಸಾಮ್ರಾಣಿ ಅವರ ನೇತೃತ್ವದಲ್ಲಿ ಈ ಹೈಪ್ರೊಫೈಲ್ ಕೊಲೆ ಪ್ರಕರಣದ ಅಸಲಿ ಟ್ರಯಲ್ ಮತ್ತು ಸಾಕ್ಷಿ ವಿಚಾರಣೆಗಳು ಜರುಗಲಿದೆ. ಮತ್ತೊಂದೆಡೆ, ಇದೇ ಪ್ರಕರಣದಲ್ಲಿ ಈಗಾಗಲೇ ಜಾಮೀನು ಪಡೆದು ಹೊರಗಿರುವ ಐದು ಜನ ಆರೋಪಿಗಳ ಜಾಮೀನನ್ನು ತಕ್ಷಣವೇ ರದ್ದುಗೊಳಿಸಬೇಕು ಎಂದು ಪ್ರಾಸಿಕ್ಯೂಷನ್ ಪರ ವಕೀಲರು ಸಲ್ಲಿಸಿದ್ದ ಅರ್ಜಿಯ ಸುದೀರ್ಘ ವಿಚಾರಣೆ ನಡೆಸಿರುವ ಕರ್ನಾಟಕ ಹೈಕೋರ್ಟ್, ಸದ್ಯ ತನ್ನ ತೀರ್ಪನ್ನು ಕಾಯ್ದಿರಿಸಲಾಗಿದೆ. ಮಹತ್ವದ ಬೆಳವಣಿಗೆಯ ಬೆನ್ನಲ್ಲೇ, ಹೈಕೋರ್ಟ್‌ಗೂ ಸಹ ಸುಪ್ರೀಂ ಕೋರ್ಟ್ ನೀಡಿರುವ ಆದೇಶದ ಪ್ರತಿಯನ್ನು ಸಲ್ಲಿಕೆ ಮಾಡಲಾಗಿದೆ. ಮುಂಬರುವ ಸೋಮವಾರದಂದು ರೇಣುಕಾಸ್ವಾಮಿ ಕೊಲೆ ಪ್ರಕರಣದ ಮುಂದಿನ ಹಂತದ ವಿಚಾರಣೆ ನ್ಯಾಯಾಲಯದಲ್ಲಿ ನಿಗದಿಯಾಗಿದ್ದು, ಅಂದು ಸುಪ್ರೀಂ ಕೋರ್ಟ್ ಆದೇಶದ ಅನ್ವಯ 59ನೇ ಸೆಷನ್ಸ್ ಕೋರ್ಟ್ ಕೈಗೊಳ್ಳಲಿರುವ ಮುಂದಿನ ಕ್ರಮಗಳು ಹಾಗೂ ಹೈಕೋರ್ಟ್‌ನಲ್ಲಿ ಕಾಯ್ದಿರಿಸಲಾಗಿರುವ ಐದು ಜನ ಆರೋಪಿಗಳ ಜಾಮೀನು ರದ್ದತಿ ಅರ್ಜಿಯ ಭವಿಷ್ಯದ ದೃಷ್ಟಿಯಿಂದ ಸೋಮವಾರದ ಕೋರ್ಟ್ ಕಲಾಪ ಇಡೀ ರಾಜ್ಯದಾದ್ಯಂತ ತೀವ್ರ ಕುತೂಹಲ ಮೂಡಿಸಿದೆ.

# ವಿರೋಧದ ನಡುವೆಯೂ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ

ಆನೇಕಲ್‌ನಲ್ಲಿ ರೈತರು, ಪರಿಸರವಾದಿಗಳ ವಿರೋಧದ ನಡುವೆಯೂ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲಾಗುತ್ತಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣವನ್ನು ವರ್ಷಕ್ಕೆ ಕೇವಲ ನಾಲ್ಕೈದು ಬಾರಿ ತೆರೆಯಲಾಗುತ್ತದೆ. ಇಂತಹ ಸ್ಥಿತಿ ಇರುವಾಗ ಯಾವ ಕಾರಣಕ್ಕೆ ಕ್ರೀಡಾಂಗಣ ನಿರ್ಮಿಸಲಾಗುತ್ತಿದೆ. ಕ್ರೀಡಾಂಗಣದ ಸುತ್ತ ಜಮೀನು ಮಾರಾಟ ಮಾಡಲು, ಅದರಿಂದ ಕಮೀಷನ್ ಹೊಡೆಯಲು ಈ ಯೋಜನೆ ರೂಪಿಸಲಾಗಿದೆ. ಆನೇಕಲ್‌ನ ಯಾರಾದರೂ ಕ್ರೀಡಾಪಟು ಸರ್ಕಾರದ ಬಳಿ ಬಂದು ಇದಕ್ಕೆ ಮನವಿ ಮಾಡಿದ್ದಾರೆಯೇ. ಏಕಾಏಕಿ ಈ ಯೋಜನೆ ರೂಪಿಸಿದ್ದಾರೆ ಎಂದರೆ ಇದು ಖಂಡಿತವಾಗಿ ಹಣ ಸಂಪಾದಿಸಲು ಮಾಡಿರುವ ಯೋಜನೆಯಾಗಿದೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ತರಬೇತಿಗೆ ಅವಕಾಶ ನೀಡುವ ಉದ್ದೇಶವಿತ್ತು. ಆದರೆ ಯಾವುದೇ ಹೊಸಬರಿಗೆ ಇಲ್ಲಿ ತರಬೇತಿ ನೀಡುವುದಿಲ್ಲ. ಕೋಟಗಟ್ಟಲೆ ಹಣ ಬರುವ ಐಪಿಎಲ್‌ಗೆ ಮಾತ್ರ ಇಲ್ಲಿ ಅವಕಾಶವಿದೆ ಎಂದು ಅಶೋಕ್ ತಿಳಿಸಿದರು.

**ಇಂಧನ ಬೆಲೆ ಹೆಚ್ಚಳದಿಂದ ರಾಜ್ಯ ಸರ್ಕಾರಕ್ಕೆ ಆದಾಯ**

ಪೆಟ್ರೋಲ್, ಡೀಸೆಲ್ ದರ ಹೆಚ್ಚಳದಿಂದ ಕೇಂದ್ರ ಸರ್ಕಾರಕ್ಕೆ ಹೆಚ್ಚುವರಿಯಾಗಿ ನಯಾಪೈಸೆ ತೆರಿಗೆ ಬರುವುದಿಲ್ಲ. ಆದರೆ ರಾಜ್ಯ ಸರ್ಕಾರಕ್ಕೆ ಸುಮಾರು ವಾರ್ಷಿಕ 7,000 ಕೋಟಿ ರೂ. ಆದಾಯ ಬರಲಿದೆ. ಕಾಂಗ್ರೆಸ್ ಸರ್ಕಾರಕ್ಕೆ ಜನರ ಬಗ್ಗೆ ಗೌರವವಿದ್ದರೆ ಅದನ್ನು ಬಿಡಲು ತಯಾರಿದ್ದೇವೆ ಎಂದು ಹೇಳಬೇಕು. ಕೇವಲ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುವುದು ಸರಿಯಲ್ಲ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಗಿರುವ ದರ ಏರಿಕೆಯಿಂದಾಗಿ ತೈಲ ಕಂಪನಿಗಳು ದರ ಏರಿಕೆ ಮಾಡಿವೆ. ಯುದ್ಧ ನಡೆಯುತ್ತಿರುವುದರಿಂದ ಎಲ್ಲ ದೇಶಗಳಲ್ಲಿ ತೈಲದರ ಹೆಚ್ಚಳವಾಗಿದೆ. ದೇಶದ ಕಷ್ಟಕಾಲದಲ್ಲಿ ನಾವು ಸಹಕಾರ ನೀಡಿದ್ದೇವೆ ಎಂದು ಚಿತ್ರನಟ ಕಮಲಹಾಸನ್ ಹೇಳಿದ್ದಾರೆ. ಡಿಎಂಕೆ ಪಕ್ಷಕ್ಕೆ ಬುದ್ಧಿ ಬಂದರೂ ಕಾಂಗ್ರೆಸ್‌ಗೆ ಇನ್ನೂ ಬುದ್ಧಿ ಬಂದಿಲ್ಲ. ಕಾಂಗ್ರೆಸ್ ಸರ್ಕಾರಕ್ಕೆ ಬರುತ್ತಿರುವ ತೆರಿಗೆಯ ಹಣದಲ್ಲಿ ಕಡಿತ ಮಾಡಲಿ ಎಂದು ಆಗ್ರಹಿಸಿದರು.

# ಕಾಕ್ರೋಚ್ ಜನತಾ ಪಾರ್ಟಿ ಮಾನವ ಸರಪಳಿ

## ಕಾರ್ಯಕ್ರಮಕ್ಕೆ ಅನುಮತಿ ಇಲ್ಲ: ಪೊಲೀಸ್ ಇಲಾಖೆ ಸ್ಪಷ್ಟನೆ

**ಬೆಂಗಳೂರು, ಮೇ 23:** ದೇಶಾದ್ಯಂತ ಸದ್ದು ಮಾಡುತ್ತಿರುವ ಕಾಕ್ರೋಚ್ ಜನತಾ ಪಾರ್ಟಿ ಟೌನ್‌ಹಾಲ್ ಬಳಿ ಭಾನುವಾರ (ಮೇ 24) ಆಯೋಜಿಸಲು ಇಚ್ಛಿಸಿದ್ದ ಶಾಂತಿಯುತ ಮಾನವ ಸರಪಳಿ ನಿರ್ಮಾಣ ಕಾರ್ಯಕ್ರಮಕ್ಕೆ ಹಿನ್ನಡೆಯಾಗಿದೆ.

ಟೌನ್‌ಹಾಲ್ ಬಳಿ ಇಂತಹ ಕಾರ್ಯಕ್ರಮಗಳ ಆಯೋಜನೆಗೆ ಅನುಮತಿಯಿಲ್ಲ ಎಂದು ಬೆಂಗಳೂರು ಪೊಲೀಸ್ ಇಲಾಖೆ ಸ್ಪಷ್ಟಪಡಿಸಿದೆ.

ಮಾನವ ಸರಪಳಿ ನಿರ್ಮಾಣದ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್‌ಗಳು ಹರಿದಾಡುತ್ತಿರುವುದನ್ನ ಗಮನಿಸಿರುವ ಬೆಂಗಳೂರು ಪೊಲೀಸರು, ಈ ರೀತಿ ಕಾರ್ಯಕ್ರಮ ಆಯೋಜಿಸುವ ಬಗ್ಗೆ ಈವರೆಗೂ ಮನವಿ ಬಂದಿಲ್ಲ. ಒಂದು ವೇಳೆ, ಮನವಿ ಬಂದರೂ ಟೌನ್ ಹಾಲ್ ಬಳಿ ಅನುಮತಿ ನೀಡುವುದಿಲ್ಲ ಎಂದು ದೃಢಪಡಿಸಿದೆ. ಕಾರ್ಯಕ್ರಮಕ್ಕೆ ಅನುಮತಿ ಕೋರಿ ಯಾವುದೇ ವ್ಯಕ್ತಿ, ಸಂಘಟನೆ ಅಥವಾ ಪಕ್ಷದಿಂದ ಮನವಿ ಬಂದಿಲ್ಲ. ಬೆಂಗಳೂರಿನಲ್ಲಿ ಫ್ರೀಡಂ ಪಾರ್ಕ್ ಹೊರತುಪಡಿಸಿ ಬೇರೆ ಯಾವುದೇ ಸ್ಥಳಗಳಲ್ಲಿ ಧರಣಿ, ಪ್ರತಿಭಟನಾ ಮೆರವಣಿಗೆಗಳನ್ನು ನಡೆಸಲು ಅವಕಾಶವಿಲ್ಲ ಎಂದು ಹೈಕೋರ್ಟ್ ಆದೇಶಿಸಿದೆ.

ಆದ್ದರಿಂದ ಟೌನ್ ಹಾಲ್ ಬಳಿ ಕಾರ್ಯಕ್ರಮ ಆಯೋಜನೆಗೆ ಅನುಮತಿ ನೀಡುವುದಿಲ್ಲ. ಸಾರ್ವಜನಿಕರು ಇಂತ ಪೋಸ್ಟ್‌ಗಳನ್ನು ಹಂಚಿಕೊಳ್ಳಬಾರದು ಎಂದು ಪೊಲೀಸ್ ಇಲಾಖೆ ತಿಳಿಸಿದೆ.



ಬೆಂಗಳೂರಿನ ಜೆಪಿ ಪಾರ್ಕ್ ಮತ್ತಿಕೆರೆಯಲ್ಲಿ ನಾಯಿಗಳ ಗುಂಪೊಂದು ನವಿಲುಗಳಿಗೆ ತೊಂದರೆ ನೀಡುತ್ತಿದೆ. ಬೀದಿನಾಯಿಗಳನ್ನು ನಿಯಂತ್ರಿಸುವಂತೆ ಉದ್ಯಾನವನದ ಅಧಿಕಾರಿಗಳನ್ನು ಸಾರ್ವಜನಿಕರು ವಿನಂತಿಸಿದ್ದಾರೆ.

# ಬಿಟ್‌ಕಾಯಿನ್ ಪ್ರಕರಣ: ಶ್ರೀಕಿ ಸೇರಿ ಮೂವರಿಗೆ 14 ದಿನ ನ್ಯಾಯಾಂಗ ಬಂಧನ



**ಬೆಂಗಳೂರು, ಮೇ 23:** ಬಿಟ್‌ಕಾಯಿನ್ ಹಗರಣದ ಸಂಬಂಧ ದಾಖಲಾಗಿರುವ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಆರೋಪಿಗಳಾಗಿರುವ ಶ್ರೀಕೃಷ್ಣ ರಮೇಶ್ ಅಲಿಯಾಸ್ ಶ್ರೀಕಿ, ಸುನೀಶ್ ಹೆಗಡೆ ಮತ್ತು ರಾಬಿನ್ ಖಂಡೇಲವಾಲ್ ಅವರನ್ನು 14 ದಿನ ಬೆಂಗಳೂರಿನ ವಿಶೇಷ ನ್ಯಾಯಾಲಯವು ಶುಕ್ರವಾರ ನ್ಯಾಯಾಂಗ ಬಂಧನಕ್ಕೆ ನೀಡಿದೆ.

ಬೆಂಗಳೂರಿನ ಪ್ರಧಾನ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎಂ ಚಂದ್ರಶೇಖರ್ ರೆಡ್ಡಿ ಅವರು ಆರೋಪಿಗಳನ್ನು ಜೂನ್ 5ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು. ಮೇ 9ರಂದು ಆರೋಪಿಗಳನ್ನು 10 ದಿನ ಇ.ಡಿ ಕಸ್ಟಡಿಗೆ ನೀಡಲಾಗಿತ್ತು.

ಆನಂತರ ಐದು ದಿನ ಮತ್ತೆ ಇ ಡಿ ಕಸ್ಟಡಿ ವಿಸ್ತರಿಸಲಾಗಿತ್ತು. ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಿಂದ ರೂ.11.5 ಕೋಟಿ ಕದ್ದಿರುವುದು, ಭಾರತದ ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ವಿದೇಶದಲ್ಲಿ ಕ್ರಿಪ್ಟೋ ಕರೆನ್ಸಿ ಬದಲಾವಣೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ಇ ಡಿಯು ತನಿಖೆ ನಡೆಸುತ್ತಿದೆ.

ಇತ್ತೀಚೆಗೆ ಶ್ರೀಕಿ ಸ್ನೇಹಿತ ಎನ್ನಲಾದ ಮೊಹಮ್ಮದ್ ಹ್ಯಾರಿಸ್ ನಲಪಾಡ್ ಮನೆಯಲ್ಲಿಯೂ ಇ.ಡಿ ಶೋಧ ನಡೆಸಿತ್ತು. ಯುನೋಕಾಯಿನ್ ಹ್ಯಾಕಿಂಗ್ ಮತ್ತು ಕದ್ದಿರುವ ಆರೋಪಕ್ಕೆ ಸಂಬಂಧಿಸಿದಂತೆ ಸಿಐಡಿಯು ಶ್ರೀಕಿ ಮತ್ತಿತರರ ವಿರುದ್ಧ ತನಿಖೆ ನಡೆಸಿತ್ತು.

ಗೇಮಿಂಗ್ ವೆಬ್‌ಸೈಟ್‌ಗಳ ಹ್ಯಾಕಿಂಗ್ ಮತ್ತು ಬಿಟ್ ಕಾಯಿನ್ ಬಳಸಿ ಡಾರ್ಕ್‌ನೆಟ್ ಮೂಲಕ ಮಾದಕದ್ರವ್ಯ ತರಿಸಿದ ಆರೋಪದ ಸಂಬಂಧ ಕಾಟನ್‌ಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

2023ರಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಹಿರಿಯ ಐಪಿಎಸ್ ಅಧಿಕಾರಿ ಮನೀಷ್ ಖರ್ಬೀಕರ್ ನೇತೃತ್ವದಲ್ಲಿ ಬಿಟ್‌ಕಾಯಿನ್ ಹಗರಣದ ತನಿಖೆಗೆ ಎಸ್‌ಐಟಿ ನೇಮಿಸಿತ್ತು.

ಆನಂತರ 2024ರ ಜುಲೈನಲ್ಲಿ ಶ್ರೀಕಿ ಮತ್ತು ಖಂಡೇಲವಾಲಾ ವಿರುದ್ಧ ದಾಖಲಾಗಿರುವ ಕೋಕಾ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿತ್ತು. ಈ ಇಬ್ಬರೂ 2020ರಲ್ಲಿ ಅಶೋಕ ನಗರ ಠಾಣೆಯಲ್ಲಿ ದಾಖಲಾಗಿರುವ ವಂಚನೆ ಪ್ರಕರಣದ ರದ್ದತಿ ಕೋರಿ ಸಲ್ಲಿಸಿರುವ ಅರ್ಜಿಯು ಹೈಕೋರ್ಟ್‌ನಲ್ಲಿ ವಿಚಾರಣೆಗೆ ಬಾಕಿ ಇದೆ.

# ಕ್ಷಿಪ್ರ ಸೇವೆಗೆ ಮೆಟ್ರೋಗಿಂತ ಆರ್‌ಆರ್‌ಟಿಎಸ್ ರೈಲು ಸಾರಿಗೆ ಉತ್ತಮ: ಸಂಸದ ಪಿ.ಸಿ. ಮೋಹನ್

**ಬೆಂಗಳೂರು, ಮೇ 23:** ಮಾದಾವರರಿಂದ ತುಮಕೂರುವರೆಗೆ 59 ಕಿ.ಮೀ.ಕಿಲೋ ಮೀಟರ್ ಉದ್ದದ ಮಾರ್ಗ ವಿಸ್ತರಣೆಗೆ ಆಕ್ಷೇಪ ವ್ಯಕ್ತಪಡಿಸಿರುವ ಸಂಸದ ಪಿ.ಸಿ. ಮೋಹನ್ ಅವರು, ನಿಧಾನಗತಿಯ ಮೆಟ್ರೋಗಿಂತ ನಮೋ ಭಾರತ್ ರೈಲು ಸಂಚಾರ ಮಾರ್ಗ ನಿರ್ಮಿಸುವುದು ಉತ್ತಮ ಎಂದಿದ್ದಾರೆ. ನಮ್ಮ ಮೆಟ್ರೋ ರೈಲು ತುಮಕೂರುವರೆಗೆ ವಿಸ್ತರಣೆ ಆದರೆ ಈ ಮಾರ್ಗದಲ್ಲಿ ಅನೇಕ ನಿಲ್ದಾಣಗಳು ಬರುತ್ತವೆ. ಪ್ರತಿ ನಿಲ್ದಾಣಕ್ಕೂ ಮೆಟ್ರೋ ನಿಲುಗಡೆ ನೀಡುತ್ತಾ ಸಾಗಿದರೆ ಪ್ರತಿ ಗಂಟೆಗೆ ಸುಮಾರು 60 ಕಿಲೋ ಮೀಟರ್ ಗಿಂತಲೂ ಕಡಿಮೆ ವೇಗದಲ್ಲಿ ಚಲಿಸಬೇಕಾಗುತ್ತದೆ. ಇಷ್ಟು ನಿಧಾನಗತಿಯ ಮೆಟ್ರೋ ಸಂಚಾರದಿಂದ ಬೆಂಗಳೂರು–ತುಮಕೂರು ತ್ವರಿತ ಸಂಪರ್ಕದ ಮೂಲ ಗುರಿ–ಉದ್ದೇಶ ಈಡೇರಿದಂತಾಗುವುದಿಲ್ಲ. ಹೀಗಾಗಿ ಎರಡು ನಗರಗಳಿಗೆ ಕ್ಷಿಪ್ರ ಸೇವೆ ನೀಡಲು ಮೆಟ್ರೋಗಿಂತ ಆರ್‌ಆರ್‌ಟಿಎಸ್ ರೈಲು ಸಾರಿಗೆ ಉತ್ತಮ ಎಂದು ಸಂಸದ ಪಿಸಿ ಮೋಹನ್ ಅವರು ಪ್ರತಿಪಾದಿಸಿದ್ದಾರೆ.

2025–26ರ ಆರ್ಥಿಕ ಸಮೀಕ್ಷೆಯ ಪ್ರಕಾರ ನಮೋ ಭಾರತ್ ರೈಲು ಬೆಂಗಳೂರು–ತುಮಕೂರು ಆರ್‌ಆರ್‌ಟಿಎಸ್ ಕಾರಿಡಾರ್‌ಗೆ ಈಗಾಗಲೇ ಪ್ರಸ್ತಾಪಿಸಲಾಗಿದೆ. 60–ಕಿಮೀ ಮೆಟ್ರೋ ಪ್ರಯಾಣ ದುಬಾರಿ ಆಗುತ್ತದೆ. ಏಕೆಂದರೆ ಸುಮಾರು ಒಂದೂವರೆ ಎರಡು ಕಿಮೀಗೆ ಒಂದರಂತೆ ಮೆಟ್ರೋ ನಿಲ್ದಾಣ ಸ್ಥಾಪಿಸಬೇಕಾಗುತ್ತದೆ. ಇದಕ್ಕೆ ಹೋಲಿಕೆ ಮಾಡಿದರೆ ನಮೋ ಭಾರತ್ ರಾಪಿಡ್ ರೈಲು ವೇಗವಾಗಿದೆ. ಜೊತೆಗೆ ಪ್ರಯಾಣ ಮೆಟ್ರೋದಷ್ಟು ದುಬಾರಿ ಆಗಿರುವುದಿಲ್ಲ ಎಂದು ವಿವರಿಸಿದ್ದಾರೆ.

# ಜಾನುವಾರುಗಳಿಗೂ ಆಧಾರ್ ಮಾದರಿ ಬಯೋಮೆಟ್ರಿಕ್ ಗುರುತಿನ ವ್ಯವಸ್ಥೆ

**ಬೆಂಗಳೂರು, ಮೇ 23:** ದೇಶದ ಇತಿಹಾಸದಲ್ಲೇ ಮೊದಲ ಬಾರಿಗೆ ಜಾನುವಾರುಗಳಿಗೂ ಆಧಾರ್ ಮಾದರಿಯ ಬಯೋಮೆಟ್ರಿಕ್ ಗುರುತಿನ ವ್ಯವಸ್ಥೆಯನ್ನು ಜಾರಿಗೆ ತರಲು ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಕರ್ನಾಟಕದಲ್ಲಿ ಪಶುಸಂಗೋಪನಾ ಕ್ಷೇತ್ರದಲ್ಲಿ ಮಹತ್ವದ ಡಿಜಿಟಲ್ ಕ್ರಾಂತಿಗೆ ರಾಜ್ಯ ಸರ್ಕಾರ ಮುಂದಾಗಿದ್ದು, ಶೀಘ್ರದಲ್ಲೇ ಜಾನುವಾರುಗಳಿಗೆ ಆಧಾರ್ ಮಾದರಿಯ ಡಿಜಿಟಲ್ ಗುರುತು ವ್ಯವಸ್ಥೆ ಜಾರಿಗೆ ಬರಲಿದೆ. ಈ ಹೊಸ ವ್ಯವಸ್ಥೆಯಲ್ಲಿ ಜಾನುವಾರುಗಳ ಮೂಗಿನ ಭಾಗದ ವೈಶಿಷ್ಟ್ಯಪೂರ್ಣ ಗುರುತುಗಳನ್ನು ಆಧರಿಸಿ ಬಯೋಮೆಟ್ರಿಕ್ ಗುರುತಿನ ಚೀಟಿ ಸೃಷ್ಟಿಸಲಾಗುತ್ತದೆ. ಭಾರತದಲ್ಲೇ ಮೊದಲ ಬಾರಿಗೆ ಜಾರಿಗೆ ಬರುತ್ತಿರುವ ಈ ಯೋಜನೆ, ಸಾಂಪ್ರದಾಯಿಕ ಕಿವಿ ಚುಚ್ಚುವ ಟ್ಯಾಗ್ ವ್ಯವಸ್ಥೆಗೆ ಪರ್ಯಾಯವಾಗಲಿದೆ. ಜಾನುವಾರುಗಳ ಮೂಗಿನ ಮೇಲಿನ ರೇಖೆಗಳು, ಮಡಚುಗಳು ಮತ್ತು ಗುರುತುಗಳು ಮಾನವರ ಬೆರಳಚ್ಚಿನಂತೆಯೇ ವಿಶಿಷ್ಟವಾಗಿರುವುದರಿಂದ, ಅದನ್ನು ಡಿಜಿಟಲ್ ಗುರುತಾಗಿ ಬಳಸಲಾಗುತ್ತಿದೆ.

ರಾಜ್ಯದ ಇ–ಆಡಳಿತ ಕೇಂದ್ರ ಮತ್ತು ಕೃತಕ ಬುದ್ಧಿಮತ್ತೆ ವಿಭಾಗದ ಸಹಯೋಗದಲ್ಲಿ ಈ ಯೋಜನೆ ರೂಪುಗೊಂಡಿದ್ದು, ಪ್ರಾಯೋಗಿಕವಾಗಿ ಜಾರಿಗೆ ತರಲು ಸಿದ್ಧತೆಗಳು ನಡೆಯುತ್ತಿವೆ.ಈ ಡಿಜಿಟಲ್ ವ್ಯವಸ್ಥೆಯ ಮೂಲಕ ಜಾನುವಾರುಗಳ ಲಸಿಕೆ ವಿವರ, ಆರೋಗ್ಯ ಸ್ಥಿತಿ, ವಿಮೆ ಮಾಹಿತಿ ಹಾಗೂ ಸಾವಿನ ಪರಿಹಾರ ಅರ್ಜಿಗಳನ್ನು ಸುಲಭವಾಗಿ ಟ್ರ್ಯಾಕ್ ಮಾಡಬಹುದಾಗಿದೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ



ಇಲಾಖೆ (ಇ–ಆಡಳಿತ) ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಅವರು ಮಾತನಾಡಿ, ಈ ಯೋಜನೆ ಜಾನುವಾರುಗಳ ನಿಖರ ಗುರುತನ್ನು ಖಚಿತಪಡಿಸುವುದರ ಜೊತೆಗೆ ಪಶುಸಂಗೋಪನಾ ಯೋಜನೆಗಳಲ್ಲಿ ನಡೆಯುವ ವಂಚನೆ ತಡೆಯಲು ಸಹಾಯಕವಾಗಲಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಪ್ರಸ್ತುತ ಒಂದು ಕೋಟಿಗೂ ಹೆಚ್ಚು ಜಾನುವಾರುಗಳಿದ್ದು, ಪ್ರತಿವರ್ಷ ಸುಮಾರು 10 ಲಕ್ಷದಷ್ಟು ಜಾನುವಾರುಗಳ ಸಂಖ್ಯೆ ಹೆಚ್ಚಳವಾಗುತ್ತಿದೆ. ಇಷ್ಟು ದೊಡ್ಡ ಸಂಖ್ಯೆಯ ಜಾನುವಾರುಗಳನ್ನು ನಿರ್ವಹಿಸಲು ಎಐ ಆಧಾರಿತ ಡಿಜಿಟಲ್ ವ್ಯವಸ್ಥೆ ಪರಿಣಾವಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಕೃತಕ ಬುದ್ಧಿಮತ್ತೆ ವಿಭಾಗದ ಯೋಜನಾ ನಿರ್ದೇಶಕ ಶ್ರೀವ್ಯಾಸ್ ಎಚ್‌ಎಂ ಮಾತನಾಡಿ, ಪ್ರಸ್ತುತ ಜಾನುವಾರುಗಳ ಗುರುತಿಗಾಗಿ ಕಿವಿ ಚುಚ್ಚುವ ವಿಧಾನ ಬಳಸಲಾಗುತ್ತಿದೆ. ಆದರೆ, ಎಐ ಆಧಾರಿತ ಮೂಗು ಗುರುತು ವ್ಯವಸ್ಥೆಯಿಂದ ಸುಲಭ ಹಾಗೂ ವೇಗವಾದ ಗುರುತು ಸಾಧ್ಯವಾಗಲಿದೆ ಎಂದು ಹೇಳಿದ್ದಾರೆ.ಈ ಯೋಜನೆಯ ಮತ್ತೊಂದು ವಿಶೇಷವೆಂದರೆ, ರೈತರಿಗೆ ಲಸಿಕೆ ದಿನಾಂಕಗಳ ಬಗ್ಗೆ ಎಸ್‌ಎಂಎಸ್ ಮೂಲಕ ಮುಂಚಿತ ಮಾಹಿತಿ ನೀಡಲಾಗುತ್ತದೆ. ಹೊಸದಾಗಿ ಹುಟ್ಟುವ ಕರುಗಳಿಗೂ ಡಿಜಿಟಲ್ ದಾಖಲೆ ಸೃಷ್ಟಿಸಬಹುದು.

ಮುಂದಿನ ದಿನಗಳಲ್ಲಿ ಜಾನುವಾರುಗಳ ಮೂಗಿನ ಫೋಟೋ ಸ್ಕ್ಯಾನ್ ಮೂಲಕ ಆರೋಗ್ಯ ಮೌಲ್ಯಮಾಪನ ಮಾಡಬಹುದು ಎಂದು ತಿಳಿಸಿದ್ದಾರೆ.ಈ ಎಐ ಆಧಾರಿತ ವ್ಯವಸ್ಥೆ ಪಶುಸಂಗೋಪನಾ ಇಲಾಖೆಯಲ್ಲಿ ಡಿಜಿಟಲ್ ಆಡಳಿತ ಬಲಪಡಿಸುವುದರ ಜೊತೆಗೆ ಜಾನುವಾರುಗಳ ಗುರುತು ಮತ್ತು ದಾಖಲೆ ನಿರ್ವಹಣೆಯಲ್ಲಿ ಹೆಚ್ಚಿನ ಪಾರದರ್ಶಕತೆ ಹಾಗೂ ಪರಿಣಾಮಕಾರಿತ್ವ ತರುವ ನಿರೀಕ್ಷೆಯಿದೆ.

# ಬ್ರಿಮ್ಸ್ ವೈದ್ಯನ ಮೇಲೆ ಹಲ್ಲೆ: 7 ಯುವಕರ ಬಂಧನ



**ಬೀದರ್, ಮೇ. 23:** ನಗರದ ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬ್ರಿಮ್ಸ್) ವೈದ್ಯನ ಮೇಲೆ ಕ್ಷುಲ್ಲಕ ಕಾರಣಕ್ಕೆ ಮಾರಣಾಂತಿಕ ಹಲ್ಲೆ ನಡೆಸಿದ 7 ಯುವಕರನ್ನು ಪೊಲೀಸರು ಬಂಧಿಸಿದ್ದಾರೆ.

ಬೀದರ್ ತಾಲ್ಲೂಕಿನ ತಾಜಲಾಪುರ ಗ್ರಾಮದ ಆದಿತ್ಯ ಕೃಷ್ಣಾಜಿ ಗುಮ್ಮಳ (21), ಚಾಂಬೋಳ ಗ್ರಾಮದ ವಿನೋದ್ ಬಸವರಾಜ ಕೋಳಿ (26), ಬೆನಕನಳ್ಳಿಯ ಗೋವಿಂದ್ ಕೇಶವರಾವ್ ಚವಾಣ್ (28), ಮಹಾದೇವ್ ಚತ್ರಭುಜ ಚವಾಣ್ (23) ಹಾಗೂ ಮಹಾರಾಷ್ಟ್ರದ ಲಾತೂರ್ ಜಿಲ್ಲೆಯ ಅಹಮ್ಮದಪುರದ ಅನಿಲ್ ದಿಲೀಪ್ ಕಚವೆ (25) ಹಾಗೂ ತಾಜಲಾಪುರದ ಬಾಲಾಜಿ ಮತ್ತು ಚಾಂಬೋಳ್ ಗ್ರಾಮದ ಪವನ್ ಬಂಧಿತರು.

ಬೀದರ್ ತಾಲ್ಲೂಕಿನ ತಾಜಲಾಪುರದ ಬಾಲಾಜಿ, ಚಾಂಬೋಳ್ ಗ್ರಾಮದ ಪವನ್ ಹಾಗೂ ಇನ್ನಿತರರ ಪತ್ತೆ ಕಾರ್ಯ ನಡೆದಿದೆ. ಹಲ್ಲೆಗೊಳಗಾದ ಬ್ರಿಮ್ಸ್ ವೈದ್ಯ ಡಾ. ತುಕಾರಾಮ ಮಚಿಂದರ್ ಎಂಬುವರು ಕೊಟ್ಟಿರುವ ದೂರು ಆಧರಿಸಿ ಬಂಧಿಸಲಾಗಿದೆ. ಈ ಸಂಬಂಧ ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಆಗಿದ್ದೇನು?:** ಬೀದರ್ ತಾಲ್ಲೂಕಿನ ಬೆನಕನಳ್ಳಿ ಗ್ರಾಮದ ವಿಜಯಸಿಂಗ್ ತುಕಾರಾಮ ಚವಾಣ್ ಬೈಕ್‌ನಿಂದ ಬಿದ್ದು ಗಾಯಗೊಂಡಿದ್ದರು. ಗುರುವಾರ ರಾತ್ರಿ 12.30ರಿಂದ 1 ಗಂಟೆ ಸುಮಾರಿಗೆ ಅವರನ್ನು ಬ್ರಿಮ್ಸ್‌ಗೆ ಕರೆತರಲಾಗಿತ್ತು. ಕರ್ತವ್ಯದಲ್ಲಿದ್ದ ಡಾ. ತುಕಾರಾಮ ಮಚಿಂದರ್ ಅವರು ಗಾಯಾಳುವಿಗೆ ಪ್ರಾಥಮಿಕ ಚಿಕಿತ್ಸೆ ನೀಡಿ, ಸ್ಕ್ಯಾನಿಂಗ್‌ಗೆ ಕಳಿಸಿದ್ದಾರೆ.

ಸ್ಕ್ಯಾನಿಂಗ್‌ನವರು ವೈದ್ಯರಿಂದ ಚೀಟಿ ಮೇಲೆ ಎಂಎಲ್‌ಸಿ ಎಂದು ಬರೆಸಿಕೊಳ್ಳುವಂತೆ ವಿಜಯ್‌ಸಿಂಗ್ ಅವರೊಂದಿಗಿದ್ದ ಅವರ ಗೆಳೆಯರಿಗೆ ಹೇಳಿದ್ದಾರೆ. ಅವರೆಲ್ಲ ವೈದ್ಯರ ಬಳಿಗೆ ಹೋಗಿ ಎಂಎಲ್‌ಸಿ ಏಕೆ ಬರೆದುಕೊಟ್ಟಿಲ್ಲ ಎಂದು ಪ್ರಶ್ನಿಸಿದ್ದಾರೆ. ಇದು ತೀರ ಸಣ್ಣ ಪ್ರಮಾಣದ ಗಾಯ ಇರುವುದರಿಂದ ಎಂಎಲ್‌ಸಿ ಅಗತ್ಯವಿಲ್ಲ ಎಂದು ಹೇಳಿದ್ದಾರೆ.

ಏನೇನೋ ಹೇಳಿ ನಮಗೆ ಸತಾಯಿಸುತ್ತಿದ್ದೀರಿ. ಚಿಕಿತ್ಸೆಗೆ ವಿಳಂಬ ಮಾಡುತ್ತಿದ್ದೀರಿ ಎಂದು ಹೇಳಿ ವೈದ್ಯ ತುಕಾರಾಮ ಅವರನ್ನು ವಿಜಯಸಿಂಗ್ ಸ್ನೇಹಿತರೆಲ್ಲ ಸೇರಿಕೊಂಡು ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಆಸ್ಪತ್ರೆಯ ಸಿಬ್ಬಂದಿ ಬಂದು ಜಗಳ ಬಿಡಿಸಿದ್ದಾರೆ. ಈ ವೇಳೆ ಭದ್ರತಾ ಸಿಬ್ಬಂದಿ ಇರಲಿಲ್ಲ. ಯುವಕರೆಲ್ಲ ಕುಡಿದ ಮತ್ತಿನಲ್ಲಿದ್ದರು ಎಂದು ಗೊತ್ತಾಗಿದೆ. ಗಂಭೀರವಾಗಿ ಗಾಯಗೊಂಡ ತುಕಾರಾಮ ಅವರಿಗೆ ಚಿಕಿತ್ಸೆ ನೀಡಲಾಯಿತು ಎಂದು ಆಸ್ಪತ್ರೆಯ ಮೂಲಗಳು ತಿಳಿಸಿವೆ.

**ಬ್ರಿಮ್ಸ್ ಮುಂದೆ ಪ್ರತಿಭಟನೆ:** ಆಸ್ಪತ್ರೆಯ ವೈದ್ಯ ಡಾ. ತುಕಾರಾಮ ಮಚಿಂದರ್ ಅವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ವಿಷಯ ತಿಳಿದು ಕಿರಿಯ ವೈದ್ಯರು ಬ್ರಿಮ್ಸ್ ಎದುರು ಪ್ರತಿಭಟನೆ ನಡೆಸಿದರು.

ಹಲ್ಲೆ ನಡೆಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಬ್ರಿಮ್ಸ್‌ನಲ್ಲಿ ಭದ್ರತೆ ಹೆಚ್ಚಿಸಬೇಕೆಂದು ಹಕ್ಕೊತ್ತಾಯ ಮಾಡಿದರು. ಸ್ಥಳಕ್ಕಾಗಮಿಸಿದ ಬ್ರಿಮ್ಸ್ ನಿರ್ದೇಶಕಿ ಡಾ. ಶಾಂತಲಾ ಕೌಜಲಗಿ, ವೈದ್ಯರ ಮನವಿ ಆಲಿಸಿದರು. ಬ್ರಿಮ್ಸ್‌ಗೆ ಹೆಚ್ಚಿನ ಭದ್ರತೆ ಕಲ್ಪಿಸಬೇಕೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಮನವಿ ಸಲ್ಲಿಸಲಾಗುವುದು. ನಮ್ಮ ವೈದ್ಯರ ಮೇಲಿನ ಹಲ್ಲೆ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಭವಿಷ್ಯದಲ್ಲಿ ಇಂಥ ಘಟನೆ ಮರುಕಳಿಸದಂತೆ ಅಗತ್ಯ ಕ್ರಮ ಜರುಗಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

> ಬ್ರಿಮ್ಸ್ ವೈದ್ಯವಿಜಯ್ ಸಿಂಗ್ ಎಂಬುವರು ಬೈಕ್‌ನಿಂದು ಬಿದ್ದದ್ದರಿಂದ ಸಣ್ಣ ಪ್ರಮಾಣದ ಗಾಯಗಳಾಗಿತ್ತು. ಅದಕ್ಕೆ ಅವರಿಗೆ ಪ್ರಾಥಮಿಕ ಚಿಕಿತ್ಸೆ ಕೊಟ್ಟು, ಎಂಎಲ್‌ಸಿಗೆ ಶಿಫಾರಸು ಮಾಡಿರಲಿಲ್ಲ. ಚಿಕಿತ್ಸೆಗಾಗಿ ಸ್ಕ್ಯಾನಿಂಗ್‌ಗೆ ಹೇಳಿದ್ದೆ. ಆದರೆ, ವಿಜಯಸಿಂಗ್ ಜೊತೆಗೆ ಬಂದಿದ್ದ ಏಳೆಂಟು ಜನ ಮಾತಿಗೆ ಮಾತು ಬೆಳೆಸಿ ನನ್ನ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿ, ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ. ಈ ಘಟನೆಯಿಂದ ಬಹಳ ನೊಂದುಕೊಂಡಿದ್ದೇನೆ.
>
> **–ಡಾ.ತುಕಾರಾಮ ಮಚಿಂದರ್.**

## ಜೇವರ್ಗಿ, ಸಿಂದಗಿ ಸೇರಿ ಆರು ತಾಲ್ಲೂಕುಗಳಲ್ಲಿ ನೀರಿನ ಸಂಕಟ

# ಜನ-ಜಾನುವಾರುಗಳಿಗೆ ನೀರಿನ ಸಂಕಷ್ಟ ಪರಿಹಾರಕ್ಕೆ ಡಿಸಿಎಂಗೆ ಮನವಿ




**ಕಲಬುರಗಿ, ಮೇ. 23:** ಜಿಲ್ಲೆಯ ಜೇವರ್ಗಿ ಹಾಗೂ ವಿಜಯಪುರ ಜಿಲ್ಲೆಯ ಸಿಂದಗಿ ಸೇರಿ 6 ತಾಲೂಕು ಗಳಲ್ಲಿ ಜನ-ಜಾನುವಾರು ನೀರಿನ ತೀವ್ರ ಸಂಕಷ್ಟ ಎದುರಿಸುವಂತಗಿದ್ದು, ನಾರಾಯಣಪುರ ಜಲಾಶಯದಿಂದ ಹೆಚ್ಚುವರಿ 1 ಟಿಎಂಸಿ ನೀರು ಬಿಡಿ ಎಂದು ಸರ್ಕಾರಕ್ಕೆ ಡಾ. ಅಜಯ್ ಸಿಂಗ್ ಮತ್ತು ಶಾಸಕ ಅಶೋಕ್ ಮನಗೂಳಿ ಅವರು ಜಂಟಿಯಗಿ ಸಿಸಿಎಂ ಡಿಕೆ ಶಿವಕುಮಾರ ಅವರಿಗೆ ಒತ್ತಾಯಿಸಿದ್ದರೆ.

ಜಿಲ್ಲೆಯ ಜೇವರ್ಗಿ ಹಾಗೂ ವಿಜಯಪುರ ಜಿಲ್ಲೆಯ ಸಿಂದಗಿ, ಇಂಡಿ, ಚಡಚಣ, ಆಲಮೇಲ್, ದೇವರ ಹಿಪ್ಪರಗಿ ಸೇರಿದಂತೆ 6 ತಾಲೂಕುಗಳಲ್ಲಿ ಜನ ಜಾನುವಾರು ಕುಡಿಯುವ ನೀರಿನ ಸಂಕಷ್ಟ ಎದುರಗಿದೆ.

ರೈತರು, ಸಾರ್ವಜನಿಕರು ಬಾರಿ ಸಂಕಷ್ಟಕ್ಕೆ ಸಿಲುಕಿದ್ದರಿಂದ ಹೆಚ್ಚುವರಿ ಇನ್ನೂ 1 ಟಿಎಂಸಿ ನೀರನ್ನು ಕಾಲುವೆಗೆ ಹರಿಸುವಂತೆ ಜೇವರ್ಗಿ ಶಾಸಕರು, ಕೇಕೆಆರ್‌ಡಿಬಿ ಅಧ್ಯಕ್ಷರಾದ ಡಾ. ಅಜಯ್ ಸಿಂಗ್ ಹಾಗೂ ಸಿಂದಗಿ ಶಾಸಕರಾದ ಅಶೋಕ್ ಮನಗೂಳಿ ಜಂಟಿಯಾಗಿ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಕೃಷ್ಣಾ ಯೋಜನೆಯ ರಾಂಪೂರ ನೀರಾವರಿ ಮುಖ್ಯ ಇಂಜಿನಿಯರ್ ಕಚೇರಿಗೆ ಹೋಗಿ ಅಲ್ಲಿ ಸಬೆ ನಡೆಸಿದ ನಂರ ಸುದ್ದಿಗಾರರೊಂದಿಗೆ ಮಾತನಾಡಿರುವ ಶಾಸಕದ್ವಯರು, ಕಲಬುರಗಿ ಹಾಗೂ ವಿಜಯಪೂರ ಜಿಲ್ಲೆಯಡಿ ಬರುವ 6 ತಾಲ್ಲೂಕುಗಳಲ್ಲಿ ಎದುರಾಗಿರುವ ತೀವ್ರ ಜಲಕ್ಷಾಮವನ್ನು ನೀಗಿಸಲು ತಕ್ಷಣವೇ ಇನ್ನೂ ಒಂದು ಟಿಎಂಸಿ ಹೆಚ್ಚುವರಿ ನೀರನ್ನು ಬಿಡುಗಡೆ ಮಾಡಬೇಕೆಂದು ಅಲ್ಲಿಂದಲೇ ದೂರವಾಣಿ ಕರೆ ಮಾಡಿ ಜಲ ಸಂಪನ್ಮೂಲ ಸಟಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಗಮನ ಸೆಳೆದಿದ್ದಾರೆ.

# ಕೆಪಿಎಸ್ ಶಿಕ್ಷಣದ ಕುರಿತು ಸಾಹಿತಿ ದೇವನೂರು ಮಹದೇವ ಸಲಹೆ ಪಡೆದ ಸಚಿವ ಮಧು ಬಂಗಾರಪ್ಪ



**ಮೈಸೂರು, ಮೇ 23:** ಸಚಿವ ಮಧು ಬಂಗಾರಪ್ಪ ಅವರು ಹಿರಿಯ ಸಾಹಿತಿ ದೇವನೂರು ಮಹಾದೇವ ಅವರನ್ನು ಮೈಸೂರಿನಲ್ಲಿಂದು ಭೇಟಿಯಾಗಿ ಕೆಪಿಎಸ್ (ಕರ್ನಾಟಕ ಪಬ್ಲಿಕ್ ಶಾಲೆ) ಶಿಕ್ಷಣದ ಕುರಿತು ಕೆಲವು ಸಲಹೆಗಳನ್ನು ಪಡೆದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಒಬ್ಬ ಶಿಕ್ಷಣ ಸಚಿವನಾಗಿ ಹಿರಿಯ ಸಾಹಿತಿಗಳ ಸಲಹೆ ಬೇಕಿತ್ತು. ಅದಕ್ಕಾಗಿ ಅವರನ್ನು ಭೇಟಿ ಮಾಡಿ ಚರ್ಚೆ ಮಾಡಿದೆ. ನನ್ನ ಮೇಲೆ ಸಾಕಷ್ಟು ಟೀಕೆ ಟಿಪ್ಪಣಿಗಳು ಬಂದಿದ್ದವು. ಈ ಸಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಒಳ್ಳೆಯ ಫಲಿತಾಂಶ ಬಂತು. ಇದಕ್ಕೆ ಕಾರಣ ನಾವು ಬದಲಾವಣೆ ತಂದಿದ್ದು. ಶಿಕ್ಷಣ ವ್ಯವಸ್ಥೆ ಬಹಳಷ್ಟು ಹಾಳಾಗಿತ್ತು. ವೆಬ್ ಕಾಸ್ಟ್ ಮಾಡಿ ವ್ಯವಸ್ಥೆಯನ್ನು ಸರಿಪಡಿಸಿದ್ದೇವೆ. ಅಲ್ಲದೇ, ಶಿಕ್ಷಣ ಇಲಾಖೆಯಲ್ಲಿ ಸಾಕಷ್ಟು ಸುಧಾರಣೆ ತಂದಿದ್ದೇವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣ ಸುಧಾರಿಸಿದೆ. ಸಮಾನತೆ ಹಾಗೂ ಒಳ್ಳೆಯ ಶಿಕ್ಷಣ ಕೊಡೋದು ನಮ್ಮ ಕರ್ತವ್ಯ. ಅದನ್ನು ನಾವು ಮಾಡುತ್ತೇವೆ. ಕಲೆ, ನಾಟಕ, ಸಾಹಿತ್ಯದ ಬಗ್ಗೆಯೂ ಮಕ್ಕಳಿಗೆ ತಿಳಿಸುವ ಕುರಿತು ದೇವನೂರು ಮಹದೇವ ಅವರು ಸಲಹೆ ನೀಡಿದ್ದಾರೆ. ಕೆಪಿಎಸ್ ಶಿಕ್ಷಣ ನೀಡುವ ಕುರಿತು ಸಹ ಸಲಹೆ ನೀಡಿದರು ಎಂದು ತಿಳಿಸಿದರು.

ಇದನ್ನು ಕಡ್ಡಾಯ ಮಾಡೋಕೆ ಆಗಲ್ಲ. ಯಾವ ಶಾಲೆ ಸೇರಬೇಕು ಎಂಬುದು ಮಕ್ಕಳ ಹಾಗೂ ಪೋಷಕರ ಹಕ್ಕು. ಇದನ್ನು ಸುಪ್ರೀಂ ಕೋರ್ಟ್ ಸ್ಪಷ್ಟವಾಗಿ ಹೇಳಿದೆ. ಸರ್ಕಾರಿ ನೌಕರರು ಮಾತ್ರ ಅಲ್ಲ, ಎಲ್ಲರೂ ಕೂಡ ಮಕ್ಕಳನ್ನು ಕನ್ನಡ ಶಾಲೆಗೆ ಸೇರಿಸಿ ಅಂತ ನಾನು ಕೂಡ ಮನವಿ ಮಾಡುತ್ತೇನೆ. ಇದು ಎಲ್ಲರ ಬದ್ಧತೆ ಎಂದು ಮಾಧ್ಯಮದವರು ಕೇಳಿದ ಕೆಲವು ಪ್ರಶ್ನೆಗಳಿಗೆ ಸಚಿವ ಮಧು ಬಂಗಾರಪ್ಪ ಹೀಗೆ ಉತ್ತರಿಸಿದರು. ಹಿಜಾಬ್ ಅಂತ ಬಿಜೆಪಿಯವರು ಕರೀತಾರೆ. ನಾವು ಸಮಾನತೆ ಅಂತೀವಿ. ಬಿಜೆಪಿಯವರು ಮೊದಲು ಕೇಂದ್ರೀಯ ವಿದ್ಯಾಲಯಗಳಲ್ಲಿ ಕೇಸರಿ ಶಾಲು ಹಾಕಿ ಬರಲಿ. ಬಳಿಕ ಅವರಿಗೆ ನಾನು ಉತ್ತರ ಕೊಡುವೆ ಎಂದು ಬಿಜೆಪಿ ನಾಯಕರ ವಿರುದ್ಧ ಸಚಿವರು ಕಿಡಿಕಾರಿದರು.

ನನ್ನ ಶೈಕ್ಷಣಿಕ ಹಿನ್ನೆಲೆ ನೋಡಿ ಗೇಲಿ ಮಾಡೋರು ಮೊದಲು ಮೋದಿ ಡಿಗ್ರಿ ಸರ್ಟಿಫಿಕೆಟ್ ಕೊಟ್ಟು ಮಾತನಾಡಲಿ. ಇದು ಕೆಟ್ಟಬುದ್ಧಿ ಇರೋರು ಪ್ರಶ್ನೆ ಮಾಡ್ತಾರೆ. ನಾನು ಪಿಯುಸಿ ಮುಗಿಸಿದ್ದೇನೆ. ಬ್ಯುಸಿನೆಸ್ ಮಾಡುವ ಸಲುವಾಗಿ ಮುಂದೆ ಓದಲಿಲ್ಲ ಅಷ್ಟೇ. ನಿಮಗಿಂತ (ಮಾಧ್ಯಮದವರು) ಕನ್ನಡ ಚೆನ್ನಾಗಿ ಮಾತಾಡ್ತೀನಿ. ಆದರೆ, ಬರೆಯೋದಕ್ಕೆ ಸ್ವಲ್ಪ ಕಷ್ಟ ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.

# ಸುದ್ದಿಯಾದ ಬೆನ್ನಲ್ಲೇ ಕಾಳಜಿ ಕೇಂದ್ರ ಪುನರಾರಂಭಿಸಿದ ಗದಗ್ ಜಿಲ್ಲಾಡಳಿತ

**ಗದಗ, ಮೇ 23:** ನಿನ್ನೆ ಮಧ್ಯಾಹ್ನ ಸಂತ್ರಸ್ತರನ್ನು ಹೊರಹಾಕಿ ದಿಢೀರನೆ ಬಂದ್ ಮಾಡಲಾಗಿದ್ದ ಕಾಳಜಿ ಕೇಂದ್ರವನ್ನು ವರದಿ ಪ್ರಸಾರವಾದ ಬೆನ್ನಲ್ಲೇ ಎಚ್ಚೆತ್ತ ಜಿಲ್ಲಾಡಳಿತವು ಶನಿವಾರ ಮಧ್ಯಾಹ್ನವೇ ಪುನರಾರಂಭಿಸಿದೆ.

ಮಾಧ್ಯಮಗಳ ವರದಿ ಬೆನ್ನಲ್ಲೇ ಎಚ್ಚೆತ್ತುಕೊಂಡ ಗದಗ ಉಪ ವಿಭಾಗಾಧಿಕಾರಿ ಗಂಗಪ್ಪ ಹಾಗೂ ನಗರಸಭೆ ಆಯುಕ್ತ ರಾಜಾರಾಮ್ ಪವಾರ್ ಅವರು ಗಂಗಿಮಡಿಯ ಸರ್ಕಾರಿ ಶಾಲೆಗೆ ಭೇಟಿ ನೀಡಿದರು.

ಈ ವೇಳೆ ಅಧಿಕಾರಿಗಳನ್ನು ಮುತ್ತಿಗೆ ಹಾಕಿದ ಸಂತ್ರಸ್ತರು, ತಮಗಾದ ಅನ್ಯಾಯವನ್ನು ನೆನೆದು ಕಣ್ಣೀರು ಹಾಕಿ ಗೋಳು ತೋಡಿಕೊಂಡರು. ನಿನ್ನೆ ಕಾಳಜಿ ಕೇಂದ್ರ ಬಂದ್ ಮಾಡಿರುವ ಕುರಿತು ನಮಗೆ ಯಾವುದೇ ಪೂರ್ವ ಮಾಹಿತಿ ಇರಲಿಲ್ಲ ಎಂದು ಸ್ಪಷ್ಟನೆ ನೀಡಿದ ಎಸಿ ಗಂಗಪ್ಪ ಅವರು, ಈ ಬೇಜವಾಬ್ದಾರಿತನಕ್ಕೆ ಕಾರಣರಾದ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸದ್ಯ ಸಂತ್ರಸ್ತರಿಗೆ ಸರ್ಕಾರಿ ಶಾಲೆಯಲ್ಲೇ ವಾಸ್ತವ್ಯ ಹಾಗೂ ಊಟದ ಅಧಿಕೃತ ವ್ಯವಸ್ಥೆಯನ್ನು ಮಾಡಲಾಗಿದೆ.

ವಿಷಯ ತಿಳಿಯುತ್ತಿದ್ದಂತೆ ಬಿಜೆಪಿ ಎಂಎಲ್‌ಸಿ ಎಸ್.ವಿ. ಸಂಕನೂರ್ ಅವರು ನಿಯೋಗದೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಜಿಲ್ಲಾಡಳಿತದ ಧೋರಣೆಯ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ಅವರು ತಕ್ಷಣ ಮಧ್ಯಪ್ರವೇಶಿಸಿ ಈ ಜನರಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿದರು.

# ಆರ್.ವೈ.ಎಂ.ಇ.ಸಿನಲ್ಲಿ ರಕ್ತದಾನ ಶಿಬಿರ




**ಬಳ್ಳಾರಿ, ಮೇ.23:** ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದಲ್ಲಿ (ಆರ್ವೈಎಂಇಸಿ ) ರಕ್ತದಾನ ಶಿಬಿರ ಜರುಗಿತು. ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಕಾರ್ಯಕ್ರಮವನ್ನು ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕ, ಜಿಲ್ಲಾ ಆರೋಗ್ಯ ಸಮಾಜಕಲ್ಯಾಣ ಘಟಕ, ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರ, ಎನ್ ಎಸ್ ಎಸ್ & ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ (ಐ ಆರ್ ಸಿ ಎಸ್) ಘಟಕಗಳು ಇವರು ಆಯೋಜಿಸಿದ್ದರು.

ಡಾ.ಟಿ.ಗಂಗಾಧರಗೌಡ, ನಿರ್ದೇಶಕರು, ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ಬಳ್ಳಾರಿ, ವೀ.ವಿ ಸಂಘದ ಪದಾಧಿಕಾರಿಗಳು ಅಧ್ಯಕ್ಷತೆ ವಹಿಸಿದ್ದರು, ಸುಮಾರು 101 ವಿದ್ಯಾರ್ಥಿಗಳು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಿದರು.

# ಕಲಬುರಗಿ-ಬೆಂಗಳೂರು ವಿಮಾನ ಸಂಚಾರ ಪುನಾರಂಭಕ್ಕೆ ಡಾ.ಸದಾನಂದ ಪೆರ್ಲ ಅಭಿನಂದನೆ




**ಕಲಬುರಗಿ, ಮೇ.23–** ಕಲಬುರಗಿಯಿಂದ ಬೆಂಗಳೂರಿಗೆ ಜೂನ್ 10 ರಿಂದ ವಿಮಾನ ಸಂಚಾರ ಪುನರಾರಂಭಗೊಳ್ಳುವುದು ಹರ್ಷದ ಸಂಗತಿ ಹಾಗೂ ಉತ್ತರ ಕರ್ನಾಟಕ ಮತ್ತು ಕರಾವಳಿ ಕರ್ನಾಟಕವನ್ನು ಸಂಪರ್ಕ ಕಲ್ಪಿಸುವ ಕಲಬುರಗಿ – ಮಂಗಳೂರು ಮಧ್ಯೆ ವಿಮಾನ ಸೇವೆ ಕೂಡಲೇ ಆರಂಭಿಸಲು ಜನಪ್ರತಿನಿಧಿಗಳು ಪ್ರಯತ್ನಿಸಬೇಕೆಂದು ದಕ್ಷಿಣ ಕನ್ನಡ ಸಂಘದ ಮಾಜಿ ಅಧ್ಯಕ್ಷರಾದ ಡಾ.ಸದಾನಂದ ಪೆರ್ಲ ಒತ್ತಾಯಿಸಿದ್ದಾರೆ. ಕಲಬುರಗಿಯಿಂದ ಬೆಂಗಳೂರಿಗೆ ವಿಮಾನ ಸಂಚಾರ ಪುನರಾರಂಭ ಗೊಂಡಿರುವುದರಿಂದ ರಾಜಧಾನಿಗೆ ಸಂಚರಿಸಲು ಕಲ್ಯಾಣ ಕರ್ನಾಟಕ ಭಾಗದ ಹಾಗೂ ಸುತ್ತು ಮುತ್ತಲು ಜಿಲ್ಲೆಗಳ ಜನತೆಗೆ ವರದಾನ ವಾಗಲಿದೆ. ಇದರಿಂದ ಕೈಗಾರಿಕೆ, ಪ್ರವಾಸೋದ್ಯಮ, ಶಿಕ್ಷಣ, ಕೃಷಿ ಸೇರಿದಂತೆ ಹಲವು ಕ್ಷೇತ್ರಗಳ ಪ್ರಗತಿಗೆ ಪೂರಕವಾಗಲಿದೆ. ಆದರೆ ಉತ್ತರ ಮತ್ತು ದಕ್ಷಿಣದ ಕರಾವಳಿ ಕರ್ನಾಟಕ ವನ್ನು ಜೋಡಣೆ ಮಾಡಲು ವಿಮಾನ ಸಂಪರ್ಕ ವ್ಯವಸ್ಥೆ ಅತ್ಯಂತ ಅಗತ್ಯವಾಗಿದ್ದು ಬೀದರ್, ಲಾತೂರ್ ಕಡೆಗಳಿಂದ ಶಿಕ್ಷಣ, ಪ್ರವಾಸೋದ್ಯಮ ಹಾಗೂ ದೇವಾಲಯಗಳ ಪ್ರವಾಸಿಗರ ಸಂಖ್ಯೆ ಅತ್ಯಧಿಕವಿದೆ . ಆದರೆ ಪ್ರಸ್ತುತ ಬಸ್ ಗಳಲ್ಲಿ ಕನಿಷ್ಠ 17 ಗಂಟೆಗಳ ಪ್ರವಾಸ ಮಾಡಿ ಕರಾವಳಿಯ ಉಡುಪಿ ಅಥವಾ ಮಂಗಳೂರನ್ನು ತಲುಪ ಬೇಕಾಗಿದೆ. ಖಾಸಗಿ ವಾಹನದಲ್ಲಿ ಕನಿಷ್ಠ 12 ಗಂಟೆಗಳ ಪ್ರಯಾಣ ಸಮಯ ತಗಲುತ್ತದೆ. ಆದುದರಿಂದ ಕಲಬುರಗಿ ಮತ್ತು ಬೀದರ್ ನಿಂದ ಮಂಗಳೂರಿಗೆ ವಯಾ ಬೆಂಗಳೂರು ಮಾರ್ಗವಾಗಿ ಸಂಚರಿಸುವ ವಿಮಾನ ಸೇವೆ ಅತ್ಯಂತ ಅಗತ್ಯವಾಗಿದೆ ಎಂದು ಡಾ.ಪೆರ್ಲ ತಿಳಿಸಿದ್ದಾರೆ.

ಪ್ರಸ್ತುತ ಬೀದರ್ ಕಲಬುರಗಿಯಿಂದ ಒಟ್ಟು ನಾಲ್ಕೈದು ಖಾಸಗಿ ಬಸ್ಸುಗಳು ವಿಜಯಪುರ ಹುಬ್ಬಳ್ಳಿ, ಅಂಕೋಲಾ, ಉಡುಪಿ, ಭಟ್ಕಳ ದಾರಿಯಾಗಿ ಮಂಗಳೂರಿಗೆ ಸಂಚರಿಸುತ್ತಿದೆ. ಯಾದಗಿರಿ ಶಹಾಪುರದಿಂದಲೂ ಖಾಸಗಿ ಬಸ್ ಸಂಚಾರವಿದೆ. ಕರಾವಳಿ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಸಂಸದರು ಜಂಟಿಯಾಗಿ ಪ್ರಯತ್ನಿಸಿ ಈ ಮಾರ್ಗದಲ್ಲಿ ವಿಮಾನ ಸೇವೆ ಆರಂಭಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಕೇಂದ್ರ ಸರ್ಕಾರವು ಉಡಾನ್ ಯೋಜನೆಯಡಿಯಲ್ಲಿ ಕಲಬುರಗಿ ಸೇರ್ಪಡೆ ಮಾಡಿ ಸಾಮಾನ್ಯ ಜನರು ಕೂಡಾ ವಿಮಾನದಲ್ಲಿ ಸಂಚರಿಸಲು ಅವಕಾಶ ಮಾಡಿಕೊಡಬೇಕು ಎಂದು ಡಾ. ಸದಾನಂದ ಪೆರ್ಲ ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

## ಮಾಜಿ ಸಚಿವ ಕೃಷ್ಣ ಜೆ. ಪಾಲೇಮಾರ್ ನಿರ್ಮಾಣದ ಸಭಾಭವನಗಳ ಉದ್ಘಾಟನೆ

# ಬಡತನ ನಿರ್ಮೂಲನೆಗೆ ಶಿಕ್ಷಣ ಪ್ರಮುಖ ಸಾಧನ: ಆಂಧ್ರ ರಾಜ್ಯಪಾಲ ನ್ಯಾ.ಎಸ್.ಅಬ್ದುಲ್ ನಜೀರ್ ಅಭಿಮತ



**ಮಂಗಳೂರು, ಮೇ. 23:** ಮಾಜಿ ಸಚಿವ ಕೃಷ್ಣ ಜೆ. ಪಾಲೆಮಾರ್ ನೇತೃತ್ವದಲ್ಲಿ ನಿರ್ಮಾಣವಾದ ಸಭಾಂಗಣ ಸಮುದಾಯದ ಶಿಕ್ಷಣ, ಸಂಸ್ಕೃತಿ, ಸಾಮಾಜಿಕ, ಸೌಹಾರ್ದ ಚಟುವಟಿಕೆಗಳಿಗೆ ಬಳಕೆಯಾಗಲಿ ಎಂದು ಆಂಧ್ರಪ್ರದೇಶದ ರಾಜ್ಯಪಾಲ ನ್ಯಾ. ಎಸ್. ಅಬ್ದುಲ್ ನಜೀರ್ ಶುಭ ಹಾರೈಸಿದ್ದಾರೆ.

ಕರಾವಳಿ ಇತಿಹಾಸದಲ್ಲೇ ಪ್ರಪ್ರಥಮ ಬಾರಿಗೆ ಹೆಸರಾಂತ ರಿಯಲ್ ಎಸ್ಟೇಟ್ ಸಂಸ್ಥೆ 'ಲ್ಯಾಂಡ್ ಲಿಂಕ್ಸ್' ಮಂಗಳೂರಿನ ನಾಲ್ಕು ಪ್ರಮುಖ ಸ್ಥಳಗಳಲ್ಲಿ ನಿರ್ಮಿಸಿರುವ ವಿನೂತನ ನಾಲ್ಕು ಅತ್ಯಾಧುನಿಕ ಸಭಾಭವನಗಳನ್ನು ಮಂಗಳೂರಿನ ಮೇರಿಹಿಲ್‌ನಲ್ಲಿರುವ ಪಾಲೆಮಾರ್ ಕನ್ವೆನ್ಷನ್ ಸೆಂಟರ್‌ನಲ್ಲಿ ಶನಿವಾರ ಏಕಕಾಲಕ್ಕೆ ಉದ್ಘಾಟಿಸಿ ಮಾತನಾಡಿದ ನ್ಯಾ. ಎಸ್.ಅಬ್ದುಲ್ ನಝೀರ್, ಶಿಕ್ಷಣ ಮಾನವ ಸಂಪನ್ಮೂಲವನ್ನು ಅಭಿವೃದ್ಧಿಪಡಿಸಲು ಪೂರಕ. ಶಿಕ್ಷಣ ಬಡತನ ನಿರ್ಮೂಲನೆ ಮಾಡಲು ಪ್ರಮುಖ ಸಾಧನ. ಕೃಷ್ಣ ಪಾಲೆಮಾರ್ ಈ ನಿಟ್ಟಿನಲ್ಲಿ ಮಹತ್ವದ ಕೊಡುಗೆ ನೀಡಿದವರು. ಹಲವಾರು ಸಮಾಜಮುಖಿ ಕೆಲಸಗಳ ಮೂಲಕ ಜನರಿಗೆ ಶಿಕ್ಷಣ, ಉದ್ಯೋಗ ನೀಡಿದ್ದಾರೆ. ವಿಕಾಸ್ ಎಜುಕೇಶನ್ ಟ್ರಸ್ಟ್ ಮೂಲಕ ಶೈಕ್ಷಣಿಕ ಕ್ಷೇತ್ರದಲ್ಲಿ ಸೇವೆ ನೀಡುತ್ತಿರುವುದು ಮಹತ್ವದ ಕಾರ್ಯ ಎಂದು ಶ್ಲಾಘಿಸಿದರು.

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಮಾತನಾಡಿ, ಏಕ ವ್ಯಕ್ತಿ ತನ್ನ ಪರಿಶ್ರಮದಿಂದ ಸಂಪಾದಿಸಿದ ಸಂಪತ್ತನ್ನು ಸಮಾಜಮುಖಿಯಾಗಿ ವಿನಿಯೋಗಿಸುವ ಕೃಷ್ಣ ಜೆ. ಪಾಲೆಮಾರ್ ಚಿಂತನೆಗೆ ಅಭಿನಂದನೆಗಳು. ಎಲ್ಲರನ್ನು ಜೊತೆಯಾಗಿಸಿಕೊಂಡು ರಾಜ್ಯಕ್ಕೆ, ರಾಷ್ಟ್ರಕ್ಕೆ ಶಕ್ತಿ ತುಂಬುವ ಕೆಲಸ ಅವರಿಂದ ಆಗಿದೆ. ಹಲವಾರು ಸಮಾಜಮುಖಿ ಚಿಂತನೆಯಿಂದ ನಾಲ್ಕು ಸಭಾಭವನಗಳ ಮೂಲಕ ಸಮಾಜಕ್ಕೆ ಕೊಡುಗೆ ನೀಡಿದ ಪಾಲೆಮಾರ್ ಕೋಟಿಗೊಬ್ಬ ಎನ್ನಬಹುದು ಎಂದು ಶ್ಲಾಘಿಸಿದರು.

ಮುಂದಿನ ಒಂದು ತಿಂಗಳೊಳಗೆ ವಂದೇ ಭಾರತ್ ರೈಲು ಬೆಂಗಳೂರು–ಮಂಗಳೂರು ನಡುವೆ ಓಡಲಿದೆ. ಕೊಂಕಣ ರೈಲು ದೇಶದ ಗ್ರೋತ್ ಇಂಜಿನ್ ಆಗಿದೆ. ದೇಶದ ವ್ಯವಸ್ಥೆಯಲ್ಲಿ ರೈಲ್ವೆ ವಿಭಾಗ ದೇಶದ ಗ್ರೋತ್ ಇಂಜಿನ್ ಆಗಿ ಕಾರ್ಯನಿರ್ವಹಿಸುವಲ್ಲಿ ಪ್ರಧಾನ ಮಂತ್ರಿಯವರ ಪಾತ್ರ ಹಿರಿದಾಗಿದೆ. ಪ್ರಧಾನಿಯವರು ಮಂಗಳೂರನ್ನು ಕಡೆಗಣಿಸುವುದಿಲ್ಲ ಎಂದು ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಮುಖ್ಯ ಅತಿಥಿಯಾಗಿ ಭಾಗ ವಹಿಸಿದ ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಮಾತನಾಡಿ, ಪಾಲೆಮಾರ್ ಸಭಾಂಗಣಗಳು ಕರಾವಳಿಯ ಸೌಂದರ್ಯಕ್ಕೆ ಕಿರೀಟದಂತೆ ನಿರ್ಮಾಣವಾಗಿವೆ. ಯಾವುದೇ ಪ್ರದೇಶದ ಅಭಿವೃದ್ಧಿಗೆ ಅಲ್ಲಿನ ಆರ್ಥಿಕ ವ್ಯವಹಾರ ಮುಖ್ಯ. ಈ ನಿಟ್ಟಿನಲ್ಲಿ ಪಾಲೆಮಾರ್ ಸಭಾಂಗಣ ಸಮಾಜಕ್ಕೆ ಮಹತ್ವದ ಕೊಡುಗೆ ನೀಡಲಿದೆ ಎಂದರು. ಎಲ್ಲರ ಜೊತೆ ಗೌರವಯುತ ಸೌಹಾರ್ದ ಗುಣ–ನಡತೆಯಿಂದ ಸ್ನೇಹಪರ ವ್ಯಕ್ತಿತ್ವದ ಪಾಲೆಮಾರ್ ಉತ್ತಮ ಭಾರತೀಯನ ಪ್ರತೀಕವಾಗಿದ್ದಾರೆ.

ನಮ್ಮ ಸಂಸ್ಕೃತಿ, ಪರಂಪರೆಯ ಮಾದರಿಯಾಗಿ ಅವರ ಬದುಕು, ವ್ಯಕ್ತಿತ್ವ, ಶ್ರಮ, ಜೀವನ ಹಾಗೂ ಅವರು ಬೆಳೆದು ಬಂದ ರೀತಿ ಇತರರಿಗೆ ಮಾದರಿ. ಅವರ ಆತ್ಮಕಥೆ ಶೀಘ್ರವಾಗಿ ಹೊರಬರಲಿ ಎಂದರು. ಸಮಾಜಮುಖಿ ಕೆಲಸಗಳಿಗೆ ಸಭಾಂಗಣ ಬಳಕೆಯಾಗಲಿ ಎಂದು ಸ್ಪೀಕರ್ ಹಾರೈಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮಾಜಿ ಸಚಿವ ಹಾಗೂ ವಿಕಾಸ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಕೃಷ್ಣ ಜೆ. ಪಾಲೆಮಾರ್ ಮಾತನಾಡಿ, ವಿಕಾಸ ಎಜುಕೇಶನ್ ಟ್ರಸ್ಟ್ ಶಿಕ್ಷಣಕ್ಕೆ ಹೆಚ್ಚು ಪ್ರೋತ್ಸಾಹ ನೀಡುತ್ತದೆ. ಈ ಸಭಾಂಗಣದಲ್ಲಿ ಬಂದ ಆದಾಯದ ಹೆಚ್ಚಿನ ಪಾಲು ಶಿಕ್ಷಣಕ್ಕಾಗಿ ಬಳಕೆಯಾಗಲಿದೆ ಎಂದರು. ಕಡಿಮೆ ದರದಲ್ಲಿ ಜನಸಾಮಾನ್ಯರಿಗೂ ಅನುಕೂಲ ವಾಗುವಂತೆ ಇದನ್ನು ನಿರ್ಮಿಸಲಾಗಿದೆ. ವಾಹನ ಪಾರ್ಕಿಂಗ್ ಸಮಸ್ಯೆಯನ್ನು ನಿವಾರಿಸುವ ನಿಟ್ಟಿನಲ್ಲಿ ನಾಲ್ಕೂ ಸಭಾಭವನಗಳಲ್ಲಿ ಅತ್ಯಂತ ವಿಶಾಲವಾದ, ವ್ಯವಸ್ಥಿತವಾದ ಪಾರ್ಕಿಂಗ್ ಸ್ಥಳಾವಕಾಶವನ್ನು ಕಲ್ಪಿಸಲಾಗಿದೆ.

ಬಡವ–ಬಲ್ಲಿದನೆಂಬ ಭೇದವಿಲ್ಲ. ಪ್ರತಿಯೊಬ್ಬರ ಆರ್ಥಿಕ ಶಕ್ತಿಗೆ ತಕ್ಕಂತೆ ಇಲ್ಲಿ ಸಭಾಂಗಣಗಳು ಲಭ್ಯವಿವೆ. ಎಲ್ಲ ವರ್ಗದ ಜನರಿಗೂ ಕೈಗೆಟಕುವ ದರದ ಸಭಾಂಗಣಗಳನ್ನು ಇಲ್ಲಿ ರೂಪಿಸಲಾಗಿದೆ ಎಂದು ಹೇಳಿದರು.

# ಗುಣಮಟ್ಟದ ಬೀಜ–ವೈಜ್ಞಾನಿಕ ಬಿತ್ತನೆ ಕುರಿತು ಮೇ 26ರಂದು ಕೃಷಿಮೇಳ




**ಬಳ್ಳಾರಿ ಮೇ 23.** ರೈತರಿಗೆ ಗುಣಮಟ್ಟದ ಬೀಜಗಳ ಆಯ್ಕೆ, ವೈಜ್ಞಾನಿಕ ಬಿತ್ತನೆ ವಿಧಾನಗಳು ಹಾಗೂ ಆಧುನಿಕ ಕೃಷಿ ತಂತ್ರಜ್ಞಾನಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಬಿಡಿಸಿಸಿಐ) ನೇತೃತ್ವದಲ್ಲಿ ಮೇ 26ರಂದು ಎಪಿಎಂಸಿ ಆವರಣದಲ್ಲಿ ?ಕೃಷಿ ಮೇಳ? ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕೃಷಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ನೀರಾವರಿ ಮತ್ತು ಪಶು ಸಂಗೋಪನಾ ಇಲಾಖೆಗಳ ಸಹಯೋಗದಲ್ಲಿ ಈ ಮೇಳ ನಡೆಯಲಿದೆ. ಜೊತೆಗೆ ಬಳ್ಳಾರಿ ಜಿಲ್ಲಾ ಕಾಟನ್ ಅಸೋಸಿಯೇಷನ್, ಕರ್ನಾಟಕ ರಾಜ್ಯ ಕೃಷಿ ಪರಿಕರಗಳ ಮಾರಾಟಗಾರರ ಸಂಘದ ಜಿಲ್ಲಾ ಘಟಕ, ಎಪಿಎಂಸಿ ವರ್ತಕರ ಸಂಘ, ದಲ್ಲಾಲಿ ವರ್ತಕರ ಸಂಘ ಮತ್ತು ವಿವಿಧ ರೈತ ಸಮೂಹಗಳು ಸಹಕಾರ ನೀಡಿವೆ.

ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಬಿಡಿಸಿಸಿಐ ಅಧ್ಯಕ್ಷ ಅವ್ವಾರು ಮಂಜುನಾಥ್ ಹಾಗೂ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು, ?ಮೇಳವು ಬೆಳಿಗ್ಗೆ 9 ಗಂಟೆಗೆ ಆರಂಭವಾಗಲಿದ್ದು, ರೈತರಿಗೆ ಕೃಷಿ ಕ್ಷೇತ್ರದ ತಜ್ಞರಿಂದ ನೇರ ಮಾಹಿತಿ ದೊರೆಯಲಿದೆ. ಹವಾಮಾನ ಬದಲಾವಣೆ, ಮಣ್ಣಿನ ಗುಣಮಟ್ಟ, ಉತ್ತಮ ಉತ್ಪಾದನೆಗಾಗಿ ಅಗತ್ಯವಿರುವ ಬಿತ್ತನೆ ವಿಧಾನಗಳು, ಗುಣಮಟ್ಟದ ಬೀಜ ಬಳಕೆ ಹಾಗೂ ಬೆಳೆ ನಿರ್ವಹಣೆ ಕುರಿತು ವಿಶೇಷ ಉಪನ್ಯಾಸಗಳನ್ನು ಏರ್ಪಡಿಸಲಾಗಿದೆ ರಾಜ್ಯದ ಕೃಷಿ ಸಚಿವ ಎನ್. ಚಲುವರಾಯ ಸ್ವಾಮಿ ಮೇಳವನ್ನು ಉದ್ಘಾಟಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಹಾಗೂ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ. ಹನುಮಂತಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

**ಕೃಷಿ ವಿಜ್ಞಾನಿಗಳಿಂದ ವಿಶೇಷ ಉಪನ್ಯಾಸ**

ಮೇಳದಲ್ಲಿ ಕೃಷಿ ವಿಜ್ಞಾನಿಗಳಾದ ಡಾ. ಎ.ಜಿ. ಶ್ರೀನಿವಾಸ್, ಡಾ. ರವಿಶಂಕರ್ ಜಿ., ಡಾ. ಪಾಲಯ್ಯ ಹಾಗೂ ಡಾ. ಎಂ. ಭೀಮಣ್ಣ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ, ಹತ್ತಿ ಸೇರಿದಂತೆ ವಿವಿಧ ಬೆಳೆಗಳ ವೈಜ್ಞಾನಿಕ ಬಿತ್ತನೆ ವಿಧಾನ, ಕೀಟ ಮತ್ತು ರೋಗ ನಿಯಂತ್ರಣ, ಮಣ್ಣಿನ ಆರೋಗ್ಯ ಕಾಪಾಡುವ ಕ್ರಮಗಳು, ನೀರಿನ ಸಮರ್ಪಕ ಬಳಕೆ ಹಾಗೂ ಉತ್ಪಾದನಾ ವೆಚ್ಚ ಕಡಿಮೆ ಮಾಡುವ ತಂತ್ರಜ್ಞಾನಗಳ ಕುರಿತು ಮಾಹಿತಿ ನೀಡಲಿದ್ದಾರೆ.

ರೈತರಿಗೆ ನೇರ ಸಂವಾದದ ಅವಕಾಶವೂ ಕಲ್ಪಿಸಲಾಗಿದ್ದು, ಕೃಷಿಗೆ ಸಂಬಂಧಿಸಿದ ವಿವಿಧ ಇಲಾಖೆಗಳ ತಜ್ಞರು ರೈತರ ಪ್ರಶ್ನೆಗಳಿಗೆ ಉತ್ತರಿಸಲಿದ್ದಾರೆ. ಕೃಷಿ ಪರಿಕರಗಳು, ಗುಣಮಟ್ಟದ ಬೀಜಗಳು, ರಸಗೊಬ್ಬರಗಳು ಮತ್ತು ಆಧುನಿಕ ಕೃಷಿ ಸಾಧನಗಳ ಪ್ರದರ್ಶನವೂ ಮೇಳದಲ್ಲಿ ಇರಲಿದೆ ಎಂದು ಆಯೋಜಕರು ತಿಳಿಸಿದ್ದಾರೆ.

**ಜನಪ್ರತಿನಿಧಿಗಳು, ಅಧಿಕಾರಿಗಳ ಭಾಗಿ**

ಕಾರ್ಯಕ್ರಮದಲ್ಲಿ ಮೇಯರ್ ಪಿ. ಗಾದೆಪ್ಪ, ಶಾಸಕರಾದ ಬಿ. ನಾಗೇಂದ್ರ, ನಾರಾ ಭರತರೆಡ್ಡಿ, ಜೆ.ಎನ್. ಗಣೇಶ್, ಬಿ.ಎಂ. ನಾಗರಾಜ್, ಈ. ಅನ್ನಪೂರ್ಣ ತುಕಾರಾಂ, ವೈ.ಎಂ. ಸತೀಶ್, ಸಂಸದರಾದ ಈ. ತುಕಾರಾಂ ಹಾಗೂ ಡಾ. ಸಯ್ಯದ್ ನಾಸೀರ್ ಹುಸೇನ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಬುಡಾ ಅಧ್ಯಕ್ಷ ಜೆ. ಎಸ್. ಆಂಜನೇಯಲು, ಲಿಡ್ಕರ್ ಅಧ್ಯಕ್ಷ ಮುಂಡ್ರಗಿ ನಾಗರಾಜ್, ಎಪಿಎಂಸಿ ಅಧ್ಯಕ್ಷ ಕಟ್ಟೇಮನಿ ನಾಗೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ. ಚಿದಾನಂದಪ್ಪ, ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಸಹ ಭಾಗವಹಿಸಲಿದ್ದಾರೆ.

**ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ**

ಮೇಳದ ಮೂಲಕ ರೈತರಿಗೆ ಕೃಷಿ ಕ್ಷೇತ್ರದ ಇತ್ತೀಚಿನ ತಂತ್ರಜ್ಞಾನಗಳು ಹಾಗೂ ವೈಜ್ಞಾನಿಕ ಮಾಹಿತಿ ತಲುಪಿಸುವ ಪ್ರಯತ್ನ ಮಾಡಲಾಗುತ್ತಿದೆ. ಜಿಲ್ಲೆಯ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಆಯೋಜಕರು ಮನವಿ ಮಾಡಿದ್ದಾರೆ.

# ಉದಯೋನ್ಮುಖ ನೃತ್ಯ ಕಲಾವಿದೆ ವೈಷ್ಣವಿ ಜಯಶಂಕರ್ ರಂಗಪ್ರವೇಶ



'ಕಲಾಕ್ಷೇತ್ರ ಬಾನಿ'ಯಲ್ಲಿ ನೃತ್ಯಸಾಧನೆ ಮಾಡಿರುವ ಬದ್ಧತೆಯ ನೃತ್ಯ ಕಲಾವಿದೆ ಮತ್ತು ಉತ್ತಮ ನೃತ್ಯಗುರುವಾಗಿ ಹೆಸರು ಮಾಡಿರುವ ವಿದುಷಿ ಹನಸೋಗೆ ಪರಿಮಳಾ 'ಕಲಾವಾಹಿನಿ' ಡ್ಯಾನ್ಸ್ ಅಕಾಡೆಮಿಯ ಕಲಾತ್ಮಕ ನಿರ್ದೇಶಕಿ.

ಅವರ ನುರಿತ ಗರಡಿಯಲ್ಲಿ ರೂಪುಗೊಂಡ ಕಲಾಶಿಲ್ಪ ಕು. ವೈಷ್ಣವಿ ಬಾಲಪ್ರತಿಭೆ . ಪ್ರಸ್ತುತ ಲಂಡನ್ ನಿವಾಸಿಯಾಗಿರುವ ಶ್ರೀ ಜಯಶಂಕರ್ ಮತ್ತು ಮೃದುಲಾ ಅವರ ಹತ್ತುವರ್ಷದ ಪುತ್ರಿಯಾದ ವೈಷ್ಣವಿ ಕಳೆದ ಆರುವರ್ಷಗಳಿಂದ ಬಹು ಆಸಕ್ತಿ– ಪರಿಶ್ರಮಗಳಿಂದ ಭರತನಾಟ್ಯ ನೃತ್ಯಾಭ್ಯಾಸ ಮಾಡುತ್ತಿದ್ದು, ಈಗಾಗಲೇ ಯುನೈಟೆಡ್ ಕಿಂಗ್ಡಮ್ ನಲ್ಲಿನ ಅನೇಕ ದೇವಾಲಯಗಳಲ್ಲಿ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಹಾಗೂ ಭಾರತದಲ್ಲೂ ಕೂಡ ವಿವಿಧ ವೇದಿಕೆಗಳಲ್ಲಿ ತನ್ನ ಏಕವ್ಯಕ್ತಿ ನೃತ್ಯಪ್ರದರ್ಶನ ನೀಡಿ ಮೆಚ್ಚುಗೆ ಗಳಿಸಿದ್ದಾಳೆ.

ಬಹುಮುಖ ಪ್ರತಿಭೆಯಾದ ವೈಷ್ಣವೀ ಕರ್ನಾಟಕ ಶಾಸ್ತ್ರೀಯ ಸಂಗೀತವನ್ನೂ ಕಲಿಯುತ್ತಿದ್ದು, ಓದಿನಲ್ಲಿ ಉತ್ತಮ ವಿದ್ಯಾರ್ಥಿನಿಯೆನಿಸಿಕೊಂಡಿದ್ದು ವಾಲಿಬಾಲ್, ಕ್ರಿಕೆಟ್ ಮತ್ತು ಬ್ಯಾಡ್ಮಿಂಟನ್ ಕ್ರೀಡೆಗಳಲ್ಲಿ ಮುಂದಿರುವ ವಿಶೇಷತೆ ಅವಳದು.

ಟ್ವೈಕಾಂಡೋನಲ್ಲಿ ಬ್ಲಾಕ್ ಬೆಲ್ಟ್ ಪಡೆದ ಜಾಣೆ. ಈಗಾಗಲೇ ಯುಕೆಯ ಐ ಎಸ್ ಟಿ ಡಿ ಸಂಸ್ಥೆಯ 7 ನೆಯ ಹಂತದ ನೃತ್ಯಪರೀಕ್ಷೆಯಲ್ಲಿ ಡಿಸ್ಟಿಂಕ್ಷನ್ ಪಡೆದು ವಿಜೇತಳಾಗಿರುವ ವೈಷ್ಣವಿ, ಇದೀಗ ತಾನು ಕಲಿತ ಶಾಸ್ತ್ರೀಯ ನೃತ್ಯದ ವಿವಿಧ ಆಯಾಮಗಳ ಪ್ರದರ್ಶನಕ್ಕಾಗಿ ಇದೇ ತಿಂಗಳ 30 ರಂದು ಶನಿವಾರ ಸಂಜೆ 4.30ಕ್ಕೆ ಬೆಂಗಳೂರಿನ ಎ.ಡಿ.ಎ. ರಂಗಮಂದಿರದಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶವನ್ನು ಮಾಡುತ್ತಿದ್ದಾಳೆ.

ಈ ಬಾಲಕಲಾವಿದೆಯ ಮನಮೋಹಕ ನೃತ್ಯವಲ್ಲರಿಯನ್ನು ವೀಕ್ಷಿಸಲು ಎಲ್ಲ ಕಲಾರಸಿಕರಿಗೂ ಆದರದ ಸ್ವಾಗತ.

# ಇರಾನ್ ವಿರುದ್ಧ ಮಿಲಿಟರಿ ದಾಳಿಗೆ ಅಮೆರಿಕ ಸಿದ್ಧತೆ



**ವಾಷಿಂಗ್ಟನ್, ಮೇ 23:** ಇರಾನ್ ಜೊತೆಗಿನ ಯುದ್ಧದ ಮುಂದಿನ ಹಾದಿಯ ಕುರಿತು ಚರ್ಚಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಉನ್ನತ ರಾಷ್ಟ್ರೀಯ ಭದ್ರತಾ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ರಾಜತಾಂತ್ರಿಕ ಪ್ರಯತ್ನಗಳು ಮುಂದುವರಿದಿದ್ದರೂ ಸಹ, ಟ್ರಂಪ್ ಆಡಳಿತವು ಇರಾನ್ ವಿರುದ್ಧ ಹೊಸ ಸುತ್ತಿನ ಮಿಲಿಟರಿ ದಾಳಿಗೆ ಸಿದ್ಧತೆ ನಡೆಸುತ್ತಿದೆ ಎಂದು ಅಮೆರಿಕದ ಕೆಲವು ಮಾಧ್ಯಮಗಳ ವರದಿಗಳು ಸೂಚಿಸುತ್ತವೆ. ಆದಾಗ್ಯೂ, ಶುಕ್ರವಾರ ಮಧ್ಯಾಹ್ನದವರೆಗೆ ಮುಷ್ಕರಗಳ ಕುರಿತು ಯಾವುದೇ ಅಂತಿಮ ನಿರ್ಧಾರಕ್ಕೆ ಬರಲಾಗಿಲ್ಲ. ಮಾತುಕತೆಗಳ ವೇಗದ ಬಗ್ಗೆ ಹತಾಶೆ ವ್ಯಕ್ತಪಡಿಸಿರುವ ಟ್ರಂಪ್, ಸಂಭವನೀಯ ಮಿಲಿಟರಿ ಕ್ರಮಕ್ಕಾಗಿ ಆಯ್ಕೆಗಳನ್ನು ಪ್ರಸ್ತುತಪಡಿಸಲಾಗಿದೆ. ಗಲ್ಫ್ ರಾಷ್ಟ್ರಗಳ ಕೋರಿಕೆಯ ಮೇರೆಗೆ ಮುಷ್ಕರಗಳಿಗೆ ಆದೇಶ ನೀಡುವ ಮೊದಲು ಒಂದು ಗಂಟೆ ದೂರದಲ್ಲಿದ್ದಾಗ ಅವರು ಈ ವಾರದ ಆರಂಭದಲ್ಲಿ ಹೇಳಿದ್ದರು ಎಂದು ವರದಿಯಾಗಿದೆ.

ಉದ್ವಿಗ್ನತೆಯನ್ನು ಕಡಿಮೆ ಮಾಡಲು ಸಹಾಯ ಮಾಡುವ ಪ್ರಯತ್ನದಲ್ಲಿ ಕತಾರ್ ಮತ್ತು ಪಾಕಿಸ್ತಾನದ ನಿಯೋಗಗಳು ಟೆಹ್ರಾನ್‌ಗೆ ಪ್ರಯಾಣ ಬೆಳೆಸಿವೆ ಎಂದು ಇರಾನ್ನ ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಘೈ ಶುಕ್ರವಾರ ಹೇಳಿದ್ದಾರೆ ಎಂದು ಇರಾನ್‌ನ ರಾಜ್ಯ ಸುದ್ದಿ ಸಂಸ್ಥೆ IRNA ವರದಿ ಮಾಡಿದೆ. ಇರಾನ್ ಮತ್ತು ಅಮೆರಿಕದ ನಿಲುವುಗಳ ನಡುವೆ ಇನ್ನೂ "ಬಹಳ ಆಳವಾದ" ವ್ಯತ್ಯಾಸಗಳಿವೆ ಎಂದು ಬಘೈ ಹೇಳಿದರು, ಒಪ್ಪಂದವನ್ನು ತಲುಪಲು "ಹೆಚ್ಚಿನ ಸಮಯ ಮತ್ತು ಹೆಚ್ಚಿನ ಮಾತುಕತೆಗಳು" ಬೇಕಾಗುತ್ತವೆ ಎಂದು ಹೇಳಿದರು. ನಡೆಯುತ್ತಿರುವ ರಾಜತಾಂತ್ರಿಕ ಪ್ರಯತ್ನಗಳು ಮತ್ತು ಟೆಹ್ರಾನ್ನಲ್ಲಿ ಹಿರಿಯ ಪಾಕಿಸ್ತಾನಿ ಅಧಿಕಾರಿಗಳ ಉಪಸ್ಥಿತಿಯು "ತಿರುವು" ಯನ್ನು ಸೂಚಿಸಬಹುದು ಎಂದು ಅವರು ಗಮನಿಸಿದರು, ಆದರೆ ಅಮೆರಿಕದೊಂದಿಗೆ ಅಂತಿಮ ಪ್ರಗತಿಯು ದೂರದಲ್ಲಿದೆ. ಇರಾನ್ನಿಂದ ಸಕಾರಾತ್ಮಕ ಸಂಕೇತಗಳ ಕೊರತೆಯ ನಡುವೆಯೂ ಮತ್ತೊಂದು ಸುತ್ತಿನ ಮಿಲಿಟರಿ ದಾಳಿಯ ಕುರಿತು ಯಾವುದೇ ನಿರ್ಧಾರವನ್ನು ಪರಿಗಣಿಸಲಾಗುತ್ತಿದೆ ಎಂದು ಟ್ರಂಪ್ ಹೇಳಿದ್ದಾರೆ.

ಆದಾಗ್ಯೂ, ಪ್ರಮುಖ ಅಂಶಗಳು ಉಳಿದಿವೆ. ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಿರಬಾರದು ಮತ್ತು ಪುಷ್ಟೀಕರಿಸಿದ ಯುರೇನಿಯಂ ಅನ್ನು ಉಳಿಸಿಕೊಳ್ಳಬಾರದು ಎಂದು ಟ್ರಂಪ್ ಪದೇ ಪದೇ ಹೇಳಿದ್ದಾರೆ. ಎಲ್ಲಾ ಆಯ್ಕೆಗಳು ಮೇಜಿನ ಮೇಲಿದ್ದರೂ, ರಾಜತಾಂತ್ರಿಕತೆಗೆ ಕೆಲಸ ಮಾಡಲು ಸಮಯ ನೀಡಲಾಗಿದೆ ಎಂದು ಅವರು ಸಮರ್ಥಿಸಿಕೊಂಡಿದ್ದಾರೆ. ಶುಕ್ರವಾರದ ರಾಷ್ಟ್ರೀಯ ಭದ್ರತಾ ಸಭೆಯಲ್ಲಿ ಹಾಜರಿದ್ದ ಹಿರಿಯ ಅಧಿಕಾರಿಗಳಲ್ಲಿ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಮತ್ತು ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಸೇರಿದ್ದಾರೆ. ಜಂಟಿ ಮುಖ್ಯಸ್ಥರ ಅಧ್ಯಕ್ಷ ಜನರಲ್ ಡಾನ್ ಕೇನ್, ಅನ್ನಾಪೊಲೀಸ್‌ನಲ್ಲಿ ಅಮೆರಿಕ ನೌಕಾ ಅಕಾಡೆಮಿ ಆರಂಭದ ಭಾಷಣಗಳ ಸಂದರ್ಭದಲ್ಲಿ ಶ್ವೇತಭವನದ ಸಭೆಯನ್ನು ಉಲ್ಲೇಖಿಸಿದರು.

# 16 ವರ್ಷಗಳಲ್ಲಿ 3ನೇ ಬಾರಿಗೆ ಎನ್‌ಪಿಟಿ ಮಾತುಕತೆ ವಿಫಲ: ಇರಾನ್ ಆರೋಪ



**ನ್ಯೂಯಾರ್ಕ್, ಮೇ 23:** ಪರಮಾಣು ಶಸ್ತ್ರಾಸ್ತ್ರಗಳ ಪ್ರಸರಣ ನಿಷೇಧ ಒಪ್ಪಂದದ 2026 ರ ಪರಿಶೀಲನಾ ಸಮ್ಮೇಳನವು ಶುಕ್ರವಾರ ನ್ಯೂಯಾರ್ಕ್‌ನಲ್ಲಿ ಅಂತಿಮ ಪ್ರಮುಖ ದಾಖಲೆಯನ್ನು ಅಂಗೀಕರಿಸದೆ ಮುಕ್ತಾಯಗೊಂಡಿತು, ಇದು ಸದಸ್ಯ ರಾಷ್ಟ್ರಗಳ ನಡುವೆ ಒಮ್ಮತವನ್ನು ಸಾಧಿಸುವಲ್ಲಿ "ಕಳೆದ 16 ವರ್ಷಗಳಲ್ಲಿ ಮೂರನೇ ವೈಫಲ್ಯ" ಎಂದು ಗುರುತಿಸಿತು. ಮಾತುಕತೆಗಳ ಕುಸಿತದ ನಂತರ ಇರಾನ್ ಅಮೆರಿಕ ಮತ್ತು ಅದರ ಮಿತ್ರರಾಷ್ಟ್ರಗಳನ್ನು ತೀವ್ರವಾಗಿ ಟೀಕಿಸಿತು, "ವಾಸ್ತವವನ್ನು ವಿರೂಪಗೊಳಿಸಲು NPT ಪರಿಶೀಲನಾ ಸಮ್ಮೇಳನವನ್ನು ದುರುಪಯೋಗ ಪಡಿಸಿಕೊಳ್ಳಲು" ಮತ್ತು "ಪರಮಾಣು ನಿಶ್ಯಸ್ತ್ರೀಕರಣದ ಕಡೆಗೆ ತಮ್ಮದೇ ಆದ ನಿರಂತರ ವೈಫಲ್ಯ" ಮತ್ತು "ಮಧ್ಯಪ್ರಾಚ್ಯದ ಏಕೈಕ ಪರಮಾಣು–ಸಶಸ್ತ್ರ ಆಡಳಿತ – ಇಸ್ರೇಲ್‌ನಿಂದ ಉಂಟಾಗುವ ಅಪಾಯ" ದಿಂದ ಜಾಗತಿಕ ಗಮನವನ್ನು ಬೇರೆಡೆಗೆ ತಿರುಗಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿತು. ಪರಿಶೀಲನಾ ಸಮ್ಮೇಳನದ 11 ನೇ ಅಧಿವೇಶನದಲ್ಲಿ ಇರಾನ್ನ ಸಮಾರೋಪ ಹೇಳಿಕೆಯನ್ನು ನೀಡುತ್ತಾ,

ಇರಾನ್‌ನ ವಿದೇಶಾಂಗ ಸಚಿವಾಲಯದ ಅಂತರರಾಷ್ಟ್ರೀಯ ಶಾಂತಿ ಮತ್ತು ಭದ್ರತೆಯ ಮಹಾನಿರ್ದೇಶಕ ಮೊಹಮ್ಮದ್ ಹಸ್ಸಾನಿ–ನೆಜಾದ್ ಪಿರ್ಕೌಹಿ, ಒಪ್ಪಂದಕ್ಕೆ ಬರಲು ಅಸಮರ್ಥತೆಯು "ನಿಜವಾದ ರಾಜಕೀಯ ಇಚ್ಛಾಶಕ್ತಿಯ ಅನುಪಸ್ಥಿತಿಯನ್ನು" ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. "ವಾಸ್ತವವಾಗಿ, ನಿಜವಾದ ರಾಜಕೀಯ ಇಚ್ಛಾಶಕ್ತಿಯ ಅನುಪಸ್ಥಿತಿಯಲ್ಲಿ, ಯಾರೂ ಪವಾಡವನ್ನು ಮಾಡಲು ಸಾಧ್ಯವಿಲ್ಲ" ಎಂದು ಪಿರ್ಕೌಹಿ ನ್ಯೂಯಾರ್ಕ್‌ಮ ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಪ್ರತಿನಿಧಿಗಳಿಗೆ ತಿಳಿಸಿದರು.

ಸಮ್ಮೇಳನ ಪ್ರಕ್ರಿಯೆಯ ಪುನರಾವರ್ತಿತ ವೈಫಲ್ಯಗಳಿಗೆ "ರಾಜ್ಯಗಳ ನಿರ್ದಿಷ್ಟ ಗುಂಪು" ಕಾರಣ ಎಂದು ಇರಾನಿನ ರಾಜತಾಂತ್ರಿಕರು ಆರೋಪಿಸಿದರು, ಅವರನ್ನು "ಒಪ್ಪಂದದ ಪ್ರಾಥಮಿಕ ಮತ್ತು ಅತ್ಯಂತ ಮಹತ್ವದ ಉಲ್ಲಂಘನೆಗಾರರು ಮತ್ತು ಹಿಂದಿನ ಪರಿಶೀಲನಾ ಸಮ್ಮೇಳನಗಳ ನಿರ್ಧಾರಗಳು" ಎಂದು ವಿವರಿಸಿದರು.

ಇರಾನ್ NATO ಮತ್ತು AUKUS ಪರಮಾಣು ಹಂಚಿಕೆ ವ್ಯವಸ್ಥೆಗಳನ್ನು ಖಂಡಿಸಿತು, "ಪರಮಾಣು ಛತ್ರಿ ರಾಷ್ಟ್ರಗಳು ತಮ್ಮ ಪರಮಾಣು ಶಸ್ತ್ರಾಗಾರಗಳನ್ನು ತೊಡೆದುಹಾಕಲು ನಿರಾಕರಿಸುವುದು ಒಪ್ಪಂದದ ಅಡಿಯಲ್ಲಿ ಅವರ ಬಾಧ್ಯತೆಗಳ ಸ್ಪಷ್ಟ ಉಲ್ಲಂಘನೆಯಾಗಿದೆ" ಎಂದು ವಾದಿಸಿತು. ತಮ್ಮ ಭಾಷಣದ ಅತ್ಯಂತ ಬಲವಾದ ಕ್ಷಣಗಳಲ್ಲಿ ಒಂದಾದ ಪಿರ್ಕೌಹಿ, ಅಮೆರಿಕ ಮತ್ತು ಇಸ್ರೇಲ್ ಪರ್ಷಿಯನ್ ಕೊಲ್ಲಿ ಪ್ರದೇಶದಲ್ಲಿ "ಆಯ್ಕೆಯ ಅಪರಾಧ ಯುದ್ಧ" ನೀತಿಗಳನ್ನು ನಡೆಸಿವೆ ಮತ್ತು ದಾಳಿಗಳು "ಇರಾನಿನ ಶಾಂತಿಯುತ ಸುರಕ್ಷಿತ ಪರಮಾಣು ಸೌಲಭ್ಯಗಳನ್ನು" ಗುರಿಯಾಗಿರಿಸಿಕೊಂಡಿವೆ ಎಂದು ಆರೋಪಿಸಿದರು.

ಪಾಶ್ಚಿಮಾತ್ಯ ದೇಶಗಳು "NPT ಪರಿಶೀಲನಾ ಸಮ್ಮೇಳನವನ್ನು ದುರುಪಯೋಗಪಡಿಸಿಕೊಳ್ಳುವ ಮೂಲಕ ಅಂತಹ ಕಾನೂನುಬಾಹಿರ ದಾಳಿಗಳನ್ನು ಕಾನೂನುಬದ್ಧಗೊಳಿಸಲು" ಪ್ರಯತ್ನಿಸುತ್ತಿವೆ ಎಂದು ಅವರು ಮತ್ತಷ್ಟು ಆರೋಪಿಸಿದರು.

# ಹಾರ್ಮುಜ್ ಜಲಸಂಧಿ ತೆರೆಯಲು ನಿರಾಕರಿಸಿದರೆ ಅಮೆರಿಕದ ಪರ್ಯಾಯ ತಂತ್ರ ಸಿದ್ಧ: ರೂಬಿಯೊ


**ವಾಷಿಂಗ್ಟನ್, ಮೇ 23:** ನ್ಯಾಟೋ ಮಿತ್ರರಾಷ್ಟ್ರಗಳೊಂದಿಗೆ ಸಭೆ ನಡೆಸಿದ ನಂತರ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ, ಇರಾನ್ ಹಾರ್ಮುಜ್ ಜಲಸಂಧಿ ಕಾರಿಡಾರ್ ಅನ್ನು ಮತ್ತೆ ತೆರೆಯಲು ನಿರಾಕರಿಸಿದರೆ ವಾಷಿಂಗ್ಟನ್ ಮತ್ತು ಅದರ ಪಾಲುದಾರರು "ಪ್ಲಾನ್ ಬಿ" ಅನ್ನು ಸಿದ್ಧಪಡಿಸಬೇಕು ಎಂದು ಹೇಳಿದರು, ಇದು ಪ್ರಸ್ತುತ ನಡೆಯುತ್ತಿರುವ ಇರಾನ್ ಯುದ್ಧದ ಪ್ರಮುಖ ಸಮಸ್ಯೆಗಳಲ್ಲಿ ಒಂದಾಗಿದೆ. ಬ್ಲಾಕ್ನ ಸದಸ್ಯ ರಾಷ್ಟ್ರಗಳ ವಿದೇಶಾಂಗ ಮಂತ್ರಿಗಳೊಂದಿಗೆ ಈ ವಿಷಯವನ್ನು ಚರ್ಚಿಸಿದ್ದೇನೆ ಮತ್ತು ಟೆಹ್ರಾನ್ ಪ್ರಮುಖ ಜಲಮಾರ್ಗಕ್ಕೆ ಪ್ರವೇಶವನ್ನು ನಿರ್ಬಂಧಿಸುವುದನ್ನು ಮುಂದುವರಿಸಿದರೆ ಆಕಸ್ಮಿಕ ಯೋಜನೆಗೆ ಬಲವಾದ ಬೆಂಬಲವನ್ನು ಪಡೆದಿದ್ದೇನೆ ಎಂದು ರೂಬಿಯೊ ಹೇಳಿದರು. "ಜಂಟಿಗಳು ತೆರೆದಿರುವ ಮತ್ತು ಅವರು ತಮ್ಮ ಪರಮಾಣು ಮಹತ್ವಾಕಾಂಕ್ಷೆಗಳನ್ನು ತ್ಯಜಿಸುವ ಇರಾನ್ನೊಂದಿಗಿನ ಒಪ್ಪಂದವನ್ನು ನೋಡಲು ನಾವೆಲ್ಲರೂ ಇಷ್ಟಪಡುತ್ತೇವೆ" ಎಂದು ರೂಬಿಯೊ ಹೇಳಿದರು. ಯಾವುದೇ ಪರ್ಯಾಯ ತಂತ್ರವು ಟ್ರಾನ್ಸ್ ಅಟ್ಲಾಂಟಿಕ್ ಬ್ಲಾಕ್ ಅನ್ನು ಔಪಚಾರಿಕ ಮೈತ್ರಿ ಕಾರ್ಯಾಚರಣೆಯಾಗಿ ಒಳಗೊಂಡಿಲ್ಲ, ಬದಲಿಗೆ ಹಾರ್ಮುಜ್ಗೆ ಸಂಬಂಧಿಸಿದ ನೇರ ವಾಣಿಜ್ಯ ಮತ್ತು ಇಂಧನ ಹಿತಾಸಕ್ತಿಗಳನ್ನು ಹೊಂದಿರುವ ರಾಷ್ಟ್ರಗಳನ್ನು ಒಳಗೊಂಡಿರುತ್ತದೆ ಎಂದು ರೂಬಿಯೊ ಒತ್ತಿ ಹೇಳಿದರು. ಇಸ್ಲಾಮಿಕ್ ಗಣರಾಜ್ಯವು ತನ್ನ ಪ್ರಸ್ತುತ ಕಠಿಣ ನಿಲುವನ್ನು ಮುಂದುವರೆಸಿದರೆ ಮತ್ತು ಮಾರ್ಗದ ಮೂಲಕ ಹಡಗು ಸಂಚಾರದ ಮೇಲೆ ನಿಯಂತ್ರಣವನ್ನು ಕಾಯ್ದುಕೊಂಡರೆ ಹೇಗೆ ಪ್ರತಿಕ್ರಿಯಿಸಬೇಕು ಎಂಬುದರ ಕುರಿತು ಆ ರಾಷ್ಟ್ರಗಳು "ಆಲೋಚಿಸಲು ಪ್ರಾರಂಭಿಸಬೇಕು" ಎಂದು ಅವರು ಹೇಳಿದರು. ಆದಾಗ್ಯೂ, ವಾಷಿಂಗ್ಟನ್‌ಗೆ ಜಲಸಂಧಿಯನ್ನು ಮತ್ತೆ ತೆರೆಯಲು ಅಥವಾ ಸಮುದ್ರ ಗಣಿಗಳನ್ನು ತೆರವುಗೊಳಿಸಲು ಸಹಾಯ ಅಗತ್ಯವಿಲ್ಲ ಎಂಬ ಟ್ರಂಪ್ ಆಡಳಿತದ ನಿಲುವನ್ನು ಅವರು ಪುನರುಚ್ಚರಿಸಿದರು, ಆದರೆ ಆಡಳಿತವು ಮಿತ್ರರಾಷ್ಟ್ರಗಳ ಸಹಾಯವನ್ನು ಸ್ವಾಗತಿಸುತ್ತದೆ ಎಂದು ಹೇಳಿದರು. ಯುಕೆ ಮತ್ತು ಫ್ರಾನ್ಸ್ ನೇತೃತ್ವದ ಯುರೋಪಿಯನ್ ಮಿತ್ರರಾಷ್ಟ್ರಗಳು ಹಾರ್ಮುಜ್ ಮೂಲಕ ವಾಣಿಜ್ಯ ಸಾಗಣೆಯನ್ನು ರಕ್ಷಿಸುವ ಗುರಿಯನ್ನು ಹೊಂದಿರುವ ಸಮುದ್ರ ಭದ್ರತಾ ಒಕ್ಕೂಟದ ರಚನೆಯ ಬಗ್ಗೆ ಚರ್ಚಿಸಲು ಪ್ರಾರಂಭಿಸಿವೆ. ಆದಾಗ್ಯೂ, ಇರಾನ್ ಯುದ್ಧಕ್ಕೆ ಸಂಬಂಧಿಸಿದ ಸಕ್ರಿಯ ಹಗೆತನಗಳು ಮುಗಿದ ನಂತರವೇ ಯಾವುದೇ ಮಿಲಿಟರಿ ಬೆಂಗಾವಲು ಅಥವಾ ನೌಕಾ ರಕ್ಷಣಾ ಕಾರ್ಯಾಚರಣೆಗಳು ಪ್ರಾರಂಭವಾಗುವ ಸಾಧ್ಯತೆಯಿದೆ ಎಂದು ಯುರೋಪಿಯನ್ ಅಧಿಕಾರಿಗಳು ಸೂಚಿಸಿದ್ದಾರೆ.

**ಟೆಹ್ರಾನ್‌ನ ಹಾರ್ಮುಜ್ ಜಲಸಂಧಿ ದಿಗ್ಬಂಧನವನ್ನು ಬಲಪಡಿಸುವಲ್ಲಿ ಪಾತ್ರ ವಹಿಸಿದ್ದಾರೆ ಎಂಬ ಆರೋಪದ ಮೇಲೆ ಇಗ ಸದಸ್ಯ ರಾಷ್ಟ್ರಗಳು ಇರಾನಿನ ಸಂಸ್ಥೆಗಳ ವಿರುದ್ಧ ಹೊಸ ನಿರ್ಬಂಧಗಳನ್ನು ಅಳವಡಿಸಿಕೊಂಡಿವೆ**

**ಕಾರ್ಯತಂತ್ರದ ಜಲಮಾರ್ಗದ ಕುರಿತು ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಪ್ರಮುಖ ಹಾರ್ಮುಜ್ ಜಲಸಂಧಿಯಲ್ಲಿ ಟೆಹ್ರಾನ್‌ನ ನಿರ್ಬಂಧಗಳನ್ನು ಬಲಪಡಿಸಲು ಸಹಾಯ ಮಾಡಿದ್ದಾರೆ ಎಂದು ಆರೋಪಿಸಿದ ನಂತರ, ಇಗ ಸದಸ್ಯ ರಾಷ್ಟ್ರಗಳು ಶುಕ್ರವಾರ ಇರಾನ್ ಅಧಿಕಾರಿಗಳು ಮತ್ತು ಸಂಸ್ಥೆಗಳ ವಿರುದ್ಧ ಹೊಸ ನಿರ್ಬಂಧಗಳ ಅಲೆಯನ್ನು ಅಳವಡಿಸಿಕೊಳ್ಳಲು ಮುಂದಾದವು. ಇರಾನ್ನ ಕ್ರಮಗಳನ್ನು "ಅಂತರರಾಷ್ಟ್ರೀಯ ಕಾನೂನಿಗೆ ವಿರುದ್ಧವಾಗಿದೆ" ಎಂದು ಟೀಕಿಸಿದ ಇಗ ಸರ್ಕಾರಗಳು, ಬ್ಲಾಕ್ನ ಅಸ್ತಿತ್ವದಲ್ಲಿರುವ ಇರಾನ್ ನಿರ್ಬಂಧಗಳ ಆಡಳಿತದ ವ್ಯಾಪ್ತಿಯನ್ನು ವಿಸ್ತರಿಸುವ ತಾಂತ್ರಿಕ ಕ್ರಮವನ್ನು ಅನುಮೋದಿಸಿವೆ, ಇದು ಹೆಚ್ಚುವರಿ ವ್ಯಕ್ತಿಗಳು ಮತ್ತು ಸಂಸ್ಥೆಗಳನ್ನು ಗುರಿಯಾಗಿಸಲು ಅನುವು ಮಾಡಿಕೊಡುತ್ತದೆ.**

**ಹಾರ್ಮುಜ್ ಜಲಸಂಧಿಯಲ್ಲಿ ಸಂಚರಣೆಯ ಸ್ವಾತಂತ್ರ್ಯವನ್ನು ದುರ್ಬಲಗೊಳಿಸುವ ಇರಾನ್ನ ಕ್ರಮಗಳಿಗೆ ಪ್ರತಿಕ್ರಿಯೆಯಾಗಿ ಇಗ ಈಗ ಮತ್ತಷ್ಟು ನಿರ್ಬಂಧಿತ ಕ್ರಮಗಳನ್ನು ಪರಿಚಯಿಸಲು ಸಾಧ್ಯವಾಗುತ್ತದೆ" ಎಂದು ಯುರೋಪಿಯನ್ ಕೌನ್ಸಿಲ್ ಹೇಳಿಕೆಯಲ್ಲಿ ತಿಳಿಸಿದೆ.**

# ಚೀನಾದ ಕಲ್ಲಿದ್ದಲು ಗಣಿಯಲ್ಲಿ ಸ್ಫೋಟ: 90 ಮಂದಿ ಸಾವು




**ಬೀಜಿಂಗ್, ಮೇ 23:** ಉತ್ತರ ಚೀನಾದ ಕಲ್ಲಿದ್ದಲು ಗಣಿಯಲ್ಲಿ ಸಂಭವಿಸಿದ ಸ್ಫೋಟದಲ್ಲಿ 90 ಮಂದಿ ಮೃತಪಟ್ಟಿದ್ದಾರೆ. ಇದು ಕಳೆದ 17 ವರ್ಷಗಳಲ್ಲಿ ಚೀನಾದಲ್ಲಿ ನಡೆದ ಅತಿದೊಡ್ಡ ಗಣಿಗಾರಿಕೆ ದುರಂತವಾಗಿದೆ ಎಂದು ವರದಿಯಾಗಿದೆ.

ಚೀನಾದ ಶಾಂಕ್ಸಿ ಪ್ರಾಂತ್ಯದ ಲಿಯುಶೆನ್ಯು ಕಲ್ಲಿದ್ದಲು ಗಣಿಯಲ್ಲಿ ಶುಕ್ರವಾರ ರಾತ್ರಿ 7.29ರ ಸುಮಾರಿಗೆ ಸ್ಫೋಟ ಸಂಭವಿಸಿದೆ. ಗ್ಯಾಸ್‌ಸ್ಫೋಟದ ವೇಳೆ ಸ್ಥಳದಲ್ಲಿ ಒಟ್ಟು 247 ಕಾರ್ಮಿಕರು ಕೆಲಸ ಮಾಡುತ್ತಿದ್ದರು. ' ಇವರಲ್ಲಿ ಬಹುತೇಕ ಜನರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಇನ್ನೂ 9 ಮಂದಿ ನಾಪತ್ತೆಯಾಗಿದ್ದು, ಅವರ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ಚೀನಾದ ಮಾಧ್ಯಮ ಸಂಸ್ಥೆ ವರದಿ ಮಾಡಿದೆ. ಶುಕ್ರವಾರದ ಸಂಭವಿಸಿದ ಸ್ಫೋಟವು 2009ರ ನಂತರ ಚೀನಾದಲ್ಲಿ ಸಂಭವಿಸಿದ ಅತ್ಯಂತ ಭೀಕರ ಗಣಿಗಾರಿಕೆ ದುರಂತವಾಗಿದೆ. 2009ರಲ್ಲಿ ಈಶಾನ್ಯ ಹೈಲಾಂಗ್ಜಿಯಾಂಗ್ ಪ್ರಾಂತ್ಯದಲ್ಲಿ ಗಣಿಸ್ಫೋಟದಲ್ಲಿ 108 ಜನರು ಮೃತಪಟ್ಟಿದ್ದರು.

# ಏಷ್ಯಾ ಅಂಡರ್-15 ಬಾಕ್ಸಿಂಗ್: ಚಿನ್ನ ಗೆದ್ದ ಕಾಶ್ಮೀರದ ಪೋರ



**ನವದೆಹಲಿ, ಮೇ 23:** ಉಜ್ಬೇಕಿಸ್ತಾನದಲ್ಲಿ ನಡೆದ ಏಷ್ಯಾ ಅಂಡರ್–15 ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಜಮ್ಮು ಮತ್ತು ಕಾಶ್ಮೀರದ 13 ವರ್ಷದ ಯುವ ಬಾಕ್ಸರ್ ಮೊಹಮ್ಮದ್ ಯಾಸಿರ್ ಚಿನ್ನದ ಪದಕ ಗೆಲ್ಲುವ ಮೂಲಕ ಐತಿಹಾಸಿಕ ಸಾಧನೆ ಮಾಡಿದ್ದಾರೆ.


ರಾಜೌರಿಯ ಖೇಲೋ ಇಂಡಿಯಾ ಕೇಂದ್ರದಲ್ಲಿ ತರಬೇತಿ ಪಡೆಯುತ್ತಿದ್ದ ಈ ಯುವ ಬಾಕ್ಸರ್‌ನ ಅಪ್ರತಿಮ ಗೆಲುವಿನ ಬೆನ್ನಲ್ಲೇ, ಜಮ್ಮು ಮತ್ತು ಕಾಶ್ಮೀರದಲ್ಲಿರುವ ಖೇಲೋ ಇಂಡಿಯಾ ತರಬೇತಿ ಕೇಂದ್ರಗಳತ್ತ ಇಡೀ ದೇಶದ ಗಮನ ನೆಟ್ಟಿದೆ.

ಈ ಟೂರ್ನಿಯ 58 ಕೆಜಿ ವಿಭಾಗದ ಫೈನಲ್ ಪಂದ್ಯದಲ್ಲಿ ಯಾಸಿರ್ ಆತಿಥೇಯ ಉಜ್ಬೇಕಿಸ್ತಾನದ ಬಾಕ್ಸರ್ ಅನ್ನು 4–1 ಅಂತರದಿಂದ ಸೋಲಿಸಿ ಬಂಗಾರದ ಪದಕ ಮುಡಿಗೇರಿಸಿಕೊಂಡಿದ್ದರು. ಇದಕ್ಕೂ ಮುನ್ನ ನಡೆದ ಪಂದ್ಯಗಳಲ್ಲಿ ಆತ ತಜಕಿಸ್ತಾನ, ಕಜಕಿಸ್ತಾನ ಮತ್ತು ಇರಾನ್ ದೇಶದ ಬಲಿಷ್ಠ ಬಾಕ್ಸರ್‌ಗಳನ್ನೂ ಮಣಿಸಿದ್ದರು. ಯಾಸಿರ್‌ನ ಈ ಯಶಸ್ಸನ್ನು ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಉಮರ್ ಅಬ್ದುಲ್ಲಾ ಮುಕ್ತಕಂಠದಿಂದ ಶ್ಲಾಘಿಸಿದ್ದು, ಈ ಗೆಲುವು ನಮ್ಮ ಪ್ರದೇಶದಿಂದ ಹೊರಹೊಮ್ಮುತ್ತಿರುವ ಅಪಾರ ಕ್ರೀಡಾ ಪ್ರತಿಭೆಗೆ ಸಾಕ್ಷಿಯಾಗಿದೆ ಎಂದಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ಸ್ಥಾಪಿಸಲಾಗಿರುವ 100ಕ್ಕೂ ಹೆಚ್ಚು ಖೇಲೋ ಇಂಡಿಯಾ ಕೇಂದ್ರಗಳು ಇಂದು ಅಲ್ಲಿನ ಯುವ ಪೀಳಿಗೆಯ ಪಾಲಿಗೆ ಗೇಮ್ ಚೇಂಜರ್ ಆಗಿ ಹೊರಹೊಮ್ಮುತ್ತಿವೆ. ತಳಮಟ್ಟದ ಅತ್ಯಾಧುನಿಕ ಮೂಲಸೌಕರ್ಯಗಳು ಮತ್ತು ಹೊನಲು ಬೆಳಕಿನ ಕ್ರೀಡಾಂಗಣಗಳು ದೂರದ ಹಳ್ಳಿಗಳಲ್ಲಿದ್ದ ಪ್ರತಿಭೆಗಳನ್ನೂ ಮೈದಾನಕ್ಕೆ ಸೆಳೆಯುತ್ತಿವೆ.ಈ ಕುರಿತು ಮಾತನಾಡಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಮಿಷನರ್ ಸೆಕ್ರೆಟರಿ ಡಾ. ಶಾಹಿದ್ ಇಕ್ಬಾಲ್ ಚೌಧರಿ, ಜಮ್ಮು ಮತ್ತು ಕಾಶ್ಮೀರ ಸರ್ಕಾರವು ಕ್ರೀಡಾ ವ್ಯವಸ್ಥೆಯನ್ನು ಬಲಪಡಿಸಲು ಬದ್ಧವಾಗಿದ್ದು, ನಮ್ಮ ಕ್ರೀಡಾಪಟುಗಳು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಿಂಚಲು ಉತ್ತಮ ಅವಕಾಶಗಳು, ಅತ್ಯಾಧುನಿಕ ಮೂಲಸೌಕರ್ಯ ಹಾಗೂ ಸೂಕ್ತ ಮಾರ್ಗದರ್ಶನವನ್ನು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಅಧಿಕೃತ ಅಂಕಿ–ಅಂಶಗಳ ಪ್ರಕಾರ, 2021 ರಿಂದ ಜಮ್ಮು ಮತ್ತು ಕಾಶ್ಮೀರಕ್ಕೆ ದೇಶದಲ್ಲೇ ಅತಿ ಹೆಚ್ಚು ಅಂದರೆ 100 ಖೇಲೋ ಇಂಡಿಯಾ ಕೇಂದ್ರಗಳನ್ನು ಮಂಜೂರು ಮಾಡಲಾಗಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಕುಪ್ವಾರಾ, ಬಂಡಿಪೋರಾ, ಬಾರಾಮುಲ್ಲಾ, ಶೋಪಿಯಾನ್, ಬುದ್ಗಾಮ್, ಗಂದೇರ್‌ಬಾಲ್, ಕುಲ್ಗಾಮ್, ಅನಂತನಾಗ್, ರಾಜೌರಿ, ಪೂಂಚ್, ದೋಡಾ, ಭದ್ರವಾ, ಕಿಸ್ತ್ವಾರ್ ಮತ್ತು ರಾಂಬನ್ನಂತಹ ದೂರದ ಜಿಲ್ಲೆಗಳಲ್ಲಿ ಕ್ರೀಡಾ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸಲಾಗಿದೆ. ಜಮ್ಮು–ಕಾಶ್ಮೀರ ಮತ್ತು ಲಡಾಖ್‌ನಲ್ಲಿ ಸದ್ಯ 22 ಒಳಾಂಗಣ ಕ್ರೀಡಾಂಗಣಗಳು, ಸಿಂಥೆಟಿಕ್ ಟರ್ಫ್‌ಗಳು ಮತ್ತು ಹೊನಲು ಬೆಳಕಿನ ಮೈದಾನಗಳಿದ್ದು, ತಡರಾತ್ರಿಯವರೆಗೂ ಕ್ರೀಡಾ ಚಟುವಟಿಕೆಗಳು ನಡೆಯುತ್ತವೆ. ಪ್ರಸ್ತುತ 3,300 ಯುವಕ–ಯುವತಿಯರು ಈ ಕೇಂದ್ರಗಳಲ್ಲಿ ಉಚಿತ ತರಬೇತಿ ಪಡೆಯುತ್ತಿದ್ದು, ಆಧುನಿಕ ಕ್ರೀಡಾ ಕಿಟ್‌ಗಳು ಮತ್ತು ತರಬೇತುದಾರರ ಸೌಲಭ್ಯವನ್ನು ಹೊಂದಿದ್ದಾರೆ

# ಶ್ರೇಯಸ್ ಶತಕ; ಪಂಜಾಬ್ ಕಿಂಗ್ಸ್ ಪ್ಲೇಆಫ್ ಆಸೆ ಜೀವಂತ



**ಲಖನೌ, ಮೇ 23:** ಐಪಿಎಲ್ 68ನೇ ಪಂದ್ಯದಲ್ಲಿ, ಲಖನೌ ಸೂಪರ್ ಜೈಂಟ್ಸ್ ತಂಡವು ಲಖನೌದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಪಂಜಾಬ್ ಕಿಂಗ್ಸ್ ತಂಡವನ್ನು ಎದುರಿಸಿತ್ತು. ಪ್ಲೇಆಫ್ ದೃಷ್ಟಿಯಿಂದ ಈ ಪಂದ್ಯ ಪಂಜಾಬ್ ಕಿಂಗ್ಸ್‌ಗೆ ಬಹುಮುಖ್ಯವಾಗಿತ್ತು. ಅದರಂತೆ ಗೆಲ್ಲಲೇಬೇಕಾದ ಪಂದ್ಯದಲ್ಲಿ ಲಖನೌ ತಂಡವನ್ನು ಮಣಿಸಿದ ಪಂಜಾಬ್ ತಂಡ ತನ್ನ ಪ್ಲೇಆಫ್ ಆಸೆಯನ್ನು ಜೀವಂತವಾಗಿರಿಸಿಕೊಂಡಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಲಕ್ನೋ ತಂಡ 197 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಪಂಜಾಬ್ ತಂಡ ನಾಯಕ ಶ್ರೇಯಸ್ ಅಯ್ಯರ್ ಅವರ ಅಬ್ಬರದ ಬ್ಯಾಟಿಂಗ್‌ನಿಂದ ಸುಲಭವಾಗಿ ಜಯ ಸಾಧಿಸಿತು.

### ಇಂಗ್ಲಿಸ್– ಬದೋನಿ ಜೊತೆಯಾಟ

ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಲಖನೌ ಸೂಪರ್ ಜೈಂಟ್ಸ್ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಯುವ ಆರಂಭಿಕ ಬ್ಯಾಟರ್ ಕುಲಕರ್ಣಿ ಸೊನ್ನೆಗೆ ವಿಕೆಟ್ ಒಪ್ಪಿಸಿದರು. ಆ ಬಳಿಕ ಜೊತೆಯಾದ ಆಯುಷ್ ಬಡೋನಿ ಮತ್ತು ಜೋಶ್ ಇಂಗ್ಲಿಸ್ ಆಕ್ರಮಣಕಾರಿಯಾಗಿ ಆಡಿದರು. ಜೋಶ್ ಇಂಗ್ಲಿಸ್ 44 ಎಸೆತಗಳಲ್ಲಿ ಒಂಬತ್ತು ಬೌಂಡರಿ ಮತ್ತು ಎರಡು ಸಿಕ್ಸರ್‌ಗಳನ್ನು ಒಳಗೊಂಡಂತೆ 77 ರನ್ ಬಾರಿಸಿದರೆ, ಆಯುಷ್ ಬಡೋನಿ ಕೇವಲ 18 ಎಸೆತಗಳಲ್ಲಿ 238.88 ಸ್ಟ್ರೈಕ್ ರೇಟ್‌ನಲ್ಲಿ 43 ರನ್ ಗಳಿಸಿ ಐದು ಬೌಂಡರಿ ಮತ್ತು ಮೂರು ಅಮೋಘ ಸಿಕ್ಸರ್‌ಗಳನ್ನು ಒಳಗೊಂಡಂತೆ ಅಬ್ಬರದ ಇನ್ನಿಂಗ್ಸ್ ಆಡಿದರು. ನಂತರ ಅಬ್ದುಲ್ ಸಮದ್ ಅಜೇಯ 37 ರನ್ ಗಳಿಸಿದರೆ, ರಿಷಭ್ ಪಂತ್ 26 ರನ್ ಗಳಿಸುವ ಮೂಲಕ ತಂಡವನ್ನು 196 ರನ್‌ಗಳಿಗೆ ಕೊಂಡೊಯ್ಯುವಲ್ಲಿ ಪ್ರಮುಖ ಪಾತ್ರವಹಿಸಿದರು.

### ಶ್ರೇಯಸ್ ಶತಕ

ಬೃಹತ್ ಗುರಿಯನ್ನು ಬೆನ್ನಟ್ಟಿದ ಪಂಜಾಬ್‌ಗೂ ಇನ್ನಿಂಗ್ಸ್‌ನ ಮೊದಲ ಎಸೆತದಲ್ಲೇ ಆಘಾತ ಎದುರಾಯಿತು. ಆರಂಭಿಕ ಪ್ರಿಯಾಂಶ್ ಆರ್ಯ ಮೊದಲ ಎಸೆತದಲ್ಲೇ ಔಟಾದರು. ಕೊನೊಲಿ ಕೂಡ ಹೆಚ್ಚು ಹೊತ್ತು ಮೈದಾನದಲ್ಲಿ ನಿಲ್ಲಲಿಲ್ಲ. ಹೀಗಾಗಿ ಪಂಜಾಬ್ ಕೇವಲ 22 ರನ್‌ಗಳಿಗೆ ಎರಡು ವಿಕೆಟ್‌ಗಳನ್ನು ಕಳೆದುಕೊಂಡಿತ್ತು. ಆದರೆ ಆ ಬಳಿಕ ಜೊತೆಯಾದ ಶ್ರೇಯಸ್ ಅಯ್ಯರ್ ಮತ್ತು ಪ್ರಭ್ಸಿಮ್ರಾನ್ ಸಿಂಗ್ ಅದ್ಭುತ ಬ್ಯಾಟಿಂಗ್ ನಡೆಸಿ ತಂಡವನ್ನು ಗೆಲುವಿನ ಹಳಿಗೆ ತಂದರು. ಪ್ರಭ್ಸಿಮ್ರಾನ್ ಸಿಂಗ್ 39 ಎಸೆತಗಳಲ್ಲಿ 69 ರನ್ ಗಳಿಸಿದರೆ, ಶ್ರೇಯಸ್ ಅಯ್ಯರ್ 51 ಎಸೆತಗಳಲ್ಲಿ 101 ರನ್ ಗಳಿಸಿ ಅಜೇಯರಾಗಿ ಉಳಿದರು. ಇವರಿಬ್ಬರ ಆಟದಿಂದಾಗಿ ಪಂಜಾಬ್ ಕೇವಲ 18 ಓವರ್‌ಗಳಲ್ಲಿ ಗುರಿ ತಲುಪಿತು.

**ಶನಿವಾರ**




**ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ಶನಿವಾರ ನಡೆದ ನೀತಿ ಎಕ್ಸ್‌ಟ್ರೀಮ್ ಅಲ್ಟ್ರಾ ರನ್‌ಗೆ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಚಾಲನೆ ನೀಡಿದರು.**

ಅನ್ನಭಾಗ್ಯ
ಪ್ರತಿ ತಿಂಗಳು ಪಡಿತರದಾರರಿಗೆ
10 ಕೆಜಿ ಉಚಿತ ಆಹಾರಧಾನ್ಯ

ಯಾರೂ ಹಸಿವಿನಿಂದ ಮಲಗಬಾರದು ಎಂಬ ಸಂಕಲ್ಪದೊಂದಿಗೆ, ಕೋಟ್ಯಂತರ ಕುಟುಂಬಗಳಿಗೆ ಪೌಷ್ಟಿಕ ಆಹಾರದ ಭದ್ರತೆ ನೀಡುವ ಮೂಲಕ
ಕರ್ನಾಟಕದ ಗ್ಯಾರಂಟಿ ಸರ್ಕಾರವು ಕಳೆದ ಮೂರು ವರ್ಷಗಳಿಂದ ಆರೋಗ್ಯವಂತ ಸಮಾಜಕ್ಕೆ ಆಧಾರವಾಗಿದೆ

ಅನ್ನಭಾಗ್ಯ ಯೋಜನೆಯಡಿ
ಉಚಿತ ಆಹಾರಧಾನ್ಯ ವಿತರಿಸಲು ಈವರೆಗೆ
₹18,897 ಕೋಟಿ
ವೆಚ್ಚ ಮಾಡಲಾಗಿದ್ದು, ಹಸಿವು ಮುಕ್ತ ಕರ್ನಾಟಕದ
ಗುರಿಯನ್ನು ತಲುಪಿದ್ದೇವೆ
ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು

ಅನ್ನಭಾಗ್ಯ
ಯೋಜನೆಯಡಿ
4.26 ಕೋಟಿ
ಪಡಿತರದಾರರು (ಪ್ರತಿ ತಿಂಗಳು) ಮೂರು
ಹೊತ್ತು ನೆಮ್ಮದಿಯಿಂದ ಊಟ ಮಾಡುತ್ತಿದ್ದಾರೆ
ಡಿ ಕೆ ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

'ಅನ್ನಭಾಗ್ಯ'ದಿಂದಾಗಿರುವ
ಬದಲಾವಣೆ ತಿಳಿಯಲು
ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ

ಶಕ್ತಿ  ಗೃಹ ಜ್ಯೋತಿ  ಗೃಹಲಕ್ಷ್ಮಿ  ಯುವನಿಧಿ
CMofKarnataka  https://dipr.karnataka.gov.in/
ಕರ್ನಾಟಕ ವಾರ್ತೆ



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರೊಂದಿಗೆ
ಮಾನ್ಯ ಸಚಿವರಾದ ಶ್ರೀ ಕೆ.ಹೆಚ್. ಮುನಿಯಪ್ಪರವರು
ಅನ್ನಭಾಗ್ಯ ಯೋಜನೆಗೆ ಚಾಲನೆ ನೀಡುತ್ತಿರುವುದು